ಸಂಪುಟ: ೦೭/ ಸಂಚಿಕೆ: ೧೬೭/ ಗುರುವಾರ ದಿನಾಂಕ : ೨೧-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 167/ THURSDAY Date : 21-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಗೋಕಾಕಸ ಮುಳುಗಡೆ ಪ್ರದೇಶಕ್ಕೆ ಜಿಲ್ಲಾಧಿಕಾರಿ ಭೇಟಿ

# ಹೊಸ ಸೇತುವೆ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ: ಜಿಲ್ಲಾಧಿಕಾರಿ



**ಬೆಳಗಾವಿ,** : ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಗೋಕಾಕ್ ನಗರದ ಲೋಳಸೂರ ಸೇತುವೆ ಸಂಪೂರ್ಣ ಮುಳುಗಡೆಯಾಗಿದ್ದು, ಬುಧವಾರ (ಆ.20) ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಮುಳುಗಡೆ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಜಿಲ್ಲಾಧಿಕಾರಿ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಮುಳುಗಡೆಯಾಗಿರುವ ಸೇತುವೆಗಳನ್ನು ಸಮೀಕ್ಷೆ ನಡೆಸಿ, ಹೊಸ ಸೇತುವೆ ನಿರ್ಮಾಣಕ್ಕೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು. ನದಿ ತೀರದ ಗ್ರಾಮಗಳಲ್ಲಿ ಮುಳುಗಡೆ ಪ್ರದೇಶದ ಜನರನ್ನು ಸ್ಥಳಾಂತ-ರಿಸಲು ಈಗಾಗಲೇ ಸೂಚನೆ ನೀಡಲಾಗಿದೆ ಎಂದರು.

ಕೊಯ್ನಾ ಜಲಾಶಯ ಮತ್ತು ಪಂಚಗಂಗಾ ನದಿಯಿಂದ 12 ಸಾವಿರ ಕ್ಯೂಸೆಕ್ಸ್ ನೀರು ಸಂಗ್ರಹಣೆಯಾಗಿ ಹರಿಯುತ್ತಿದೆ ಅಲ್ಲಿಂದ ಧೂದಗಂಗಾ-ವೇದಗಂಗಾ ಜೋಡಣೆಯಾಗಿ 1 ಲಕ್ಷ 48 ಸಾವಿರ ಕ್ಯೂಸೆಕ್ಸ್ ನೀರು ಕೃಷ್ಣ ನದಿಗೆ ಬಂದಿದೆ.

ಸದ್ಯಕ್ಕೆ ಹಿಪ್ಪರಗಿ ಬ್ಯಾರೇಜ್ ಹತ್ತಿರ 1 ಲಕ್ಷ 12 ಸಾವಿರ ನೀರು ಹರಿದು ಆಲಮಟ್ಟಿ ಜಲಾಶಯ ಸೇರಲಿದ್ದು ಈಗಾಗಲೇ ಮುಖ್ಯ ಇಂಜಿನಿಯರ್ ಗೆ ಮಾಹಿತಿ ನೀಡಲಾಗಿದೆ. ಆಲಮಟ್ಟಿ ಜಲಾಶಯದಿಂದ ಹೆಚ್ಚು ಸಂಗ್ರಹಣೆಯಾದ ನೀರನ್ನು ಈಗಾಗಲೇ ಬಿಡುಗಡೆ ಮಾಡಲಾಗುತ್ತಿದೆ.

ಹಿಡಕಲ್ ಜಲಾಶಯದಿಂದ 36 ಸಾವಿರ ಕ್ಯೂಸೆಕ್ಸ್ ನೀರು ಬಿಡುಗಡೆ ಮಾಡಲಾಗುತ್ತಿದೆ. ರೈತರಿಗೆ ತೊಂದರೆಯಾಗಿದಂತೆ ಹಂತ ಹಂತವಾಗಿ ಮುನ್ನೆಚ್ಚರಿಕೆ ವಹಿಸಿಕೊಂಡು ನೀರು ಬಿಡುಗಡೆ ಸೂಚಿಸಲಾಗಿದೆ. ಮುಳುಗಡೆಯಾಗಿರುವ ಲೋಳಸೂರು ಸೇತುವೆ ಮೇಲೆ ಜನರು ಸಂಚರಿಸಿದಂತೆ ಬ್ಯಾರಿಕೇಡ್ ಹಾಕಿ ತಹಶೀಲ್ದಾರ್ ಅವರಿಂದ ಸ್ಥಳೀಯರಿಗೆ ಸೂಚನೆ ನೀಡಲಾಗಿದೆ. ಮಳೆ ಪ್ರಮಾಣ ಸ್ವಲ್ಪ ಕಡಿಮೆಯಾದರೂ ಸಹ ಮುಂಜಾಗೃತಿಯಿಂದ 2 ದಿನ ರೆಡ್ ಅಲರ್ಟ್ ಘೋಷಿಸಲಾಗಿದೆ.

**ತಕ್ಷಣ ಪರಿಹಾರಕ್ಕೆ ಸೂಚನೆ:** ನದಿ ಬದಿಯಲ್ಲಿರುವ ರೈತರು ಎಚ್ಚ-ರಿಕೆಯಿಂದ ಇರಬೇಕು. ಗೋಕಾಕ್ ನಲ್ಲಿ ಶಿಥಿಲಾವಸ್ಥೆಯಲ್ಲಿರುವ ಮನೆ ಬಿದ್ದು 57 ವರ್ಷದ ಮಹಿಳೆ ಮೃತರಾಗಿದ್ದು, ಸ್ಥಳೀಯ ಶಾಸಕರ ಗಮನಕ್ಕೆ ತಂದು ಜಿಲ್ಲಾಡಳಿತದಿಂದ ತಕ್ಷಣವೇ ಪರಿಹಾರ ಬಿಡುಗಡೆ ತಿಳಿಸಲಾಗಿದೆ.

ಮೃತ ಮಹಿಳೆಯ ಸಂಬಂಧಿಕರು ಗಾಯಗೊಂಡಿದ್ದು, ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ವಿಪತ್ತು ನಿರ್ವಹಣಾ ಪಾಧಿಕಾರದ ವತಿಯಿಂದ ಪರಿಹಾರ ಕೂಡ ನೀಡಲಾಗುತ್ತಿದೆ ತಿಳಿಸಿದರು.

ಜಿಲ್ಲೆಯಲ್ಲಿ ಎಸ್.ಡಿ.ಆರ್.ಎಫ್-ಎನ್.ಡಿ.ಆರ್.ಎಫ್ ತಂಡಗಳನ್ನು ಸಿದ್ದ ಮಾಡಿಕೊಳ್ಳಲಾಗಿದೆ. ಈಗಾಗಲೇ ಎಲ್ಲ ಪರಿಹಾರ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗುತ್ತಿದೆ. ಲೋಳಸುರ ಸೇತುವೆ ಮುಳುಗಡೆಯ ನೀರಿನ ಪ್ರಮಾಣದಿಂದ ಗೋಕಾಕ್ ನಲ್ಲಿ ಸರಿಸುಮಾರು 200 ಮನೆಗಳಿಗೆ ತೊಂದರೆಯಾಗಿದೆ.

ಪರಿಹಾರ ಕೇಂದ್ರಕ್ಕೆ ಬರುವವರನ್ನು ಸ್ಥಳಾಂತರಿಸಿ, ನಿಯೋಜಿತ ಅಧಿಕಾ-ರಿಗಳು ಪರಿಹಾರ ಕೇಂದ್ರಕ್ಕೆ ಭೇಟಿ ನೀಡಿ ಸೌಕರ್ಯಗಳನ್ನು ಒದಗಿಸುತ್ತಿದ್ದಾರೆ. ಕೃಷ್ಣ ನದಿ 1.5 ಲಕ್ಷ ಕ್ಯೂಸೆಕ್ಸ್ ನೀರು ಪ್ರಮಾಣ ದಾಟಿದ ನಂತರ ಪ್ರವಾಹ ಎದುರಾಗುವ ಸಂಭವವಿದೆ. ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ ವ್ಯಾಪ್ತಿಯ ಜನರನ್ನು ಸ್ಥಳಾಂತರ ಮಾಡಲಾಗಿದೆ ಎಂದು ಹೇಳಿದರು

ಒಟ್ಟು ಜಿಲ್ಲೆಯಲ್ಲಿ 550 ಕೇಂದ್ರಗಳನ್ನು ಸಿದ್ಧಪಡಿಸಿಕೊಳ್ಳಗಿದೆ. ಅದರಲ್ಲಿ 63 ಕೇಂದ್ರಗಳ ಅವಶ್ಯಕತೆ ಬರಬಹುದು ಆದರೆ ಈಗ ಸದ್ಯಕ್ಕೆ ಗೋಕಾಕ ಮತ್ತು ನಿಪ್ಪಣಿಯಲ್ಲಿ ಮಾತ್ರ 2 ಕಾಳಜಿ ಕೇಂದ್ರಗಳು ಮಾತ್ರ ಕಾರ್ಯ ನಿರ್ವಹಿಸುತ್ತಿವೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಮಾಹಿತಿ ನೀಡಿದರು.

**ಕಾಳಜಿ ಕೇಂದ್ರಕ್ಕೆ ಭೇಟಿ:** ಬಳಿಕ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಕಾಳಜಿ ಕೇಂದ್ರಕ್ಕೆ ಭೇಟಿ ನೀಡಿ, ಕುಡಿಯುವ ನೀರು, ಆಹಾರ, ವಸತಿ, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳು ಒದಗಿಸಿರುವ ಕುರಿತು ಪರಿಶೀಲಿಸಿ, ಶಾಶ್ವತ ಮನೆ ಇಲ್ಲದ ನೆರೆಯ ಸಂತ್ರಸ್ತರಿಗೆ ಮನೆ ಮಂಜೂರು ಮಾಡಿ ಕೊಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿನವ ಜೈನ್, ತಹಶೀಲ್ದಾರ್ ಮೋಹನ್ ಭಸ್ಮೆ, ನ್ಯೂಡಲ್ ಅಧಿಕಾರಿ ಬಸವರಾಜ ಕು-ರಿಹುಲಿ, ತಾಲೂಕಾ ಆರೋಗ್ಯಾಧಿಕಾರಿ ಮುತ್ತಣ್ಣ ಕೊಪ್ಪದ ಸೇರಿದಂತೆ ವಿವಿಧ ಅಧಿಕಾರಿಗಳು ಹಾಜರಿದ್ದರು.



## ಪ್ರವಾಹ ಪರಿಸ್ಥಿತಿ ಸಮರ್ಪಕ ನಿರ್ವಹಣೆಗೆ ಪ್ರಾದೇಶಿಕ ಆಯುಕ್ತರ ಸೂಚನೆ



**ಬೆಳಗಾವಿ,** : ಪ್ರಸ್ತುತ ಮಳೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಬೆಳಗಾವಿ ಕಂದಾಯ ವಿಭಾಗದ ಜಿಲ್ಲಾಧಿಕಾ-ರಿಗಳಿಗೆ ಬೆಳಗಾವಿ ಪ್ರಾದೇಶಿಕ ಆಯುಕ್ತರಾದ ಜಾನಕಿ.ಕೆ.ಎಂ ಅವರು ನಿರ್ದೇಶನ ನೀಡಿದರು.

ಬೆಳಗಾವಿ ಪ್ರಾದೇಶಿಕ ಆಯುಕ್ತರ ಕಚೇರಿಯಲ್ಲಿ ಬುಧವಾರ (ಆ.20) ಜರುಗಿದ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕ ನಿರ್ವಹಣೆ ಕುರಿತಂತೆ ಜರುಗಿದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅತಿಯಾದ ಮಳೆಯಿಂದಾಗಿ ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮ ಪಂಚಾಯತಗಳಲ್ಲಿನ ವಿಪತ್ತು ನಿರ್ವಹಣಾ ಸಮಿತಿಗಳನ್ನು ಜರುಗಿಸಿ ಪ್ರವಾಹ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮ ಹಾಗೂ ಸಾರ್ವಜನಿಕರಲ್ಲಿ ಅರಿವು ಮೂಡಿಸುವಂತೆ ತಿಳಿಸಿದರು.

ಮನೆ ಹಾನಿ, ಬೆಳೆಹಾನಿ ಪ್ರದೇಶಗಳಲ್ಲಿನ ಸಮೀಕ್ಷಾ ಕಾರ್ಯವನ್ನು ತ್ವರಿತವಾಗಿ ನಡೆಸಿ ಪರಿಹಾರ ವಿತರಣೆಗೆ ಕ್ರಮವಹಿಸಬೇಕು. ರಸ್ತೆ, ಸೇತುವೆ ಮತ್ತು ಇತರ ಮೂಲಭೂತಗಳ ಸೌಕರ್ಯಗಳಿಗೆ ಹಾನಿಯಾಗಿರುವ ಬಗ್ಗೆ ಸಮೀಕ್ಷೆ ಜರುಗಿಸಿ ಸರ್ಕಾರಕ್ಕೆ ವರದಿ ನೀಡಲು ಕ್ರಮ ವಹಿಸಬೇಕು. ಎಲ್ಲ ಹಂತದ ಅಧಿಕಾರಿಗಳು ತುರ್ತು ಸಂದರ್ಭ ಹೊರತು ಪಡಿಸಿ ರಜೆ ಮೇಲೆ ತೆರಳತಕ್ಕದ್ದಲ್ಲ ಮತ್ತು ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಎಂದು ತಿಳಿಸಿದರು. ಕಾಳಜಿ ಕೇಂದ್ರಗಳಲ್ಲಿ ಸಂತ್ರಸ್ಥರಿಗೆ ಅಗತ್ಯವಾದ ಸೌಲಭ್ಯವನ್ನು ನೀಡಲು ಸೂಕ್ತ ವ್ಯವಸ್ಥೆ ಮಾಡುವುದು ಹಾಗೂ ಪ್ರತಿಯೊಂದು ಜಿಲ್ಲಾಧಿಕಾರಿ ಕಚೇರಿ,ಸಹಾಯಕ ಆಯುಕ್ತರು,ತಹಶೀಲ್ದಾರ ಕಚೇರಿಯಲ್ಲಿ ಸಹಾಯ ವಾಣಿ ಕೇಂದ್ರಗಳನ್ನು ಸ್ಥಾಪಿಸಿ 24ಥ7 ರಂತೆ ತಂಡಗಳನ್ನು ರಚಿಸಿ ಕಾರ್ಯನಿರ್ವಹಿಸಲು ತಿಳಿಸಿದರು.

ಜಿಲ್ಲಾಧಿಕಾರಿಗಳು ಮಳೆ, ಪ್ರವಾಹ ಸಂದರ್ಭಾನುಸಾರ ಜಿಲ್ಲಾ ವಿಪತ್ತು ನಿರ್ವಹಣ ಸಭೆಗಳನ್ನು ಜರುಗಿಸಿ ಅಧಿಕಾ-ರಿಗಳಿಗೆ ಸೂಕ್ತ ನಿರ್ದೇಶನಗಳನ್ನು ನೀಡಬೇಕು. ಬೆಳಗಾವಿ ವಿಭಾಗದ ಪ್ರತಿಯೊಂದು ಜಿಲ್ಲೆಯಲ್ಲಿ ತಾಲ್ಲೂಕುಗಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೊಡಲ್ ಅಧಿಕಾರಿಗಳನ್ನಾಗಿ ನೇಮಿಸಿ ಅವರಿಗೆ ಹೆಚ್ಚಿನ ಜವಾಬ್ದಾರಿಯನ್ನು ವಹಿಸಬೇಕು.

ಆಯಾ ಜಿಲ್ಲೆಯಲ್ಲಿ ಈಗಾಗಲೇ ಮುಂಗಾರು ಪ್ರಾರಂಭವಾಗುವ ಮುಂಚೆ ಗುರುತಿಸಲಾದ ಶಿಥಿಲಗೊಂಡ ಶಾಲಾ ಕೊಠಡಿಗಳು/ಅಂಗನವಾಡಿ ಕೇಂದ್ರಗಳಲ್ಲಿನ ಶಾಲಾ ಮಕ್ಕಳನ್ನು ತಾತ್ಕಾಲಿಕವಾಗಿ ಬೇರೆ ಸುಸಜ್ಜಿತ ಕೊಠಡಿಗಳಿಗೆ ಸ್ಥಳಾಂತರಿಸಬೇಕು.

ಮಳೆ/ಪ್ರವಾಹ ಸಂದರ್ಭದಲ್ಲಿ ಮುನ್ನೆಚ್ಚರಿಕೆ ಹಿನ್ನಲೆಯಲ್ಲಿ ಅಗ್ನಿಶಾಮಕ ತಂಡಗಳ ಕಾರ್ಯನಿರ್ವಹಣೆಗೆ ಸಾರ್ವಜನಿಕರ ತಿಳವಳಿಕೆಗಾಗಿ ತಂಡಗಳ ವಿವರಗಳನ್ನು ಸಾರ್ವಜನಿಕ ಸ್ಥಳಗಳಾದ ಗ್ರಾಮ ಪಂಚಾಯತ /ಗ್ರಾಮ ಚಾವಡಿಗಳ ಸೂಚನಾ ಫಲಕಗಳಲ್ಲಿ ಪ್ರಚುರ ಪಡಿಸಬೇಕು.

ಮಳೆ ಪ್ರವಾಹದಿಂದ ಹಾನಿಯಾದ ಮನೆ/ ಗೃಹೋಪಯೋಗಿ ಸಾಮಗ್ರಿಗಳು ಮತ್ತು ಜನ-ಜಾನುವಾರುಗಳ ವಿವರಗಳನ್ನು ಖಉಖಉ-ಅಐ ಕಔಖಖಿಂಐ ದಲ್ಲಿ ದಾಖಲಿಸುವುದು ಹಾಗೂ ಸರ್ಕಾರದ ನಿಯಮಾವಳಿನುಸಾರ ಸಂಬಂಧಿತ ಕುಟುಂಬಗಳಿಗೆ ತ್ವರಿತವಾಗಿ ಪರಿಹಾರ ಧನ ಮಂಜೂರು ಮಾಡುವುದು. ಮಳೆ/ಪ್ರವಾಹಕ್ಕೆ ಸಂಬಂಧಿಸಿದಂತೆ ಕಂದಾಯ,ಆರೋಗ್ಯ,ಕೃಷಿ,ತೋಟಗಾರಿಕೆ, ನೀರಾವ-ರಿ,ಪೊಲೀಸ್, ಗೃಹ ರಕ್ಷಕ ದಳ ಇಲಾಖಾಧಿಕಾರಿಗಳು ಸಹಭಾಗಿತ್ವದಲ್ಲಿ ಮಳೆ/ಪ್ರವಾಹ ಸಂದರ್ಭದಲ್ಲಿ ಜವಾಬ್ದಾ-ರಿಯಿಂದ ಹಾಗೂ ಸಮನ್ವಯದೊಂದಿಗೆ ಕಾರ್ಯ ನಿರ್ವಹುಸಲು ತಿಳಿಸಿದರು.

**ಸಹಾಯವಾಣಿ ಕೇಂದ್ರಗಳು :** ಬೆಳಗಾವಿ-0831-2407290, ವಿಜಯಪುರ-08352-221261, ಬಾಗಲಕೋಟೆ-08354-236240, ಧಾರವಾಡ-0836-2445508, ಗದಗ-08372-239177, ಹಾವೇರಿ-08375-249102, ಉತ್ತರ ಕನ್ನಡ (ಕಾರವಾರ)-08382-229857 ಜಿಲ್ಲಾ ಮಟ್ಟದಲ್ಲಿ ತೆರೆದಿರುವ ಕಂಟ್ರೋಲ್ ರೂಂನ್ನು ಕಾರ್ಯಪ್ರವೃತ್ತರನ್ನಾಗಿಸಿ ಸಾರ್ವಜನಿಕರಿಗೆ 24ಥ7 ಸೇವೆಯನ್ನು ಒದಗಿಸಲು ಅಗತ್ಯ ಕ್ರಮ ಕೈಗೊಳ್ಳುವುದು. ತುರ್ತು ಸಂದರ್ಭದಲ್ಲಿ ಸಹಾಯ ಸೌಲಭ್ಯ ಮತ್ತು ದೂರು ಸಲ್ಲಿಸುವ ಕುರಿತು ಸಾರ್ವಜನಿಕರಿಗೆ ತಿಳಿಸಲು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಾನಕಿ.ಕೆ.ಎಂ ಅವರು ತಿಳಿಸಿದರು.

ಸಭೆಯಲ್ಲಿ ಬೆಳಗಾವಿ ಕಂದಾಯ ವಿಭಾಗದ ಜಿಲ್ಲಾಧಿಕಾರಿಗಳು ಉಪಸ್ಥಿತರಿದ್ದರು.

## ಕೃಷ್ಣಾ ನದಿಗೆ 1.15 ಲಕ್ಷ ಕ್ಯೂಸೆಕ್ಸ್ ಒಳ ಹರಿವು ; ನದಿ ತೀರ ತಮದಡ್ಡಿಯಲ್ಲಿ ಐದು ಅಡಿಯಷ್ಟು ನೀರು ಹೆಚ್ಚಳ!



**ತೇರದಾಳ**-ಜಿಲ್ಲೆಯ ಜೀವನಾಡಿ ಕೃಷ್ಣಾ ನದಿಗೆ ಮಹಾರಾಷ್ಟ್ರದಿಂದ 1.15 ಲಕ್ಷ ಕ್ಯೂಸೆಕ್ಸ್ ನೀರು ಹರಿದು ಬರುತ್ತಿದ್ದು, ಇದರಿಂದ ಬಾಗಲಕೋಟೆ ಜಿಲ್ಲೆ ಪ್ರವೇಶ ಮಾಡುವ ತಾಲೂಕಿನ ನದಿ ತೀರದ ತಮದಡ್ಡಿ ಗ್ರಾಮದಲ್ಲಿ ದಿಢೀರನೆ ಐದು ಅಡಿಯಷ್ಟು ನೀರು ಹೆಚ್ಚಳಗೊಂಡಿದೆ.

ಇದೇ ರೀತಿ ಮೂರ್ನಾಲ್ಕು ದಿನ ಮುಂದುವರೆದರೆ ಕೃಷ್ಣೆ ಒಡಲು ದಾಟಿ ಹೊರಗೆ ಬರುವಳು. ಇದ-ರಿಂದ ಕ್ರಮೇಣವಾಗಿ ಜಮೀನುಗಳಲ್ಲಿ ನೀರು ನುಗ್ಗುವುದರ ಜತೆಗೆ ಗ್ರಾಮದೊಳಗೆ ಬರಲು ಪ್ರಾರಂಭಗೊಳ್ಳುತ್ತದೆ ಎಂದು ಗ್ರಾಮಸ್ಥರು ಆತಂಕಗೊಂಡಿದ್ದಾರೆ. ಈ ಬಾರಿ ಪ್ರವಾಹ ಎದುರಾಗುವುದಿಲ್ಲ ಎಂದುಕೊಂಡಿದ್ದೇವೆ. ಆದರೆ ಮಹಾರಾಷ್ಟ್ರದ ಮುಂಬಯಿ, ಪುಣೆ, ಮಹಾಬಳೇಶ್ವರ, ಸಾತಾರ, ಕರಾಡ, ಕೊಲ್ಲಾಪುರ ಸೇರಿದಂತೆ ಹಲವಡೆ ಸಾಕಷ್ಟು ಪ್ರಮಾಣದಲ್ಲಿ ಮಳೆ ಸುರಿಯುತ್ತಿರುವುದರಿಂದ ಕೊಯ್ನಾ, ದೂದಗಂಗಾ, ಪಂಚಗಂಗಾ, ರಾಜಾಪುರ ಹಾಗೂ ಬೇರೆ ಬೇರೆ ಜಲಾಶಯಗಳಿಂದ ಅಪಾರ ಪ್ರಮಾಣದಲ್ಲಿ ಕೃಷ್ಣಾ ನದಿಗೆ ನೀರು ಹರಿದು ಬರುತ್ತಿದೆ. ಇನ್ನೂ ಹಿಪ್ಪರಗಿ ಆಣೆಕಟ್ಟಿನ ಎಲ್ಲ ಗೇಟ್‌ಗಳನ್ನು ತಗೆದಿದ್ದ-ರಿಂದ ನೀರು ಅಷ್ಟೇ ಪ್ರಮಾಣದಲ್ಲಿ ಆಲಮಟ್ಟಿ ಜಲಾಶಯಕ್ಕೆ ಹೋಗುತ್ತಿದೆ. ಆದರೆ ನೀರು ಹ-ರಿಯುವಿಕೆ ತೀವ್ರ ವೇಗವಾಗಿರುವುದರಿಂದ ನದಿ ದಡಕ್ಕೆ ಯಾರು ಹೋಗುವ ದುಸ್ಸಾಹಸ ಮಾಡುತ್ತಿಲ್ಲ. ಜತೆಗೆ ತಮದಡ್ಡಿ ಮಾರ್ಗವಾಗಿ ನೆರೆಯ ಬೆಳಗಾವಿ ಜಿಲ್ಲೆ ಅಥಣಿ ತಾಲೂಕಿನ ಹಳ್ಳಿಗಳಿಗೆ ಕಲ್ಪಿಸುವ ಬೋಟ್ ಸಂಚಾರ ವ್ಯವಸ್ಥೆ ಸ್ಥಗಿತಗೊಂಡಿದೆ. ಇದರಿಂದ ಪ್ರಯಾಣಿಕರು ರಸ್ತೆ ಮುಖಾಂತರ ಹೋಗುವಂತಾಗಿದೆ.

ತಹಸೀಲ್ದಾರ್ ಬೇಟಿ-ಏತನ್ಮಧ್ಯೆ ಕೃಷ್ಣಾ ನದಿಗೆ ಒಳ ಹರಿವು ಹೆಚ್ಚಳಗೊಂಡಿದ್ದರಿಂದ ತೇರದಾಳ ತಹಸೀಲ್ದಾರ್ ವಿಜಯಕುಮಾರ ಕಡಕೋಳ ಬುಧವಾರ ತಮದಡ್ಡಿ ಗ್ರಾಮಕ್ಕೆ ಬೇಟಿ ನೀಡಿ ನದಿಯ ನೀರಿನ ಮಟ್ಟ ಪರಿಶೀಲಿಸಿದರು. ಮಹಾರಾಷ್ಟ್ರದಲ್ಲಿ ಮಳೆ ಹೆಚ್ಚಾಗಿರುವುದರಿಂದ ಕೃಷ್ಣಾ ನದಿಗೆ ನೀರಿನ ಹರಿವು ಹೆಚ್ಚಳಗೊಂಡಿದೆ. ಗ್ರಾಮಸ್ಥರು ಯಾವುದೇ ಕಾರಣಕ್ಕೂ ನದಿ ದಡಕ್ಕೆ ಹೋಗಬಾರದು. ಜಾನುವಾರಗಳನ್ನು ಕೂಡ ಬಿಡಬಾರದು ಎಂದು ಸೂಚನೆ ನೀಡಿದರು. ತಮದಡ್ಡಿ ಗ್ರಾಮ ಮುಳುಗಡೆ ಎಂದು ಘೋಷಣೆಗೊಂಡು 15 ವರ್ಷಗಳಾಯಿತು. ಇನ್ನೂ ಸ್ಥಳಾಂತರಿಸುವ ಕೆಲಸ ಮಾಡುತ್ತಿಲ್ಲ. ಅಧಿಕಾ-ರಿಗಳು ಬರೀ ಮಳೆಗಾಲ ಬಂದ ಸಂದರ್ಭದಲ್ಲಿ ಮಾತ್ರ ಬರುತ್ತೀರಿ. ನಮ್ಮ ಸಮಸ್ಯೆ ಹಾಗೂ ಬೇಡಿಕೆಗೆ ಸ್ಪಂಧಿಸುವುದಿಲ್ಲ. ಮೊಲದು ತಮದಡ್ಡಿ ಗ್ರಾಮ ಸ್ಥಳಾಂತರಿಸುವ ಬಗ್ಗೆ ಕ್ರಮ ಕೈಗೊಳ್ಳಿ ಎಂದು ಗ್ರಾಮದ ಮುಖಂಡ ಮಹಾವೀರ ಬಿಲವಡಿ ರಾಜಕುಮಾರ ಶಿರಹಟ್ಟಿ ಮತ್ತಿತರರು ತಹಸೀಲ್ದಾರ್ ಅವರನ್ನು ಆಗ್ರಹಿಸಿದರು. ಗ್ರಾಮ ಆಡಳಿತಾಧಿಕಾರಿ ಗುಂಡಿ, ಪಿಡಿಓ ಪ್ರಕಾಶ ಕನ್ನೊಳಿ ಇದ್ದರು.

## ಅನಾಥ ಮಕ್ಕಳಿಗೆ ವಿಶೇಷ ರಿಯಾಯಿತಿ ನೀಡಲು ಚಿಂತನೆ : ಸಚಿವೆ ಲಕ್ಷ್ಮೀ ಹೆಬ್ಬಾಳಕರ್

**ಬೆಂಗಳೂರು** : ಅನಾಥಾಶ್ರಮಗಳಲ್ಲಿ ಇರುವ ಮಕ್ಕಳಿಗೆ ಪದವಿ ಪೂರ್ವ ಶಿಕ್ಷಣದವರೆಗೂ ದಾಖಲಾತಿ ಬಗ್ಗೆ ಯಾವುದೇ ಸಮಸ್ಯೆ ಇರುವುದಿಲ್ಲ. ಉನ್ನತ ಶಿಕ್ಷಣಕ್ಕೆ ದಾಖಲಾಗುವ ಸಂದರ್ಭದಲ್ಲಿ ಸಾಮಾನ್ಯವರ್ಗದ ಇತರ ಮಕ್ಕಳಂತೆ ಈ ಮಕ್ಕಳನ್ನು ದಾಖಲಾತಿ ಮಾಡಲಾಗುತ್ತಿದ್ದು, ಮುಂಬರುವ ದಿನಗಳಲ್ಲಿ ಇಂಥ ಮಕ್ಕಳಿಗೆ ವಿಶೇಷ ರಿಯಾಯಿತಿ ನೀಡಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮೂಡಿಗೆರೆ ಶಾಸಕಿ ನಯನ ಮೋಟಮ್ಮ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕರ್ನಾಟಕದಲ್ಲಿ 108 ಸರ್ಕಾರಿ, 54 ಅನುದಾನಿತ ಮತ್ತು 550 ಖಾಸಗಿ ಒಟ್ಟು 712 ಮಕ್ಕಳ ಪಾಲನಾ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, 712 ಸಂಸ್ಥೆಗಳಲ್ಲಿ ಒಟ್ಟು ಮಕ್ಕಳ ಸಾಮರ್ಥ್ಯ 38,975 ಇದ್ದು, ಈ ಪೈಕಿ 17048 (7874 ಹೆಣ್ಣು, 9175 ಗಂಡು) ಮಕ್ಕಳು ದಾಖಲಾಗಿರುತ್ತಾರೆ ಎಂದು ಮಾಹಿತಿ ನೀಡಿದರು.

ಮಕ್ಕಳ ಪಾಲನಾ ಸಂಸ್ಥೆಗಳಿಗೆ ಅನಾಥ, ನಿರ್ಗತಿ-ಕ ಹಾಗೂ ಒಪ್ಪಿಸಲ್ಪಟ್ಟ ಮಕ್ಕಳು, ಮಕ್ಕಳ ಕಲ್ಯಾಣ ಸಮಿತಿಯ ಆದೇಶದಂತೆ ದಾಖಲಾಗುತ್ತಿದ್ದು, ಕೆಲವು ಮಕ್ಕಳಿಗೆ ಸಂಬಂಧಿಸಿದಂತೆ ತಮ್ಮ ಕೌಟುಂಬಿಕ ಹಿನ್ನೆಲೆ ಹಾಗೂ ಜಾತಿಯ ಮಾಹಿತಿ ಇರುವುದಿಲ್ಲ. ಜಿಲ್ಲಾ ಶಸ್ತ್ರ ಚಿಕಿತ್ಸಕರ ವೈದ್ಯಕೀಯ ತಪಾಸಣೆ ಮತ್ತು ವರದಿಯಂತೆ ಮಗುವಿನ ವಯಸ್ಸನ್ನು ದೃಢೀಕ-ರಿಸಲಾಗುತ್ತದೆ ಎಂದರು.

ಪದವಿ ಪೂರ್ವ ಶಿಕ್ಷಣದವರೆಗೂ ಶಿಕ್ಷಣ ಮುಂದುವರಿಸಲು ಯಾವುದೇ ಸಮಸ್ಯೆಗಳು ಕಂಡು ಬರುವುದಿಲ್ಲ. ಆದರೆ, ಪದವಿ ಪೂರ್ವ ಶಿಕ್ಷಣದ ಬಳಿಕ ವೃತ್ತಿಪರ ಕೋರ್ಸ್‌ಗಳಿಗೆ ಸೇರುವ ಸಂದರ್ಭದಲ್ಲಿ ತಮ್ಮ ಜಾತಿ ಹಿನ್ನಲೆಯ ಮಾಹಿತಿ ಲಭ್ಯವಿಲ್ಲದೇ ಇರುವ ಮಕ್ಕಳನ್ನು ಸಾಮಾನ್ಯ ವಿಭಾಗದಲ್ಲಿ ದಾಖಲು ಮಾಡಲಾಗುತ್ತಿದೆ. ಜೊತೆಗೆ ಅರ್ಹತೆ ಇರುವ ಎಲ್ಲಾ ಮಕ್ಕಳಿಗೂ ಉನ್ನತ ಶಿಕ್ಷಣವನ್ನು ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

ಜಾತಿ ಹಿನ್ನೆಲೆ ಇಲ್ಲದೆ ಇರುವ ಮಕ್ಕಳಿಗೆ ಸರ್ಕಾರದಿಂದ ಹೆಚ್ಚಿನ ಸೌಲಭ್ಯಗಳನ್ನು ಒದಗಿಸುವ ದೃಷ್ಟಿಯಿಂದ ಪರಿಶಿಷ್ಠ ಜಾತಿ ಅಥವಾ ಪರಿಶಿಷ್ಠ ಪಂಗಡ ವರ್ಗಗಳಿಗೆ ಸೇರಿಸಬೇಕು ಅಂತ ಸಮಾಜ ಕಲ್ಯಾಣ ಇಲಾಖೆಗೆ ಕೋರಲಾಗಿತ್ತು. ಆದರೆ, ಈ ವರ್ಗಕ್ಕೆ ಸೇರಿಸಲು ಸಾಧ್ಯವಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆಯಿಂದ ಉತ್ತರ ಬಂದಿದೆ. ಜಯಪ್ರಕಾಶ್ ಹೆಗ್ಡೆ ಅವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದ ವೇಳೆ ಈ ಮಕ್ಕಳನ್ನು ಕ್ಯಾಟಗೆರಿ-1ಕ್ಕೆ ಸೇರಿಸಬೇಕು ಎಂದು ಶಿಫಾರಸ್ಸು ಮಾಡಿದ್ದರು. ಈ ಮಕ್ಕಳ ಹಿತದೃಷ್ಟಿಯಿಂದ ಸಮಾಜ ಕಲ್ಯಾಣ ಇಲಾಖೆ ಸಚಿವರೊಂದಿಗೆ ಚರ್ಚೆ ನಡೆಸಿ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ಹೇಳಿದರು.

ಮಕ್ಕಳ ಪಾಲನಾ ಸಂಸ್ಥೆಯಿಂದ ಬಿಡುಗಡೆಯಾಗಿರುವ ಮಕ್ಕಳು ಉನ್ನತ ಹುದ್ದೆಗಳನ್ನು ಅಲಂಕರಿಸಿದ್ದು, ವಿವಿಧ ಸರ್ಕಾರಿ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಜೊತೆಗೆ ಸ್ವ-ಉದ್ಯೋಗ, ಖಾಸಗಿ ಉದ್ಯೋಗವನ್ನು ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಸಚಿವರು ಹೇಳಿದರು.



# ಒಳಮೀಸಲಾತಿ ಬಗ್ಗೆ ಸದನದಲ್ಲಿ ಅಧಿಕೃತ ಘೋಷಣೆ: ಜತೆಗೆ ಬದಲಾವಣೆ ಸುಳಿವು ನೀಡಿದ ಮುಖ್ಯಮಂತ್ರಿ

# ಸದನದಲ್ಲಿ ಎಸ್.ಸಿ. ಒಳಮೀಸಲಾತಿ ಘೋಷಿಸಿದ ಸಿಎಂ ಸಿದ್ದರಾಮಯ್ಯ

**ಬೆಂಗಳೂರು:** ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಕಲ್ಪಿಸುವ ಬಗ್ಗೆ ಸಚಿವ ಸಂಪುಟದಲ್ಲಿ ಮಹತ್ವದ ತೀರ್ಮಾನವಾಗಿದೆ. ಎಸ್ ಸಿ ಬಲಗೈ ಹಾಗೂ ಎಡಗೈ ಸಮುದಾಯಗಳಿಗೆ ಸಮಾನವಾಗಿ ಶೇ.6ರಷ್ಟು ಮೀಸಲಾತಿ. ಇನ್ನು ಸ್ಪೃಶ್ಯ ಜಾತಿಗಳಿಗೆ ಶೇ.5ರಷ್ಟು ಮೀಸಲಾತಿಗೆ ತೀರ್ಮಾನಿಸಲಾಗಿದೆ. ಆದ್ರೆ, ಇದಕ್ಕೆ ಕೆಲ ದಲಿತ ಮುಖಂಡರು ಅಸಮಾಧಾನ ಹೊರಹಾಕಿದ್ದಾರೆ.

ಅಲೆಮಾರಿಗಳು ಸೇರಿದಂತೆ ಇತರೆ ಜಾತಿಗಳಿಗೆ ಅನ್ಯಾಯ ಮಾಡಲಾಗಿದೆ ಎಂದು ಆಕ್ರೋಶಗಳು ವ್ಯಕ್ತವಾಗಿವೆ. ಇದರ ನಡುವೆಯೂ ಸಿಎಂ ಸಿದ್ದರಾಮಯ್ಯ ಬುಧವಾರದಂದು ಸದನದಲ್ಲಿ ಮೀಸಲಾತಿ ಬಗ್ಗೆ ತೆಗೆದುಕೊಂಡು ನಿರ್ಣಯವನ್ನು ಅಧಿಕೃತವಾಗಿ ಘೋಷಣೆ ಮಾಡಿದರು. ಮುಖ್ಯವಾಗಿ ಈ ವೇಳೆ ಏನಾದರೂ ಬದಲಾವಣೆ ಮಾಡಬೇಕಾದ್ರೆ ಮುಂದಿನ ಹಂತದಲ್ಲಿ ತೀರ್ಮಾನ ಮಾಡಲಾಗುತ್ತೆ ಎಂದು ಸ್ಪಷ್ಟಪಡಿಸಿದರು.

ವಿಧಾನಸಭೆಯಲ್ಲಿ ಮಾತನಾಡಿದ ಸಿಎಂ, ನಿನ್ನೆ ನಡೆದ ಸಂಪುಟ ಸಭೆಯಲ್ಲಿ ಒಳ ಮೀಸಲಾತಿ ಜಾರಿಗೆ ಮಹತ್ವದ ನಿರ್ಣಯ ಕೈಗೊಳ್ಳಲಾಗಿದೆ. ಎಡಗೈ ಸಮುದಾಯಕ್ಕೆ 6%, ಬಲ ಸಮುದಾಯಕ್ಕೆ 6% ಹಾಗೂ ಸ್ಪೃಶ್ಯ ಸಮುದಾಯಕ್ಕೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲು ತೀರ್ಮಾನ ಮಾಡಲಾಗಿದೆ. ನ್ಯಾ.ನಾಗಮೋಹನ್ ದಾಸ್ ವರದಿಯ ಶಿಫಾರಸುಗಳನ್ನು ಕೆಲ ಮಾರ್ಪಾಡುಗಳೊಂದಿಗೆ ಒಳ ಮೀಸಲಾತಿ ಕಲ್ಪಿಸಲಾಗಿದೆ. ಂ, ಃ, ಅ ಎಂದು ವರ್ಗೀಕರಣ ಮಾಡಿ ಮೀಸಲಾತಿ ಹಂಚಲಾಗಿದ್ದು, ಒಳ ಮೀಸಲಾತಿ ಹೋರಾಟದ ಮೊಕದ್ದಮೆ ಹಿಂಪಡೆಯಲೂ ತೀರ್ಮಾನಿಸಲಾಗಿದೆ. ಈ ಮೂಲಕ ದಶಗಳ ಹೋರಾಟಕ್ಕೆ ನಮ್ಮ ಸರ್ಕಾರ ನ್ಯಾಯ ಒದಗಿಸಿದೆ ಎಂದರು.

ಏನಾದರೂ ಬದಲಾವಣೆ ಮಾಡಬೇಕಾದ್ರೆ ಮುಂದಿನ ಹಂತದಲ್ಲಿ ತೀರ್ಮಾನ ಮಾಡುತ್ತೇವೆ ಎಂದು ಸಿಎಂ ಹೇಳುತ್ತಿದ್ದಂತೆಯೇ ಆಡಳಿತ ಪಕ್ಷದ ಸದಸ್ಯರು ಮೇಜು ತಟ್ಟಿ ಸ್ವಾಗತಿಸಿದರು. ಬಳಿಕ ವಿಪಕ್ಷ ಬಿಜೆಪಿ ಸದಸ್ಯರು ಮಾತನಾಡಲು ಮುಂದಾದರು. ಆದ್ರೆ, ಇದಕ್ಕೆ ಸ್ಪೀಕರ್ ಯುಟಿ ಖಾದರ್, ಈಗ ಮಾತನಾಡುವುದು ಬೇಡ ಎಂದು ಅವರಕಾಶ ಕೊಡಲಿಲ್ಲ. ಬಳಿಕ ಮಾತು ಮುಂದುವರಿಸಿದ ಸಿಎಂ, ನಿಮ್ಮ ಕೈಯಲ್ಲಿ ಮಾಡಲು ಆಗಿಲ್ಲ ಅಂತಾನೇ ನಾವು ಮಾಡಿದ್ದೇವೆ. ನಿಮ್ಮ ಕಂಡರೆ ಭಯ ಇಲ್ಲ ಎಂದು ಬಿಜೆಪಿಯವರಿಗೆ ಕೌಂಟರ್ ಕೊಟ್ಟರು.

ಇನ್ನು ಸಿಎಂ ಮಾತು ಮುಗಿಯುತ್ತಿದ್ದಂತೆಯೇ ವಿಪಕ್ಷ ನಾಯಕ ಆರ್ ಅಶೋಕ್ ಎದ್ದು ನಿಂತು ಮೀಸಲಾತಿ ಜಾರಿ ಬಗ್ಗೆ ಮಾತನಾಡಲು ಪಟ್ಟು ಹಿಡಿದರು. ಈಗ ಚರ್ಚೆ ಮಾಡಲು ಅವಕಾಶ ಇಲ್ಲ. ಸಿಎಂ ವಾಕೌಟ್ ಮಾಡಿಲ್ಲ. ವಿಧಾನ ಪರಿಷತ್ತಿನಲ್ಲಿ ಉತ್ತರ ಇದೆ. ಹೀಗಾಗಿ ಅಲ್ಲಿಗೆ ಹೋಗಿದ್ದಾರೆ ಎಂದು ಸ್ಪೀಕರ್ ಹೇಳಿದರು.

ಈ ವೇಳೆ ಪ್ರಶ್ನೆಗೆ ಅವಕಾಶ ಇದೆ ಎಂದು ಬಿಜೆಪಿ ಸದಸ್ಯ ಸುನಿಲ್ ಕುಮಾರ್ ನಿಯಮದ ಪುಸ್ತಕ ಓದಿದರು. ಪ್ರಶ್ನೆ ಕೇಳಲು ಅವಕಾಶ ಇಲ್ಲ ಅಂದರೆ ಸರ್ಕಾರ ಏನೋ ಮುಚ್ಚಿಡಲು ಮುಂದಾಗಿದೆ. ಸಿಎಂ ಇಲ್ಲ ಅಂದರೆ ನಮಗೆ ಡಿಕೆ ಶಿವಕುಮಾರ್ ಸಿಎಂ .ಅವರಿಗೆ ಕೊಡುತ್ತೇವೆ. ಅನುಮತಿ ಕೊಡಿ ಎಂದು ವಿಪಕ್ಷ ನಾಯಕ ಅಶೋಕ್ ಪಟ್ಟು ಹಿಡಿದರು.

ಬದಲಾವಣೆ ಸುಳಿವು ನೀಡಿದ ಸಿಎಂ



ಎಡಗೈ ಜೊತೆ ಬಲಗೈ ಸಮುದಾಯಕ್ಕೆ ಶೇ.6ರಷ್ಟು ಮೀಸಲಾತಿ ಕಲ್ಪಿಸಿ ಸರ್ಕಾರ ಎಚ್ಚರಿಕೆ ಇಟ್ಟಿದೆ. ಆದ್ರೆ ಲಂಬಾಣಿ, ಬೋವಿ, ಅಲೆಮಾರಿ ಸೇರಿ 60 ಪರಿಶಿಷ್ಟ ಜಾತಿಗಳಿಗೆ ಶೇ.5ರಷ್ಟು ಮೀಸಲಾತಿ ನೀಡಿರುವುದು ಹೊಸ ಸಂಘರ್ಷಕ್ಕೆ ನಾಂದಿಹಾಡಿದೆ. ಇನ್ನು ಒಳಮೀಸಲಾತಿ ಜಾರಿಗೆ ಸಂಬಂಧ ಕೆಲ ತಪ್ಪುಗಳಾಗಿವೆ ಎಂದು ದಲಿತ ಮುಖಂಡರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಅದರಲ್ಲೂ ಅಲೆಮಾರಿ ಸಮುದಾಯಕ್ಕೆ ಅನ್ಯಾಯವಾಗಿದೆ ಎನ್ನುವ ಆರೋಪಗಳು ಕೇಳಿಬರುತ್ತಿವೆ. ಇದರ ನಡುವೆ ಸಿಎಂ ಸಿದ್ದರಾಮಯ್ಯ ಸದನದಲ್ಲಿ ಉತ್ತ-ರಿಸುವಾಗ ಬದಲಾವಣೆ ಬಗ್ಗೆ ಮುಂದೆ ತೀರ್ಮಾನ ಮಾಡುತ್ತೇವೆ ಎಂದು ಭರವಸೆ ನೀಡಿದರು. ಈ ಮೂಲಕ ಅಲೆಮಾರಿ ಜನಾಂಗದ ಆಕ್ರೋಶ ಹೆಚ್ಚಾದರೆ ಏನಾದರೂ ಬದಲಾವಣೆ ಮಾಡುವ ಸಾಧ್ಯತೆಗಳಿವೆ.

**ಪರಿಷತ್ ನಲ್ಲೂ ಒಳ ಮೀಸಲಾತಿ ಜಾರಿ ಬಗ್ಗೆ ತಿಳಿಸಿದ ಸಿಎಂ**

ಇನ್ನು ಈ ಒಳಮೀಸಲಾತಿ ಬಗ್ಗೆ ವಿಧಾನಸಭೆಯಲ್ಲಿ ಉತ್ತರ ನೀಡದ ಬಳಿಕ ವಿಧಾನ ಪರಿಷತ್ ನಲ್ಲೂ ಸಹ ಪ್ರಸ್ತಾಪ ಮಾಡಿದ್ದು, ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ಕಲ್ಪಿಸುವ ಕುರಿತಂತೆ ಸರ್ವೋಚ್ಚ ನ್ಯಾಯಾಲಯವು ರಾಜ್ಯಗಳ ವಿವೇಚನೆಗೆ ಬಿಟ್ಟಿತ್ತು. ಒಳ ಮೀಸಲಾತಿ ವರ್ಗೀಕರಣ ರಾಜ್ಯ ಸರ್ಕಾರಗಳಿಗೆ ಸಾಂವಿಧಾನಿಕವಾಗಿ ಬಂದ ಅಧಿಕಾರ ಎಂಬುದನ್ನು ಸುಪ್ರಿಂ ಕೋರ್ಟ್ ಹೇಳಿದೆ. 11-11-2024ರಂದು ರಂದು ನ್ಯಾ. ನಾಗಮೋಹನ್ ದಾಸ್ ನೇತೃತ್ವದ ಏಕ ಸದಸ್ಯ ಆಯೋಗ ರಚನೆ ಮಾಡಲಾಯಿತು. ನಾಗಮೋಹನ್ ದಾಸ್ ಆಯೋಗ 101 ಪರಿಶಿಷ್ಟ ಜಾತಿಗಳನ್ನು ಅಧ್ಯಯನ ಮಾಡಿ ವರದಿ ನೀಡಿದೆ.

ಆದರೆ ಕೆಲವು ಮಾರ್ಪಾಡು ಮಾಡಿ ವರದಿಯನ್ನು ಅಂಗೀಕರಿಸಿದ್ದೇವ. ಬಲಗೈ ಸಮೂಹಕ್ಕೆ 6% ಮೀಸಲಾತಿ, ಎಡಗೈ ಸಮೂಹಕ್ಕೆ 6% ಮೀಸಲಾತಿ ಕಲ್ಪಿಸಿ ಕ್ಯಾಬಿನೆಟ್ ನಲ್ಲಿ ತೀರ್ಮಾನ ಮಾಡಿದ್ದೇವೆ. ಇನ್ನು ಸ್ಪೃಶ್ಯ ಜಾತಿಗಳಿಗೆ ಶೆ.4ರಷ್ಟು ಮೀಸಲಾತಿ ನೀಡುವ ಬಗ್ಗೆ ನಾಗಮೋಹನ್ ದಾಸ್ ಶಿಫಾರಸು ಮಾಡಿದ್ದರು. ಕೆಲವು ತಾಂತ್ರಿಕ ಕಾರಣಗಳಿಂದ ಒಂದೇ ಗುಂಪಿಗೆ ಸೇರಿಸಿ ವರ್ಗ- ಸಿ ಗೆ 5% ಮೀಸಲಾತಿ ನೀಡಲು ನಿರ್ಧರಿಸಿದ್ದೇವೆ. ಸಮಾನತೆ ನ್ಯಾಯ ಸಮ್ಮತೆ ಖಚಿತಪಡಿಸಿಕೊಳ್ಳಲು ಮಾರ್ಪಾಡು ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದರು.

**ಒಳಮೀಸಲಾತಿ ಹೋರಾಟಗಾರರ ಮೇಲಿನ ಕೇಸ್ ವಾಪಸ್**

ಪರಿಶಿಷ್ಟ ಜಾತಿಗಳ ಶಾಶ್ವತ ಆಯೋಗ ಸ್ಥಾಪನೆಗೆ ತೀರ್ಮಾನ ಮಾಡಿದ್ದೇವೆ. ನೇಮಕಾತಿಗೆ ವಯೋಮಿತಿ ಸಡಿಲಿಕೆ ಮಾಡಲು ತೀರ್ಮಾನಿಸಲಾಗಿದೆ. ಇನ್ನು ಒಳಮೀಸಲಾತಿ ಹೋರಾಟಗಾರರ ಮೇಲಿನ ಪ್ರಕರಣಗಳನ್ನೂ ಹಿಂಪಡೆಯಲು ತೀರ್ಮಾನ ಮಾಡಿದ್ದೇವೆ. ಇದರೊಂದಿಗೆ ಒಳ ಮೀಸಲಾತಿ ಕು-ರಿತ ದಶಕದ ಹೋರಾಟಕ್ಕೆ ನ್ಯಾಯ ಸಿಕ್ಕಿದೆ ಎಂದು ಸಿದ್ದರಾಮಯ್ಯ ಹೇಳಿದರು.

## ಅರ್ಜಿ ಆಹ್ವಾನ

**ಬಾಗಲಕೋಟೆ:** : ನಗರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0ರಡಿ ಸಮುದಾಯ ಮಟ್ಟದಲ್ಲಿ ಘನ-ದ್ರವ ತ್ಯಾಜ್ಯ ನಿರ್ವಹಣೆ ಚಟುವಟಿಕೆಗಳಿಗೆ ಓಗಐಒ-ಆಚಿಥಿ ಯೋಜನೆಯ ಸ್ವಸಹಾಯ ಸಂಘಗಳ ಸದಸ್ಯರಿಂದ ಅಂಟಟಣ-ಟಿಣಥಿ ಒಠಭುಟುದಜಡಿ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಮೊದಲು ಆ.21ರೊಳಗೆ ಅರ್ಜಿ ಸಲ್ಲಿಸಲು ಪ್ರಕಟಣೆ ನೀಡಲಾಗಿದ್ದರೂ, ಕಡಿಮೆ ಅರ್ಜಿಗಳು ಬಂದ ಹಿನ್ನೆಲೆಯಲ್ಲಿ ಪುನಃ ಆ.25ರೊಳಗಾಗಿ ಅರ್ಜಿಗಳನ್ನು ಪೌರಾಯುಕ್ತರಿಗೆ ಖುದ್ದಾಗಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಗರಸಭೆ ಆರೋಗ್ಯ ಶಾಖೆಯನ್ನು ಸಂಪರ್ಕಿಸಬಹುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಲಾ ತಂಡಗಳು ಆಯ್ಕೆಗೆ ಅರ್ಜಿ ಆಹ್ವಾನ

**ಬಾಗಲಕೋಟೆ:** : 2025-26 ನೇ ಸಾಲಿನ ರಾಷ್ಟ್ರೀಯ ಆರೋಗ್ಯ ಅಭಿಯಾನದ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಕು-ರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಾನಪದ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕಲಾ ತಂಡಗಳು ಬಾಗಲಕೋಟೆ ಜಿಲ್ಲೆಯ ವ್ಯಾಪ್ತಿಯಲ್ಲಿ ಮಾತ್ರ ಇರಬೇಕು. ಆಧಾರ, ಪ್ಯಾನ್, ಬ್ಯಾಂಕ್ ವಿವರ, ಹಿಂದಿನ ಅನುಭವ ಪ್ರಮಾಣ ಪತ್ರ, ಛಾಯಾಚಿತ್ರಗಳೊಂದಿಗೆ ಕೇಂದ್ರ ಸಂಗೀತ-ನಾಟಕ ವಿಭಾಗ ಅಥವಾ ವಾರ್ತಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಲ್ಲಿ ನೋಂದಣಿ ಪ್ರಮಾಣ ಪತ್ರ ಕಡ್ಡಾಯವಾಗಿ ಲಗತ್ತಿಸಬೇಕು. ಇಲಾಖೆಯ ಮಾಹಿತಿಯನ್ನು ಸಂಪೂರ್ಣ ತಿಳಿದುಕೊಂಡು ಜಾಗೃತಿ ಮೂಡಿಸಲು ಸಿದ್ಧರಾಗಿರಬೇಕು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಆಗಸ್ಟ 30, ಸಂಜೆ 5 ಗಂಟೆ, ಜಿಲ್ಲಾ ಆಡಳಿತ ಭವನ, ನವನಗರ. ಹೆಚ್ಚಿನ ಮಾಹಿತಿಗಾಗಿ ಕೊಠಡಿ ಸಂಖ್ಯೆ-31, ಜಿಲ್ಲಾ ಐಇಸಿ ವಿಭಾಗವನ್ನು ಸಂಪರ್ಕಿಸಲು ಜಿಲ್ಲಾ ಆರೋಗ್ಯಾಧಿಕಾರಿಗಳು ಪ್ರಕಟಣೆ ತಿಳಿಸಿದ್ದಾರೆ.

## ಪಿಂಚಣಿ ಹಾಗೂ ಇಪಿಎಫ್ ಚಂದಾದಾರರ ಕುಂದು ಕೊರತೆಗಳ ಸಭೆ

**ಬಾಗಲಕೋಟೆ:** : ಭವಿಷ್ಯ ನಿಧಿ ಮತ್ತು ಪಿಂಚಣಿಗೆ ಸಂಬಂದಿಸಿದ ಕುಂದು ಕೊರತೆಗಳ ಸಭೆಯನ್ನು ಆಗಸ್ಟ 28ರಂದು ಹಳೆ ಬಾಗಲಕೋಟೆ ಬಿ. ವಿ ವಿ ಎಸ್ ಆರ್ಟ್ಸ್ ಕಾಲೇಜನಲ್ಲಿ ಬೆಳಿಗ್ಗೆ 9.30 ರಿಂದ ಸಂಜೆ 4ರವರಿಗೆ ಸಭೆ ನಡೆಸಲಾಗುವುದು ಪಿಂಚಣಿದಾರರು, ಇಪಿಎಫ್ ಚಂದಾದಾರರು ಮತ್ತು ಉದ್ಯೋಗದಾತರು ಸಭೆಯಲ್ಲಿ ಭಾಗವಹಿಸಿ ತಮ್ಮ ಕುಂದು ಕೊರತೆಗಳನ್ನು ಪರಿಹ-ರಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಿಂ.ಡಿಚಿಠಿಭಿಣಾಡಿ@ಜಠಿಜಿಟಿಜುಚಿ.ರಠ.ಟಿ, ಜಠ.ಛಿಚಿರಂಚಿಟಇಾಂಣ@ಜಠಿಜಿಟಿಜುಚಿ.ರಠ .ಟಿ ಜಟಚುಟ ಸಂಪರ್ಕಿಸಬಹುದು ಎಂದು ಪ್ರಾದೇಶಿಕ ಕಛೇರಿ ರಾಯಚೂರು ಪಿ ಎಫ್ ಕಮೀಷನರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಆಗಸ್ಟ 23 ರಂದು ವಿದ್ಯುತ್ ವ್ಯತ್ಯಯ

**ಬಾಗಲಕೋಟೆ:** : 110/11ಕೆವಿ ಬಾಗಲಕೋಟೆ ಉಪಕೇಂದ್ರದಿಂದ 110/11ಕೆವಿ ಗುಳೇದಗುಡ್ಡ, ವರೆಗಿನ 110ಕೆವಿ ಕಾರಿಡಾರನಲ್ಲಿ ಕಾಮಗಾರಿ ಕೈಗೊಳ್ಳುವ ಪ್ರಯುಕ್ತ ಆಗಸ್ಟ 23 ರಂದು ಬೆಳಿಗ್ಗೆ 10:00 ಗಂಟೆಯಿಂದ ಮದ್ಯಾಹ್ನ 01:00 ಗಂಟೆಯವರೆಗೆ 110/11ಕೆವಿ ಗುಳೇದಗುಡ್ಡ ಉಪಕೇಂದ್ರದ ಎಫ್ 01-ಬೂದಿನಗಡ, ಎಫ್ 02-ನಾಗರಾಳ, ಎಫ್ 03-ನಂದಿಕೇಶ್ವರ, ಎಫ್ 04-ಗುಳೇದಗುಡ್ಡ, ಎಫ್ 05-ಅಸಂಗಿ ಎನ್ ವಾಯ್ ಜೆ, ಎಫ್ 06-ಹಳದೂರ, ಎಫ್ 07-ಇಂಜಿನವಾರಿ, ಎಫ್ 08-ತೋಗುನಾಶಿ ಎನ್ ವಾಯ್ ಜೆ, ಎಫ್ 09-ಮುಕೇಶ್ವರಿ ಟೌನ್ ಮತ್ತು ಎ ಸಿ ಎಮ್ ಇ ಸೋಲಾರ ಪಾವರ್ , 110/11ಕೆವಿ ನಾಗರಾಳ ಉಪಕೇಂದ್ರದ ಎಫ್ 02-ಲಾಯದಗುಂಡಿ, ಎಫ್ 01 ನಾಗರಾಳ ಎನ್ ವಾಯ್ ಜೆ, ಎಫ್ 06-ಚಿಮ್ಮಲಗಿ ಐಪಿ, ಎಫ್ 04-ಮಂಗಳಗುಡ್ಡ ಎನ್ ವಾಯ್ ಜೆ, ಎಫ್ 05-ಶಂಕರಲಿಂಗ , 33/11ಕೆವಿ ಶಿರೂರ ಉಪಕೇಂದ್ರದ ಎಫ್ 01-ನೀಲಾನಗರ ಎನ್ ವಾಯ್ ಜೆ, ಎಫ್ 02-ಸಂಗಮ ಕ್ರಾಸ್ ಐಪಿ, ಎಫ್ 03-ವರ್ತಿಕಟ್ಟಿ ಐಪಿ, ಎಫ್ 04-ಶಿರೂರು ಐಪಿ, ಎಫ್ 05-ಲಿಂಗಾಪುರ ಐಪಿ, ಎಫ್ 06-ಫ್ಯಾಕ್ಟರಿ, ಎಫ್ 07-ಶಿರೂರು ಎನ್ ವಾಯ್ ಜೆ, ಎಫ್ 08-ತೋಗುನಶಿ ವಾಟರ ಸಪ್ಲೈ, 33/11ಕೆವಿ ಕಮತಗಿ ಉಪಕೇಂದ್ರದ ಎಫ್ 01- ಸುರುಳಿಕಲ್, ಎಫ್ 02- ಹಿರೇಮಗಿ, ಎಫ್ 03- ಕಮತಗಿ ಐಪಿ, ಎಫ್ 04- ಅಂಬ್ಲಿಕೊಪ್ಪ ಎನ್ ವಾಯ್ ಜೆ, ಎಫ್ 05- ಮುಗನೂರು ವಾಟರ ಸಪ್ಲೈ, ಎಫ್ 06- ಕಮತಗಿ, ಎಫ್ 07- ರಾಮತಾಳ ಎನ್ ವಾಯ್ ಜೆ, ಎಫ್ 08- ಬೇನಾಳ ಐಪಿ ವಿದ್ಯುತ್ ಮಾರ್ಗಗಳ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು ಕಾರಣ ಗ್ರಾಹಕರು ಸಹಕ-ರಿಸಬೇಕೆಂದು ಬಾಗಲಕೋಟೆ ಹೆಸ್ಕಾಂ ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಪಿಡಿಒ ಆಫ್ ದಿ ಮಂತ್ ಪ್ರಶಸ್ತಿಗೆ ನಾಗರಾಜ ನಾಯ್ಕ ಭಾಜನ

**ಕಾರವಾರ,** ; ನಗರದ ಜಿಲ್ಲಾ ಪಂಚಾಯತ ಕೇಸ್ವಾನ್ ಹಾಲ್‌ನಲ್ಲಿ ಜುಲೈ-2025 ಮಾಹೇಯ "ಬೇಸ್ಟ ಪಿಡಿಓ ಆಪ್ ದಿ ಮಂತ್" ಪ್ರಶಸ್ತಿಗೆ ಭಾಜನರಾದ ಕುಮಟಾ ತಾಲೂಕಿನ ಹೊಲನಗದ್ದೆ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ನಾಗರಾಜ ತಿಮ್ಮಪ್ಪ ನಾಯ್ಕ ಅವರಿಗೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಿಲೀಷ್ ಶಶಿ ಬುಧವಾರ ಪ್ರಶಸ್ತಿ ನಿಡಿ, ಅಭಿನಂದಿಸಿದರು.

ನಂತರ ಮಾತನಾಡಿದ ಸಿಇಓ ಉತ್ತರ ಕನ್ನಡ ಜಿಲ್ಲಾ ಪಂಚಾಯತನ ಎಲ್ಲ ಪಿಡಿಓಗಳು ತುಂಬ ಚೆನ್ನಾಗಿ ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ನಮ್ಮ ಜಿಲ್ಲಾ ಪಂಚಾಯತ ಕರ್ನಾಟಕದ ಪ್ರಮುಖ ಐದರಲ್ಲಿ ಒಂದು ಎಂದು ಗುರುತಿಸಲು ಪಿಡಿಓಗಳ ಕಾರ್ಯ ಮಹತ್ತರವಾಗಿದೆ. ಹಾಗಾಗಿ ಅವರುಗಳನ್ನು ಗುರುತಿಸಿ ಸತ್ಕಾರ ಮಾಡಿ, ಅಭಿನಂದಿಸುವುದರಿಂದ ಎಲ್ಲರಲ್ಲಿ ಕಾರ್ಯಪ್ರವರ್ತತೆ ಹೆಚ್ಚಿಸಲು ಸಾಧ್ಯವೆಂದು ಹೇಳಿದರು. ಈ ಸಂಧರ್ಭದಲ್ಲಿ ಉತ್ತರ ಕನ್ನಡ ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕ ಕರೀಂ ಆಸದಿ, ಮುಖ್ಯ ಲೆಕ್ಕಾಧಿಕಾರಿ ಆನಂದಸಾ ಎಮ್ ಹಬೀಬ್, ಮುಖ್ಯ ಯೋಜನಾಧಿಕಾರಿ ಸೋಮಶೇಖರ ಮೇಸ್ತಾ ಸೇರಿದಂತೆ ಜಿಲ್ಲಾ ಪಂಚಾಯತನ ಸಿಬ್ಬಂಧಿಗಳು ಉಪಸ್ಥಿತರಿದ್ದರು.

## 11ನೇ ಶತಮಾನದ ಪುರಾತನರ ಭಕ್ತಿಗೂ 12ನೇ ಶತಮಾನದ ಶರಣರ ಭಕ್ತಿಗೂ ಇರುವ ವ್ಯತ್ಯಾಸವೇನು? : ನೀಲಮ್ಮತಾಯಿ



**ಗದಗ-** ಪುರಾತನರು ಮರ್ತ್ಯ ಲೋಕದಲ್ಲಿ ಭಕ್ತಿಯ ಮನೆ ಕಟ್ಟಿಕೊಂಡು ಇದ್ದರು. ನಿಜ ಆದರೆ ಅವರು ಭಕ್ತಿಯ ಮಾಡಿ ಸ್ವರ್ಗಕ್ಕೆ ಹೋದರು ಎಂದು ಆಧ್ಯಾತ್ಮ ವಿದ್ಯಾಶ್ರಮದ ಶರಣೆ ನೀಲಮ್ಮತಾಯಿಯವರು ಮಾತನಾಡಿದರು.

ಅವರಿಂದು ಗದಗ ನಗರದ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರಾವಣ ಮಾಸದ ಅಂಗವಾಗಿ ನಡೆದ ಶರಣ ಚರಿತಾಮೃತ ಪ್ರವಚನದಲ್ಲಿ ಮಾತನಾಡುತ್ತಾ, ಭಕ್ತಿಯ ವ್ಯವಹಾರ ಮಾಡಿದರು. ಸಾಮಿಪ್ಯ, ಸಾರುಪ್ಯ, ಸಾಲುಕ್ಯ, ಸಾಯುಜ್ಯ ಎಂಬ ನಾಲ್ಕು ವಿಧ ಪದವಿಗೊಳಗಾದರು. ಈ ಪದವಿಗಳಿಂದಾಚೆ ನಿಜದ ನಿಲುವು ಉಳ್ಳ ನಿಜ ಬಕ್ತಿಯ ನಿಲುವು ಗುರುತಿಸಲಿಲ್ಲ. ನಿಜ ಭಕ್ತಿಯ ಮಹಾಮನೆ ಕಟ್ಟಲಿಲ್ಲ. ಪದವಿಗಳು ಸ್ಥಿರವಲ್ಲ ಗಮನಾಗಮಕ್ಕೆ ಕರೆದುಕೊಂಡು ಹೋಗುವಂತವು.

ಆದರೆ 12ನೇ ಶತಮಾನದ ಬಸವಾದಿ ಶಿವಶರಣರು ಮರ್ತ್ಯದಲ್ಲಿ ಬಂದು ಕಲ್ಯಾಣದಲ್ಲಿ, ಭಕ್ತಿಯ ಮಹಾಮನೆ ಕಟ್ಟಿದರೆ, ಮರ್ತ್ಯಲೋಕವೆಲ್ಲವೂ ಭಕ್ತಿಯ ಸಾಮ್ರಾಜ್ಯವಾಗಿತ್ತು. ಆ ಮನೆಗೆ ತೆಲೆಬಾಗಿ, ಕೈಮುಗಿದು ಹೋದವರೆಲ್ಲರೂ ನಿಜಲಿಂಗ ಪದವಿಯನ್ನು ಪಡೆದರು. ಗಮನಾಗಮದರಹಿತ ನಿಜದ ನಿಲುವಿನಲ್ಲಿ ನಿಜಮುಕ್ತಿಂ ಪಡೆದವರು ಶಿವಶರಣ-ರು ಎಂದು ಶಿವಶರಣೆ ನೀಲಮ್ಮ ತಾಯಿಯವರು ಅರ್ಥಪೂರ್ಣವಾಗಿ ತಿಳಿಸಿದರು. 11ನೇ ಶತಮಾನದ ಪುರಾತನರ ಭಕ್ತಿಗೂ 12ನೇ ಶತಮಾನದ ಶರಣರ ಭಕ್ತಿಗೂ ಅನ್ಯ ಭಕ್ತಿ, ಅನನ್ಯ ಭಕ್ತಿಯ ದೃಷ್ಠಾಂತ ಕೊಟ್ಟು ವಿವರಿಸಿದರು.

ಈಶ್ವರಿ ವಿಶ್ವವಿದ್ಯಾಲಯದ ಸಹೋದರಿ ಬಿ.ಕೆ.ಸುಮಿತ್ರಕ್ಕನವರು ಮಾತನಾಡುತ್ತಾ, ರಕ್ಷಾಬಂಧನವನ್ನು ನೂರಾರು ವರ್ಷಗಳೀಂದ ಆಚರಿಸುತ್ತಾ ಬಂದಿದ್ದು, ಪ್ರತಿಯೊಬ್ಬ ಸಹೋದ-ರಿಗೆ ಸಹೋದರನ ಬೆಂಬಲ, ರಕ್ಷಣೆ ಬೇಕೇ ಬೇಕು. ಹಿಂದೆ ಮಹಾಭಾರತದಲ್ಲಿ ಶ್ರೀ ಕೃಷ್ಣನ ಬೆರಳಿಗೆ ಗಾಯವಾದಾಗ ದ್ರೌಪದಿಯು ತನ್ನ ಸೀರೆಯ ಸೆರಗನ್ನು ಹರಿದು ಶ್ರೀ ಕೃಷ್ಣನ ಬೆರಳಿಗೆ ಕಟ್ಟಿದ್ದಳು. ಮುಂದೊಂದು ದಿನ ದ್ರೌಪತಿಗೆ ಸಂಕಷ್ಟ ಬಂದಾಗ ಶ್ರೀ ಕೃಷ್ಣನನ್ನು ನೆನೆದಾಗ ಕೃಷ್ಣನ ಆಶಿರ್ವಾದದಿಂದ ಯಾವುದೇ ತೊಂದರೆ ದ್ರೌಪತಿಗೆ ಆಗಿಲ್ಲ ಎಂದು ಮಾತನಾಡಿದರ. ಈ ಸಂದಭದಲ್ಲಿ ಎಲ್ಲ ಭಕ್ತರಿಗೆ ರಾಖಿಯನ್ನು ಕಟ್ಟಿದರು.

ಸಂಗೀತ ಸೇವೆಯನ್ನು ಮೃತ್ಯುಂ-ಜಯ ಹಿರೇಮಠ ನಡೆಸಿದರು. ತಬಲಾ ವಾದಕರಾಗಿ ಹೇಮೇಂದ್ರಕುಮಾರ ಹಿರೇಮಠ ನಡೆಸಿದರು. ಪ್ರಸಾದದ ಸೇವೆಯನ್ನು ಪ್ರಭುಗೌಡ ಕುಭೇರ ಗೌಡ ಚಿನ್ನಪ್ಪಗೌಡರು ಹಾಗೂ ಕುಟುಂಬದವರು ಸೇವೆಯನ್ನು ವಹಿಸಿದ್ದರು.

ಈ ಸಂದರ್ಭದಲ್ಲಿ ಟ್ರಸ್ಟ್ ಕಮೀಟಿಯ ಸದಸ್ಯರಾದ ಕೊಟ್ರಪ್ಪ ಕಮತರ, ಎಂ. ಎಂ. ಹಿರೇಮಠ ವಕೀಲರು, ಶಿವಣ್ಣ ಕತ್ತಿ, ಮುರಿಗೆಪ್ಪ ನಾಲವಾಡ, ಹಿರಿಯರಾದ ವಿರುಪಾಕ್ಷಪ್ಪ ಅಕ್ಕಿ, ಬಸವರಾಜ ಜಂತ್ಲಿ, ಶಿವಣ್ಣ ಇಟ್ನಳ್ಳಿ, ಪುರಾಣ ಪ್ರವಚನ ಸಮಿತಿ ಅಧ್ಯಕ್ಷರಾದ ಶೇಖಪ್ಪ ಹೊಂಬಳ, ಸಿದ್ದಣ್ಣ ಅರಳಿ, ಗಂಗಾಧರ ಮೇಲಗಿರಿ, ಗಂಗಾಧರ ನಂದಿಕೋಲಮಠ, ಶ್ರಿಶೈಲಪ್ಪ ಪಟ್ಟಣಶೆಟ್ಟಿ, ಸುರೇಶ ಮಾಳವಾಡ, ಪ್ರಭು ಶೆಟ್ಟರ, ಸುಭಾಸ ಹವಳೆ, ವಿರುಪಾಕ್ಷಪ್ಪ ಅಂಗಡಿ, ಮಲ್ಲಿಕಾರ್ಜುನ ಹಿರೇಮಠ, ಶಂಕರ ನೀರಲಕೇರಿ, ಸುರೇಶ ನಿಲುಗಲ್ಲ, ಅಶೋಕ ತಮ್ಮಳ್ಳಿ, ಬಸವರಾಜ ಮೊರಬದ, ಪಂಚಾಕ್ಷರ ಅಂಗಡಿ, ನವೀನ ನಾಲ್ವಾಡ, ಸುರೇಶ ಹೆಬಸೂರ, ಪ್ರಕಾಶ ಜಂತ್ಲಿ, ಸತ್ಸಂಗದ ಸದಸ್ಯರಾದ ಸುನಂದಾ ಜೋಬಾಳೆ, ಬೀನಾ ಮಾನ್ವಿ, ಉಮಾ ಪಟ್ಟಣಶೆಟ್ಟಿ, ಜಯಶ್ರೀ ನಿಲೂಗಲ್, ಕಸ್ತೂರಕ್ಕ ಮಾನ್ವಿ, ಶರಣಮ್ಮ ಶಿರೂರ, ಸುಶೀಲಾ ನಿಲೂಗಲ್ಲ, ನೀಲಕ್ಕ ಕಗನಳ್ಳಿ, ಅನಸಕ್ಕ ಮೇಲಗಿರಿ, ಶೈಲಾ ಮಾನ್ವಿ ಮುತಾದವರು ಭಾಗವಹಿಸಿದ್ದರು.

*****

### ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತ ಸಮಿತಿಯ ಸಭೆ

## ಪ್ರತಿಯೊಬ್ಬ ಅರ್ಹ ಮಗುವಿಗೂ ಲಸಿಕೆ ಹಾಕಿಸಲು ಕ್ರಮ ಕೈಗೊಳ್ಳಬೇಕು- ಜಿಲ್ಲಾಧಿಕಾರಿ



**ಕೊಪ್ಪಳ** : ಕೊಪ್ಪಳ ಜಿಲ್ಲೆಯ ಪ್ರತಿಯೊಬ್ಬ ಅರ್ಹ ಮಗುವಿಗೂ ಲಸಿಕೆ ಹಾಕಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಜಿಲ್ಲಾ ಮಟ್ಟದ ಜಾಗೃತ ಸಮಿತಿಯ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ರಾಷ್ಟ್ರೀಯ ಆರೋಗ್ಯ ಅಭಿಯಾನದ ರಾಷ್ಟ್ರೀಯ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿಯಲ್ಲಿ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ. ಮಗು ಜನಿಸಿದ 24 ಗಂಟೆಯೊಳಗೆ ಹಾಕಬೇಕಾದ ಕಡ್ಡಾಯ ಲಸಿಕೆಗಳು, ಮಗುವಿನ ಬೆಳವಣಿಗೆಯ ವಿವಿಧ ಹಂತಗಳಲ್ಲಿ ಹಾಕಬೇಕಾದ ಲಸಿಕೆಗಳಿಂದ ಜಿಲ್ಲೆಯ ಯಾವುದೇ ಮಗು ವಂಚಿತರಾಗಬಾರದು. ಈ ಹಿನ್ನೆಲೆಯಲ್ಲಿ ಲಸಿಕೆಯಿಂದ ಮಗುವಿಗೆ ಆಗುವ ಆರೋಗ್ಯ ಪ್ರಯೋಜನೆಗಳು ಮತ್ತು ಲಸಿಕೆ ಹಾಕಿಸದೇ ಇರುವುದರಿಂದ ಆಗುವ ತೊಂದರೆಗಳು ಸೇರಿದಂತೆ ನಾನಾ ವಿಷಯಗಳ ಕುರಿತು ಎಲ್ಲಾ ತಾಯಂದಿರಿಗೆ ಗೊತ್ತಿರಬೇಕು. ಈ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು. ಮಗುವಿನ ಆರೋಗ್ಯದ ಬಗ್ಗೆ ಅತಿ ಹೆಚ್ಚಿನ ಕಾಳಜಿ ವಹಿಸಲು ಮತ್ತು ನಿಗದಿತ ಸಮಯಕ್ಕೆ ಲಸಿಕೆ ಹಾಕುವಂತೆ ಆಯಾ ಮಗುವಿನ ಪಾಲಕ-ರಿಗೆ ಸ್ಥಳೀಯವಾಗಿ ಕಾರ್ಯನಿರ್ವಹಿಸುವ ಆಶಾ ಕಾರ್ಯಕರ್ತೆಯರು, ಆರೋಗ್ಯ ಕಾರ್ಯಕರ್ತರ ಮೂಲಕ ಸೂಕ್ತ ಸಮಯದಲ್ಲಿ ತಿಳಿವಳಿಕೆ ಮೂಡಿಸಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅರ್ಹರಿರುವ ಪ್ರತಿಯೊಬ್ಬ ಮಗುವಿಗೂ ಲಸಿಕೆ ಹಾಕಿಸಲು ಕ್ರಮ ಕೈಗೊಳ್ಳುವ ಕಾರ್ಯಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಕ್ಷಣ ಮತ್ತು ಸಂಬಂಧಿಸಿದ ಇತರೆ ಇಲಾಖೆಯವರು ಆರೋಗ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಪ್ರಾಕಾಶ ವಿ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ರವಿಂದ್ರನಾಥ ಎಂ.ಹೆಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ್, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕುಮಾರಸ್ವಾಮಿ ಗೋನಾಳ, ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಶಶೀಧರ, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಪ್ರಕಾಶ ಹೆಚ್., ಕಿಮ್ಸ್ ಪ್ರಾಶುಂಪಾಲರಾದ ಡಾ. ನಾರಾಯಣ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ್ ಸೇರಿದಂತೆ ಎಲ್ಲಾ ತಾಲೂಕುಗಳ ಆರೋಗ್ಯಾಧಿಕಾರಿಗಳು, ತಜ್ಞವೈದ್ಯರು, ವೈದ್ಯಾಧಿಕಾರಿಗಳು, ವಿವಿಧ ಇತರೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಸೈಟ್ ಕೊಡದ ಪೃಥ್ವಿ ಬಿಲ್ಡರಗೆ ದಂಡ ವಿಧಸಿ ಮತ್ತು ಪರಿಹಾರ ಕೊಡಲು ಗ್ರಾಹಕರ ಆಯೋಗ ಆದೇಶ

**ಧಾರವಾಡ** : ಹುಬ್ಬಳ್ಳಿಯ ಪೃಥ್ವಿ ಬಿಲ್ಡರ್ ಹಾಗೂ ಡೆವಲಪರ್‌ನ ಪಾಲುದಾರರಾದ ಶಿವನಗೌಡ ಪಾಟೀಲ ಎಂಬುವವರು ತಡಸಿನಕೊಪ್ಪಾ ಗ್ರಾಮದಲ್ಲಿ ಅಭಿವೃದ್ಧಿಪಡಿಸುತ್ತಿದ್ದ ಲೇಔಟನಲ್ಲಿ, ಬೆಳಗಾವಿಯ ರಾಮತೀರ್ಥ ನಗರದ ಕೃಷ್ಣಾ ಮನಾಯಿ, ಧಾರವಾಡದ ಗಾಂಧಿನಗರದ ನಿರ್ಮಲಾ ಕುಲಕರ್ಣಿ ಹಾಗೂ ಬೆಂಗಳೂರಿನ ವಿಜಯ ನಗರದ ನಿವಾಸಿಗಳು ಸೈಟ್ ಪಡೆದುಕೊಳ್ಳಲು ಇಚ್ಚಿಸಿ ಪೃಥ್ವಿ ಡವಲಪರ್ಸ್ ಜೊತೆ ಪ್ಲಾಟ ನಂ.58, 62 ಮತ್ತು 91 ಬಗ್ಗೆ ಮಾರಾಟದ ಒಪ್ಪಂದ ಮಾಡಿಕೊಂಡು, ಪ್ಲಾಟ್‌ಗೆ ಕಂತುಗಳ ಮುಖಾಂತರ ರೂ.6,31,000, ರೂ.6,49,200 ಹಾಗೂ ರೂ.5,51,245 ರೂಪಾಯಿ ಹಣ ಸಂದಾಯ ಮಾಡಿದ್ದರು. ಸಾಕಷ್ಟು ಕಾಲಾವಕಾಶ ಕಳೆದರೂ ಬಿಲ್ಡರ ಲೇಔಟ್ ನಿರ್ಮಾಣ ಮಾಡದೇ, ತಮಗೆ ಬುಕ್ ಮಾಡಿದ ಸೈಟ್ ಕೊಡದೇ ಸೇವಾ ನೂನ್ಯತೆ ಎಸಗಿ ಮತ್ತು ಮೋಸ ಮಾಡಿದ್ದಾರೆ ಅಂತಾ ಹೇಳಿ ದೂರುದಾರರೆಲ್ಲರು ವಯಕ್ತಿಕವಾಗಿ ಬಿಲ್ಡರ್ ಮೇಲೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಗ್ರಾಹಕರ ಆಯೋಗಕ್ಕೆ ದಿ:26/03/2025, 03/05/2025, 25/03/2025 ರಂದು ತಮ್ಮ ದೂರುಗಳನ್ನು ಸಲ್ಲಿಸಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ವಿ.ಅ. ಬೋಳಶೆಟ್ಟಿ ಸದಸ್ಯರು ದೂರುದಾರರಿಂದ ಮುಂಗಡವಾಗಿ ಪಡೆದ ಹಣವನ್ನು ಡೆವಲಪರ್ ತಮ್ಮ ವೈಯಕ್ತಿಕ ಅಭಿವೃದ್ಧಿಗಾಗಿ ಉಪಯೋಗಿಸಿಕೊಂಡು ಅವರಿಗೆ ಪ್ಲ್ಯಾಟುಗಳನ್ನು ಕೊಡದೇ ಗ್ರಾಹಕರ ರಕ್ಷಣಾ ಕಾಯಿದೆ ಅಡಿ ಸೇವಾ ನ್ಯೂನ್ಯತೆ ಎಸಗಿ ಮೋಸ ಮಾಡಿರುತ್ತಾರೆ ಅಂತಾ ಆಯೋಗ ಅಭಿಪ್ರಾಯ ಪಟ್ಟು ತೀರ್ಪು ನೀಡಿದೆ. ಈ ಬಗ್ಗೆ ಪೃಥ್ವಿ ಬಿಲ್ಡರ್ ಹಾಗೂ ಡೆವಲಪರ್‌ನ ಪಾಲುದಾರರಾದ ಶಿವನಗೌಡ ಪಾಟೀಲ ರವರು ದೂರುದಾರರಿಂದ ಪಡೆದ ಹಣ ಜೊತೆಗೆ ಶೆ.10 ರಂತೆ ಹಣ ಸಂದಾಯವಾದ ದಿನಾಂಕದಿಂದ ಬಡ್ಡಿ ಲೆಕ್ಕ ಹಾಕಿ ಒಂದು ತಿಂಗಳ ಒಳಗಾಗಿ ಪೂರ್ತಿ ಹಣಕೊಡಲು ಆಯೋಗ ಆದೇಶಿಸಿದೆ. ಜೊತೆಗೆ ದೂರುದಾರರು ಅನುಭವಿಸಿದ ಮಾನಸಿಕ ತೊಂದರೆ ಹಾಗೂ ಅನಾನುಕೂಲತೆಗಾಗಿ ತಲಾ ರೂ.50,000 ಪರಿಹಾರ ಹಾಗೂ ರೂ.10,000 ಪ್ರಕರಣದ ಖರ್ಚು ವೆಚ್ಚ ನೀಡುವಂತೆ ಆಯೋಗ ಪೃಥ್ವಿ ಡವಲಪರ್ಸ್‌ಗೆ ನಿರ್ದೇಶಿಸಿದೆ.

## ಪಂಚಾಚಾರ್ಯ ಸೊಸಾಯಿಟಿಗೆ 31.67 ಲಕ್ಷ ರೂ ಲಾಭ



**ಗೋಕಾಕ** ; ನಗರದ ಪ್ರತಿಷ್ಠಿತ ಶ್ರೀ ಜಗದ್ಗುರು ಪಂಚಾಚಾರ್ಯ ಅರ್ಬನ ಸೊಸಾಯಿಟಿಗೆ ಪ್ರಸಕ್ತ ವರ್ಷದಲ್ಲಿ 31.67 ಲಕ್ಷ ರೂಪಾಯಿಗಳು ಲಾಭವಾಗಿರುತ್ತದೆ ಎಂದು ಅಧ್ಯಕ್ಷರಾದ ಎಮ್. ಈ. ಹಿರೇಮಠ ಅವರು ಹೇಳಿದರು.

ಸೊಸಾಯಿಟಿಯ 34ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘದ ವಾರ್ಷಿಕ ವಹಿವಾಟು 30 ಕೋಟಿ ಆಗಿದ್ದು ದುಡಿಯುವ ಬಂಡವಾಳ 10 ಕೋಟಿ ಮೀ-ರಿದೆ. 31-03-2025 ಕ್ಕೆ 31.67 ಲಕ್ಷ ರೂಪಾಯಿಗಳು ಲಾಭವಾಗಿರುತ್ತದೆ ಎಂದು ವಿವರಿಸಿದರು.

ಉಪಾಧ್ಯಕ್ಷರಾದ ಆರ್ ಪಿ ಹಿರೇಮಠ ಅವರು, ಸದಸ್ಯರಿಗೆ 18% ಡಿವಡೆಂಡನ್ನು ಘೋಷಿಸಿದರು. ಹೆಚ್ಚು ಅಂಕ ಪಡೆದು ಸಾಧನೆ ಮಾಡಿದ ಸದಸ್ಯರ ಮಕ್ಕಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಿ ಪ್ರೋತ್ಸಾಹ ನೀಡಲಾಯಿತು.

ಪಂಚಾಚಾರ್ಯ ಅರ್ಬನ ಸೊಸಾಯಿಟಿಯ ಸದಸ್ಯರಾದ ಹೊಸಮಠ, ಕುಮಾರಮಠ, ಸುಬ್ಬಾಪೂರಮಠ, ಮುನ್ನೋಳಿಮಠ, ಹಿರೇಮಠ, ಬಸ್ತವಾಡಕರ, ಕಡಪಟ್ಟಿ, ಹುಚ್ಚರಾಮಗೋಳ, ಪೂಜಾರಿ, ಹಿರೇಮಠ ಹಾಗೂ ಪ್ರಭಾರಿ ಸಿ ಇ ಓ ಶ್ರೀಮತಿ ಎಸ್ ಸಿ ಅಂಬಲಿ ಹಾಗೂ ಸಿಬಂದಿ ವರ್ಗ ಮತ್ತು ಸರ್ವ ಸದಸ್ಯರು ಹಾಜರಿದ್ದರು .

****

## ಯೋಗದಾ ಸತ್ಸಂಗ ಧ್ಯಾನ ಮಂಡಳಿಯಿಂದ ಶ್ರೀ ಕೃಷ್ಣ ಜನ್ಮಾಷ್ಟಮಿಯ ವಿಶೇಷ ಆಚರಣೆ



**ಬೆಳಗಾವಿ:** ನಗರದ ಯೋಗದಾ ಸತ್ಸಂಗ ಧ್ಯಾನ ಮಂಡಳಿಯಿಂದ ಶ್ರೀ ಕೃಷ್ಣ ಜನ್ಮಾಷ್ಟಮಿಯನ್ನು ಒಂದು ದಿನದ ದೀರ್ಘಧ್ಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದರ ಮೂಲಕ ವಿಶಿಷ್ಟವಾಗಿ ಆಚ-ರಿಸಲಾಯಿತು.

ವಿಷ್ಣುವಿನ 8ನೇ ಅವತಾರವಾಗಿರುವ ಶ್ರೀಕೃಷ್ಣ, ಬಾಲ್ಯದ ದಿನಗಳಲ್ಲಿ ಕಷ್ಟಗಳನ್ನು ಅನುಭವಿಸಿ, ಗೋಪಾಲಕನಾಗಿ ಗೋಕುಲವನ್ನು ರಂಜಿಸಿ, ಇಡೀ ಭರತ ಖಂಡದ ಪ್ರಭಾವಿಯಾಗಿ ಬೆಳೆದ. ಈ ವಿಶೇಷ ಗುಣ ಗಮನದಲ್ಲಿಟ್ಟುಕೊಂಡೇ, ತ್ಯಾಗರಾಜರು ತಮ್ಮ ಕೀರ್ತನೆಯೊಂದರಲ್ಲಿ ಬೋಧಿಸಿದ ಸನ್ಮಾರ್ಗಗಳನ್ನು ತಾನೇ ಮುರಿದು, ಹಿಡಿದ ಹಠ ಸಾಧಿಸಿದ ಎಂದು ವರ್ಣಿಸಿದ್ದಾರೆ. ಹಾಗಾಗಿಯೇ ಎಲ್ಲವನ್ನೂ ಅರಿತ ಆತನನ್ನು 'ಕೃಷ್ಣಂ ವಂದೇ ಜಗದ್ಗುರುಂ' ಎಂದು ಹೇಳುತ್ತೇವೆ ಎಂದು ದೀರ್ಘಧ್ಯಾನದಲ್ಲಿ ಕೃಷ್ಣನನ್ನು ನೆನೆಯುವ ಕಾರ್ಯ ಮಾಡಲಾಗುತ್ತಿದೆ ಎಂದು ಶಶಿಕಾಂತ ಚುನಮರಿಯವರು ತಿಳಿಸಿದರು.

ಜನ್ಮಾಷ್ಟಮಿ ಉತ್ಸವವು ಈ ಭೂಮಿಯಲ್ಲಿ ಭಗವಾನ್ ಕೃಷ್ಣನ ಅವತಾರದ ಜನ್ಮದಿನದ ಸ್ಮರಣಾರ್ಥವಾಗಿದ್ದು, ಪ್ರತಿ ಸಂವತ್ಸರವು ನಮ್ಮ ಜೀವನ ಹಾಗೂ ನಮ್ಮ ಎಲ್ಲ ಕಾರ್ಯಗಳನ್ನು ಭಗವಂತನಿಗೆ ಸಮರ್ಪಿಸುವಂತೆ ನೆನಪಿಸುತ್ತದೆ. ಭಗವಾನ್ ಕೃಷ್ಣನ ಅಮರ ಸಂದೇಶವನ್ನು ನಾವು ಭಗವದ್ಗೀತೆಯ ಮೂಲಕ ಕಲಿಯುತ್ತೇವೆ

ನಮ್ಮ ಪಯಣದ ಹಾದಿಯಲ್ಲಿ ಅಡ್ಡಲಾಗಿರುವ ಎಲ್ಲಾ ಪರೀಕ್ಷೆಗಳನ್ನು ಮತ್ತು ಪ್ರಯೋಗಗಳನ್ನು ಮೀರಿಸಿ, ನಿರಂತರವಾಗಿ ನಮ್ಮ ಮನಸ್ಸನ್ನು ಭಗವಂತನಲ್ಲಿ ಕೇಂದ್ರೀಕರಿಸಲು ಸ್ಫೂರ್ತಿ ನೀಡುತ್ತಿವೆ.

ಪರಮಹಂಸ ಯೋಗಾನಂದರು, ವಿಶ್ವಮಾನ್ಯ ಆದ-ೃತ್ಮದ ಮೇರುಕೃತಿ 'ಯೋಗಿಯ ಆತ್ಮಕಥೆ'ಯ ಲೇಖಕರು, ಭಗವದ್ಗೀತೆಯ ಮೇಲೆ 'ಗಾಡ್ ಟಾಕ್ಸ್ ವಿತ್ ಅರ್ಜುನ' ಎಂಬ ಎರಡು ಸಂಪುಟಗಳ ವ್ಯಾಖ್ಯಾನ ಗ್ರಂಥವನ್ನು ಬರೆದಿರುವರು.

ಯೋಗಾನಂದಜಿಯವರು, ಭಗವದ್ಗೀತೆಯ ಮೇಲಿನ ಆಳವಾದ ಆಧ್ಯಾತ್ಮಿಕ ವ್ಯಾಖ್ಯಾನದ, ಪರಿಚಯಾತ್ಮಕ ಲೇಖನದಲ್ಲಿ ಹೀಗೆ ತಿಳಿಸಿರುವರು, "ಒಬ್ಬ ವ್ಯಕ್ತಿಯು ಭಗವಂತ ನೆಡೆಗೆ ಹಿಂತಿರುಗುವ ಮಾರ್ಗದಲ್ಲಿ ಎಲ್ಲಿರುವನೋ, ಅಲ್ಲಿಂದಲೇ ಗೀತೆಯು ಆ ಪಯಣದ ಮೇಲೆ ತನ್ನ ಬೆಳಕು ಬೀರುತ್ತದೆ." ಯೋಗಾನಂದ-ಜಿಯವರು ಭಗವದ್ಗೀತೆಯ ಅಂತರಾರ್ಥದ ಮೇಲಿನ ತಮ್ಮ ಭಾಷ್ಯದಲ್ಲಿ, ಕುರುಕ್ಷೇತ್ರ ಯುದ್ಧದ ನಿಜವಾದ ಮಹತ್ವ ಮತ್ತು ಯುದ್ಧದ ಪ್ರಾರಂಭಕ್ಕೆ ಮೊದಲೇ ಅರ್ಜುನನ ಹತಾಶೆಯು, ತನ್ನ ಅಂತಿಮ ಗುರಿಯಾದ ಆತ್ಮದ ವಿಮೋಚನೆಗಾಗಿ, ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಆಸೆ ಮತ್ತು ಹವ್ಯಾಸಗಳನ್ನು ತೊರೆಯಲು ಮತ್ತು ಧರ್ಮ ಯುದ್ಧ ಮಾಡಲು ಇಷ್ಟವಿಲ್ಲದಿರುವಿಕೆಯನ್ನು ತೋರಿಸುತ್ತದೆ ಎಂದು ತಿಳಿಸಿದರು.

ಅತ್ಯಂತ ದೃಢವಾಗಿ ನಾವು ಭಗವಂತನಲ್ಲಿ ಐಕ್ಯತೆಯನ್ನು ಹೊಂದಲು ಹಾತೊರೆಯುತ್ತಿರಬೇಕು ಮತ್ತು ನಾವು ನಮ್ಮ ಜೀವನಗಳ ಪಯಣವನ್ನು ಆ ಗುರಿಯತ್ತ ಮುನ್ನಡೆಸಲು ಪ್ರಯತ್ನಿಸಬೇಕು ಎಂದು ನಮಗೆ ನೆನಪಿಸುವುದೇ ಜನ್ಮಾಷ್ಟಮಿಯ ನಿಜವಾದ ಮಹತ್ವವಾಗಿದೆ ಎಂದು ಶ್ರೀ ಶಶಿಕಾಂತ ಚುನಮ-ರಿಯವರು ಹೇಳಿದರು.

## ಸದ್ಭಾವನಾ ದಿನ : ಪ್ರತಿಜ್ಞಾವಿಧಿ ಬೋಧನೆ



**ಬಾಗಲಕೋಟೆ:** : ಪ್ರತಿ ವರ್ಷದಂತೆ ಈ ವರ್ಷವೂ ಸದ್ಭಾವನಾ ದಿನದ ಅಂಗವಾಗಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ಸಂಗಪ್ಪ ಅವರ ನೇತೃತ್ವದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಪ್ರತಿಜ್ಞಾವಿಧಿ ಬೋಧಿಸಿದರು.

ಜಾತಿ, ಧರ್ಮ, ಪ್ರದೇಶ, ಮತ ಅಥ-ವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯನಿರ್ವಹಿಸುತ್ತೇನೆ ಎಂದು ಪ್ರತಿಜ್ಞೆ ಮಾಡಲಾಯಿತು. ಅಲ್ಲದೇ ವೈಯಕ್ತಿಕವಾಗಿಯಾಗಲೀ, ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೇ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಮಾಡಲಾಯಿತು. ಪ್ರತಿಜ್ಞಾವಿಧಿಯಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

## ಶಾಂತರೀತಿಯಿಂದ ಗಣೇಶ- ಈದ್‌ಮಿಲಾದ ಹಬ್ಬವನ್ನು ಆಚರಿಸಿ : ಡಿಸಿ ಸಂಗಪ್ಪ

**ಬಾಗಲಕೋಟೆ:** : ಜಿಲ್ಲೆಯಲ್ಲಿ ಆಗಸ್ಟ 27 ರಂದು ಆಚರಿಸಲ್ಪಡುವ ಗಣೇಶ ಉತ್ಸವ ಹಾಗೂ ಸೆಪ್ಟೆಂಬರ 5 ರಂದು ಆಚರಿಸಲ್ಪಡುವ ಈದ್‌ಮಿಲಾದ ಹಬ್ಬವನ್ನು ಶಾಂತರೀತಿಯಿಂದ, ಸಂಭ್ರಮ ಸಡಗರದಿಂದ ಆಚರಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಕರೆ ನೀಡಿದರು.

ಜಿಲ್ಲಾಡಳಿತ ಭವನದ ಆಡಿಟೋ-ರಿಯಂ ಹಾಲ್‌ನಲ್ಲಿ ಸೋಮವಾರ ಗಣೇಶ ಉತ್ಸವ ಹಾಗೂ ಈದಮಿಲಾದ್ ಹಬ್ಬದ ಕು-ರಿತು ಜರುಗಿದ ಶಾಂತತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕಾನೂನು ಸುವ್ಯವಸ್ಥೆಗೆ ಯಾವುದೇ ರೀತಿಯಲ್ಲಿ ದಕ್ಕೆ ಬರದಂತೆ ಹಬ್ಬವನ್ನು ಆಚರಿಸಬೇಕು. ಹಬ್ಬದ ಆಚರಣೆಗೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆ ಸಂಪೂರ್ಣವಾಗಿ ಸಹಕಾರ ನೀಡಲಿದ್ದು, ಮಣ್ಣಿನಿಂದ ತಯಾರಿಸಿದ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲು ಮುಂದಾಗಬೇಕು ಎಂದು ತಿಳಿಸಿದರು.



ಸಾರ್ವಜನಿಕ ಗಣೇಶ ಪ್ರತಿಷ್ಠಾಪನೆಗೆ ಅನುಮತಿಗಾಗಿ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಪಿಡಬ್ಲುಡಿ, ಪೊಲೀಸ್, ಹೆಸ್ಕಾಂ ಹಾಗೂ ನಗರಸಭೆಯಿಂದ ಪಡೆಯಬಹುದಾದ ಅನುಮತಿಯಲ್ಲಿ ಅಡೆತಡೆಯಾಗದಂತೆ ಏಕಗವಾಕ್ಷಿ ಪದ್ದತಿಯ ವ್ಯವಸ್ಥೆ ಮಾಡಲಾಗಿದೆ. ಆಚರಣೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಎಷ್ಟು ಸಾಧ್ಯವೋ ಅಷ್ಟು ಪಾಲನೆ ಆಗಬೇಕು ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಗಣೇಶ ಉತ್ಸವ ಮಂಡಳಿಗಳು ಒಗ್ಗಟ್ಟಿನಿಂದ ಆಚರಣೆ ಮಾಡಬೇಕು. ಆಚರಣೆಯಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಬರದಂತೆ ಪೊಲೀಸ್ ಸಿಬ್ಬಂದಿಗಳ ಜೊತೆ ಸ್ವಯಂ ಸೇವಕರಾಗಿ ಕಾರ್ಯನಿರ್ವಹಿಸಬೇಕು. ಗಣೇಶ ವಿಸರ್ಜನೆ ಸಮಯದಲ್ಲಿ ಡಿಸೆ ಸೌಂಡ್ ಸಿಸ್ಟಮ್ ಹಚ್ಚುವದರಿಂದ ಧಾರ್ಮಿಕ ಭಾವನೆ ಮೂಡಲು ಸಾಧ್ಯವಿಲ್ಲ. ಇದರ ಬದಲಾಗ ಜಾನಪದ ಕಲಾತಂಡಗಳ ಮೂಲಕ ಅದ್ದೂ-ರಿಯಾಗಿ ಮೆರವಣಿಗೆ ಮಾಡುವದರ ಜೊತೆಗೆ ನಗರಸಭೆ, ಗ್ರಾಮ ಪಂಚಾಯತಿಯಿಂದ ನಿರ್ಮಿಸಲಾದ ಕೃತಕ ನೀರಿನ ತೊಟ್ಟಿಗಳಲ್ಲಿ ಗಣೇಶ ಮೂರ್ತಿ ವಿಸರ್ಜನೆ ಮಾಡುವಂತೆ ಮನವಿ ಮಾಡಿಕೊಂಡರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾಥ-ರ್ ಗೋಯಲ್ ಮಾತನಾಡಿ ಕಾನೂನು ಸುವ್ಯವಸ್ಥೆಗೆ ದಕ್ಕೆ ಬರದ ರೀತಿಯಲ್ಲಿ ಹಬ್ಬವನ್ನು ಆಚರಣೆ ಆಗಬೇಕು. ಜಿಲ್ಲೆಯ ನಗರ ಪ್ರದೇಶಗಳಲ್ಲಿ ಸಿಸಿಟಿವಿ ಕ್ಯಾಮರಾಗಳಿದ್ದು, ಇವುಗಳ ಮೂಲಕ ಇಲಾಖೆ ಎಲ್ಲವನ್ನು ಗಮನಿಸುತ್ತದೆ. ಸರ್ವಜನಿಕರ ಗಣೇಶ ಪ್ರತಿಷ್ಠಾಪನೆ ಸ್ಥಳಗಳಲ್ಲಿ ಪೆಂಡಾಲ ಹಾಕುವಾಗ ಸಂಚಾರಕ್ಕೆ ಅಡಗಡೆಯಾಗದಂತೆ ನೋಡಿಕೊಳ್ಳಬೇಕು. ಪೊಲೀಸ್ ಸಿಬ್ಬಂದಿಯ ಜೊತೆ ಗಣೇಶ ಮಂಡಳಿಯಿಂದ ವ್ಯಾಲೆಂಟ-ರ್‌ಗಳನ್ನು ಸಹ ನಿಯೋಜಿಸಲು ತಿಳಿಸಿದ ಅವರು ಮೆರವಣಿಗೆಯಲ್ಲಿ ಯಾವ ರೀತಿಯ ಡಿಜೆ ಸೌಂಡ್ ಸಿಸ್ಟಮ್ ಅಳವಡಿಸುತ್ತೀರಿ ಎಂಬುದನ್ನು ಪರಿಶೀಲಿಸಿ ಮುಂದಿನ ಕ್ರಮಕ್ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ವಿವಿಧ ಗಣೇಶ ಉತ್ಸವ ಮಂಡಳಿಯವರು ಪ್ರತಿ ವರ್ಷದಂತೆ ಈ ವರ್ಷವೂ ಡಿಜೆ ಸೌಂಡ್ ಸಿಸ್ಟಮ್‌ಗೆ ಅವಕಾಶ ನೀಡಲು ವಿನಂತಿಸಿದರೆ ಇನ್ನು ಕೆಲವರು ಡಿಸೆ ಬಳಸುವದಿಲ್ಲವೆಂದು ತಿಳಿಸಿದರು. ಈದ್ ಮಿಲಾದ್ ಹಬ್ಬದ ನಿಮಿತ್ಯ ಹಳೆಯ ಬಾಗಲಕೋಟೆ ಮತ್ತು ನವನಗರದಲ್ಲಿ ತಲಾ ಒಂದು ದಿನ ಮೆರವಣಿಗೆ ಅವಕಾಶ ನೀಡುವಂತೆ ಸಮುದಾಯದ ಮುಖಂಡರು ಸಭೆಯಲ್ಲಿ ವಿನಂತಿಸಿಕೊಂಡರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಸೇರಿದಂತೆ ಗಣೇಶ ಉತ್ಸವ ಸಮಿತಿಯ ಮುಖಂಡರು ಹಾಗೂ ಈದ್‌ಮಿಲಾದ್ ಆಚ-ರಣೆ ಸಮಿತಿಯ ಮುಖಂಡರು ಉಪಸ್ಥಿತ-ರಿದ್ದರು.

### ಡಿ.ದೇವರಾಜ ಅರಸು 110ನೇ ಜನ್ಮ ದಿನಾಚರಣೆ : ಭಾವಚಿತ್ರದ ಅದ್ದೂರಿ ಮೆರವಣಿಗೆ

## ದುರ್ಬಲ ವರ್ಗದ ಜನರ ಏಳಿಗೆಗೆ ಶ್ರಮಿಸಿದವರು ದೇವರಾಜ ಅರಸು

**ಬಾಗಲಕೋಟೆ:** : ಹಿಂದುಳಿದವರ ಸರ್ವತೋಮುಖ ಅಭಿವೃದ್ದಿಗಾಗಿ ಹತ್ತು ಹಲವು ಕಾರ್ಯಕ್ರಮವನ್ನು ಹಮ್ಮಿಕೊಂಡು ದುರ್ಬಲ ವರ್ಗದ ಜನರ ಏಳಿಗೆಗೆ ಶ್ರಮಿಸಿದವರು ಡಿ.ದೇವರಾಜ ಅರಸು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಡಿ.ದೇವರಾಜ ಅರಸು 110ನೇ ಜನ್ಮ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಹಾವನೂರು ಆಯೋಗದ ಶಿಫಾರಸ್ಸಿನ ಅನ್ವಯ ನೀಡಲಾದ ಶೈಕ್ಷಣಿಕ ಹಾಗೂ ಔದ್ಯೋಗಿಕ ಮೀಸಲಾತಿ, ಭೂ ಸುದಾರಣೆ ಕಾಯ್ದೆಯನ್ನು ಜಾರಿಗೆ ತರುವ ಮೂಲಕ ಉಳುವವನೆ ಭೂಮಿಯ ಒಡೆಯನನ್ನಾಗಿ ಮಾಡಿದ್ದಾರೆ. ಇಂತಹ ಮಹಾನ್ ನಾಯಕನ ಇತಿಹಾಸವನ್ನು ಇಂದಿನ ಯುವ ಪೀಳಿಗೆ ಅನುಸರಿಸುವ ಅಗತ್ಯವಿದೆ ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಮಾತನಾಡಿ ಅರಸುರು ಅವರು ರಾಜ ಮನೆತನದಲ್ಲಿ ಹುಟ್ಟಿದರೂ



ದೀನದಲಿತರ ಹಾಗೂ ಬಡವರ ಪರವಾಗಿ ಸಮಾಜಮುಖಿ ಕಾರ್ಯಗಳನ್ನು ಮಾಡಲು ಮುಂದಾಗಿದ್ದರು. ಅವರ ಆಡಳಿತಾವಧಿಯಲ್ಲಿ ಜಾರಿಗೆ ತಂದ ಉಳುವವನೆ ಭೂಮಿಯ ಒಡೆಯ ಕಾಯಿದೆಯಿಂದ ಲಕ್ಷಾಂತರ ಬಡ ಕುಟುಂಬಗಳಿಗೆ ಆಧಾರವಾಗಿದೆ. ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅಗತ್ಯವಿರುವ ಎಲ್ಲಾ ರೀತಿಯ ಮೂಲ ಸೌಕರ್ಯಗಳನ್ನು ಒದಗಿಸಲು ಅವರು ಹೋರಾಡಿದ ಪರಿಣಾಮವಾಗಿ, ಇಂದಿನ ಹಿಂದುಳಿದ ವಿದ್ಯಾರ್ಥಿ ನಿಲಯಗಳಲ್ಲಿ ಸಕಲ ಸೌಲಭ್ಯಗಳು ಲಭ್ಯವಾಗುತ್ತಿವೆ ಎಂದರು.

ವಸತಿ ನಿಲಯಗಳ ವಾತಾವರಣದಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ಉತ್ತಮ ಸಾಧನೆಗಳನ್ನು ಮಾಡಿದ್ದಾರೆ. ಕಳೆದ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿನಿಯೂ ಇದೇ ಮುರಾರ್ಜಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿರುವುದು ಇದರ ಸಾಕ್ಷಿ. ಇಂತಹ ಶೈಕ್ಷಣಿಕ ವಾತಾವರಣವನ್ನು ನಿರ್ಮಿಸಲು ಕಾರಣಿಕರ್ತರಾಗಿದ್ದಾರೆ. ವಿದ್ಯಾರ್ಥಿ ನಿಲಯಗಳಲ್ಲಿ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ಗುರಿ ಸಾಧಿಸಲು ಮುಂದಾಗಬೇಕು, ಸಮಸ್ಯೆಗಳು ಎದುರಾದಾಗ ಅವನ್ನು ದೂರಿಸುವುದ ಬೇಡ, ಎದುರಿಸಿ ಗುರಿಯತ್ತ ಸಾಗಬೇಕು ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ನ್ಯಾಯವಾದಿ ಮಹಾಂತೇಶ ಆವಾರಿ ಮಾತನಾಡಿ ದೇವರಾಜ ಅರಸು ಅವರು ಒಬ್ಬ ದಾಕ್ಷಣಿಕ ವ್ಯಕ್ತಿಯಾಗಿದ್ದು, ಕರ್ನಾಟಕವನ್ನು ಸಾಂಸ್ಕೃತಿಕವಾಗಿ ಒಗ್ಗೂಡಿಸುವ ಕೆಲಸ ಮಾಡಿದ್ದಾರೆ. ಮಲ, ಜೀತ ಪದ್ಧತಿ ನಿರ್ಮೂಲನೆ, ದುಡಿಯುವ ವರ್ಗಕ್ಕೆ ಆರ್ಥಿಕ ಸ್ಥಿತಿ ಸುಧಾರಣೆ ಮಾಡುವ ಕಾರ್ಯ ಮಾಡಿದ್ದಾರೆ ಎಂದ ಅವರು ದೇವರಾಜ ಅರಸು ಅವರು ನಡೆದು ಬಂದ ಹಾದಿ ಹಾಗೂ ಆದರ್ಶಗಳ ಬಗ್ಗೆ ವಿವರವಾಗಿ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಇಲಾಖೆಯಲ್ಲಿ ಸೇವೆ ಸಲ್ಲಿಸಿ ವಯೋ ನಿವೃತ್ತಿ ಹೊಂದಿದವರನ್ನು ಸನ್ಮಾನಿಸಲಾಯಿತು. ಅಲ್ಲದೇ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಇಲಾಖೆ ವ್ಯಾಪ್ತಿಯ ವಿವಿಧ ವಸತಿ ನಿಲಯಗಳ ವಿದ್ಯಾರ್ಥಿಗಳನ್ನು ಸಹ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ರಮೇಶ ಚವ್ಹಾಣ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಈರಪ್ಪ ಆಶಾಪೂರ, ತಾಲೂಕಾ ಅಧಿಕಾರಿ ಎಸ್.ಎಂ.ಬಡಿಗೇರ, ಇಲಾಖೆಯ ವ್ಯವಸ್ಥಾಪಕ ಶಿವು ದರಗಾದ, ಸಮುದಾಯದ ಮುಖಂಡ ಶ್ರೀನಿವಾಸ ಬಳ್ಳಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಅಕ್ರಮವಾಗಿ ಅಕ್ಕಿ ಸಾಗಾಟ: ಆಹಾರ ಇಲಾಖೆ ದಾಳಿ-ಅಕ್ಕಿ ವಶ



**ವಿಜಯಪುರ,** : ಜಿಲ್ಲೆಯ ದೇವರಹಿಪ್ಪರಗಿ ತಾಲೂಕಿನ ತಿಳಗುಳ ಗ್ರಾಮದಲ್ಲಿ ಹಾಗೂ ಇಂಡಿ ಪಟ್ಟಣದಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ ಆಹಾರ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ಅಕ್ರಮವಾಗಿ ಸಾಗಿಸುತ್ತಿರುವ ಅಕ್ಕಿಯನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಜಿಲ್ಲೆಯಲ್ಲಿ ದೇವರಹಿಪ್ಪರಗಿ ತಾಲೂಕಿನ ತಿಳಗುಳ ಗ್ರಾಮದಲ್ಲಿ ಟಾಟಾ ಎಸಿ ಗೂಡ್ಸ್ ವಾಹನದಲ್ಲಿ ಅಕ್ರಮವಾಗಿ ಅಕ್ಕಿ ಸಾಗಾಟ ಮಾಡುತ್ತಿರುವ ಸಂದರ್ಭದಲ್ಲಿ ಆಹಾರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ದಾಳಿ ನಡೆಸಿದ 7 ಪ್ಲಾಸ್ಟಿಕ್ ಚೀಲ್‌ಗಳಲ್ಲಿ ತುಂಬಿರುವ ಅಕ್ಕಿ ಹಾಗೂ ಗೂಡ್ಸ್ ವಾಹನವನ್ನು ವಶಕ್ಕೆ ಪಡೆದು, ವಾಹನ ಚಾಲಕ ಸೈಫನ್ ಆಲಮೇಲ್ ಮೇಲೆ ಕಲಕೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಇನ್ನೊಂದು ಪ್ರತ್ಯೇಕ ಘಟನೆಯಲ್ಲಿ ಇಂಡಿ ಪಟ್ಟಣದ ಕುಂಬಾರ ಓಣಿಯ ರಸ್ತೆಯಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ ದಾಳಿ ನಡೆಸಿದ ಅಧಿಕಾರಿಗಳು, 75110 ರೂ. ಮೌಲ್ಯದ 2590 ಕೆ.ಜಿ. ಅಕ್ಕಿ, ಹಾಗೂ ಗೂಡ್ಸ್ ವಾಹನವನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ವಾಹನ ಚಾಲಕ ಪರಾರಿಯಾಗಿದ್ದು, ಈ ಕುರಿತು ಇಂಡಿ ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ತಿಳಗೂಳ ಗ್ರಾಮದಲ್ಲಿ ನಡೆದ ದಾಳಿಯಲ್ಲಿ ದೇವರಹಿಪ್ಪರಗಿ ಆಹಾರ ನಿರೀಕ್ಷಕ ಅಮೋಘ ದಳವಾಯಿ ಹಾಗೂ ಇಂಡಿ ಪಟ್ಟಣದಲ್ಲಿ ನಡೆದ ದಾಳಿಯಲ್ಲಿ ಆಹಾರ ನಿರೀಕ್ಷಕ ಪರಮಾನಂದ ಹೂಗಾರ ಅವರು ನೇತೃತ್ವ ವಹಿಸಿದ್ದರು ಎಂದು ಆಹಾರ ಇಲಾಖೆ ಉಪನಿರ್ದೇಶಕ ವಿನಯಕುಮಾರ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾರ್ಥೇನಿಯಂ ನಿರ್ವಹಣೆ ಕಾರ್ಯಕ್ರಮ



**ಮೂಡಲಗಿ** : ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆಯ, ಕಿತ್ತೂರ ರಾಣಿ ಚನ್ನಮ್ಮ ತೋಟಗಾರಿಕೆ ಮಹಾವಿದ್ಯಾಲಯ, ಅರಭಾವಿಯಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವತಿಯಿಂದ ಪಾರ್ಥೇನಿಯಂ ನಿರ್ವಹಣೆ ಮತ್ತು ಜಾಗೃತಿ ಸಪ್ತಾಹ ಕಾರ್ಯಕ್ರಮವನ್ನು ಮಹಾವಿದ್ಯಾಲಯದ ಡೀನ್ ಡಾ. ಎಮ್.ಜಿ. ಕೆರುಟಗಿ ರವರು ಚಾಲನೆ ನೀಡಿದರು.

ಈ ಕಾರ್ಯಕ್ರಮದ ಪ್ರಯುಕ್ತ ಡೀನ್‌ರವರು ಈ ಕಳೆಯ ಸಮಗ್ರ ನಿರ್ವಹಣೆ ಮತ್ತು ವಿನಾಶಮಾಡುವದು ಅತ್ಯಗತ್ಯವಾಗಿದೆ ಹಾಗೂ ಈ ಕಳೆಯಲ್ಲಿನ ಪಾರ್ಥಿನ ಎಂಬ ಲ್ಯಾಕ್ಟೋನ ಅಂಶ ಮಾನವರಿಗೆ ಹಾಗೂ ಪ್ರಾಣಿಗಳಿಗೆ ತೊಂದರೆಯನ್ನು ಉಂಟುಮಾಡುತ್ತದೆ. ಈ ಕಳೆಯ ಒಂದು ಜಾಗದಿಂದ ಇನ್ನೊಂದು ಜಾಗಕ್ಕೆ ಪ್ರಸಾರವಾಗುವುದನ್ನು ತಡೆಯಬೇಕು. ಕಳೆಯ ಚಿಕ್ಕದಿದ್ದಾಗಲೇ ಹಾಗೂ ಹೋವು ಬಿಡುವ ಮೊದಲೇ ಕೀಳುವುದರಿಂದ ಬೀಜೋತ್ಪಾದನೆ ಕಡಿಮೆಯಾಗಿ ಕಳೆ ಕಡಿಮೆಯಾಗುತ್ತದೆ.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಸಮಸ್ತ ಸಿಬ್ಬಂದಿಯವರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ದೇವರಾಜ ಅರಸು ಪರಿವರ್ತನೆಯ ಹರಿಕಾರ:ಸಿದ್ದಾರ್ಥ ಸಿಂಗೆ

**ಮೋಳೆ ;–** ದಿ.ಡಿ.ದೇವರಾಜ ಅರಸು ಅವರು ತುಳಿತಕ್ಕೊಳಗಾದ ಹಿಂದೂಳಿದ ವರ್ಗದ ಸಮುದಾಯದ ಜನರನ್ನು ಮೇಲೆತ್ತಿ ಸಮಾಜದ ಮುಖ್ಯವಾಹಿನಿಗೆ ತಂದು ಸಾಮಾಜಿಕ ಸಮಾನತೆ ಎತ್ತಿ ಹಿಡಿದ ಮಹಾನ್ ನಾಯಕರಾಗಿದ್ದಾರೆ ಎಂದು ಪಂಚಗ್ಯಾರಂಟಿಯ ಅಧ್ಯಕ್ಷ ಸಿದ್ದಾರ್ಥ ಸಿಂಗೆ ಅವರು ಅಭಿಮತ ವ್ಯಕ್ತ ಪಡಿಸಿದರು.

ಬುಧವಾರ ಜಿಲ್ಲಾ ಪಂಚಾಯತ್ ಬೆಳಗಾವಿ, ತಾಲೂಕಾ ಆಡಳಿತ, ತಾಲೂಕಾ ಪಂಚಾಯತ್ ಅಥಣಿ, ಹಿಂದೂಳಿದ ವರ್ಗಗಳ ಕಲ್ಯಾಣ ಇಲಾಖೆ ಅಥಣಿ, ಇವರುಗಳ ಸಂಯುಕ್ತ ಆಶ್ರಯದಲ್ಲಿ ತಾಲೂಕಾ ಪಂಚಾಯತ್ ಸಭಾ ಭವನದಲ್ಲಿ ಜಿಲ್ಲಾ ಪಂಚಾಯತ್ ಬೆಳಗಾವಿ, ಹಿಂದೂಳಿದ ವರ್ಗಗಳ ಕಲ್ಯಾಣ ಇಲಾಖೆ, ಇವುಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ ಏರ್ಪಡಿಸಿದ ಮಾಜಿ ಮುಖ್ಯಮಂತ್ರಿ ದಿ.ಡಿ.ದೇವರಾಜ ಅರಸು ಅವರ 110 ನೇ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ತುಳಿತಕ್ಕೋಳಗಾಗಿದ್ದ 21 ಲಕ್ಷ ಸಮುದಾಯಗಳ ಕುಟುಂಬಗಳಿಗೆ



ಸುಮಾರು4.5 ಲಕ್ಷ ಎಕ್ಕರ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯಡಿ ತರುವ ಮೂಲಕ ಹಂಚಿಕೆ ಮಾಡಿದ ಮಹನಿರು, ದೇವರಾಜ ಅರಸು ಕೇವಲ ಒಬ್ಬ ರಾಜಕಾರಣಿ ಆಗಿರಲಿಲ್ಲ. ಇಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಜಿ ಮುಖ್ಯಮಂತ್ರಿ ಧರ್ಮಸಿಂಗಗೆ ,ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಡಾ.ಜಿ.ಪರಮೇಶ್ವರ ಸೇರಿದಂತೆ ಇಂದಿನ ಅನೇಕ ರಾಜಕಾರಣಿಗಳನ್ನು ನಾಯಕರನ್ನಾಗಿಸಿದ ಕೀತಿ ದೇವರಾಜ ಅರಸು ಅವರಿಗೆ ಸಲ್ಲುತ್ತದೆ ಎಂದರು.

ಉಪನ್ಯಾಸಕರಾಗಿ ಆಗಮಿಸಿದ ಶ್ರೀಮತಿ ಪ್ರಿಯವಂದಾ ಅನೆಪ್ಪನವರ ದಿ.ಡಿ.ದೇವರಾಜ ಅರಸು ಅವರು ಉಳುವವನೇ ಒಡೆಯ ಎಂಬ ಕಾನೂನು ಜಾರಿಗೆ ಜಾರಿಗೆ ತರುವ ಮೂಲಕ ಬಾಳಿಗೆ ಬೆಳಕಾಗಿದ್ದವರು. ಹೀಗಾಗಿ ನಾವೆಲ್ಲರೂ ಅರಸು ಅವರ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಹಿಂದೂಳಿದ ವರ್ಗಗಳ ಕಲ್ಯಾಣಾಧಿಕಾರಿ ವೆಂಕಟೇಶ ಕುಲಕರ್ಣಿ, ಸನ್ಮಾನ ಸ್ವೀಕರಿಸಿ ಮಾತನಾಡಿ ಅಥಣಿ ಮತ್ತು ಕಾಗವಾಡ ತಾಲೂಕುಗಳು ಸೇರಿ 18 ವಸತಿ ನಿಲಯಗಳಿದ್ದು, ಈ ನಿಲಯಗಳ ಮೂಲಕ ಹೈಸ್ಕೂಲ್ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಊಟ,ವಸತಿ ಸೇರಿದಂತೆ ಶೈಕ್ಷಣಿಕ ಅನುಕೂಲತೆ ಗಳನ್ನು ಒದಗಿಸಲಾಗುತ್ತಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಪುರಸಭೆ ಅಧ್ಯಕ್ಷೆ ಶಿವಲೀಲಾ ಬುಟಾಳೆ,ಉಪಾಧ್ಯಕ್ಷೆ ಭುವನೇಶ್ವರಿ ಯಕ್ಕಂಚಿ ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಆರ್.ಮುಂಜೆ, ಗ್ರೇಡ್ 2 ತಹಸೀಲ್ದಾರ ಮಹಾದೇವ.ಬಿರಾದಾರಜಿ. ಎಸ್.ಮಠದ,ಸತೀಶ ಬಸಗೌಡರ,ರಾಜು ಗುಡೋಡಗಿ, ಸೇರಿದಂತೆ ಅನೇಕರು ಇದ್ದರು

### ಕರ್ನಾಟಕ ರಾಜ್ಯ ಪರಿಶಿಷ್ಟ ಪಂಗಡಗಳ ನೌಕರರ ಸಂಘದ ಸಭೆ

## ಶೋಷಿತ ಸಮುದಾಯಗಳು ಸಂಘಟನೆ ನಿರಂತರ ಪ್ರಕ್ರಿಯೆ-ಸಚಿವ ಸತೀಶ್ ಜಾರಕಿಹೊಳಿ

**ಬೆಂಗಳೂರು,** : ಪರಿಶಿಷ್ಟ ಪಂಗಡದಲ್ಲಿರುವ ವಾಲ್ಮೀಕಿನಾಯಕ ಸಮುದಾಯವೂ ಸೇರಿದಂತೆ ಎಲ್ಲ ತಳಸಮುದಾಯಗಳು ಸಂಘಟಿತರಾದರೆ ಮಾತ್ರ ಸಾಮಾಜಿಲ,ರಾಜಕೀಯ, ಆರ್ಥಿಕ ವಿಕಸನ ಸಾಧ್ಯ.ಸಂಘಟನೆ ಕಾರ್ಯ ಎಂಬುದು ನಿರಂತರ ಪ್ರಕ್ರಿಯೆ ಎಂದು ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಹೇಳಿದರು.

ಇಲ್ಲಿನ ಗಾಂಧಿನಗರದ ಸ್ಯಾಂಕ್ಟಮ್ ಹೋಟೇಲಿನ ಸಭಾಂಗಣದಲ್ಲಿ (ಮಂಗಳವಾರ, ಅಗಸ್ಟ್ 20) ಆಯೋಜಿಸಿದ್ದ ಪರಿಶಿಷ್ಟ ಪಂಗಡಗಳ ನೌಕರರು ಹಾಗೂ ಜನಪ್ರತಿನಿಧಿಗಳ ಸಮಾಲೋಚನೆ ಸಭೆ ಉದ್ದೇಶಿಸಿ ಅವರು ಮಾತನಾಡಿದರು.

ಶೋಷಿತ ಸಮಾಜದಲ್ಲಿ ಶಿಕ್ಷಣ ಪಡೆದು ನೌಕರಿ ಮಾಡುತ್ತಿರುವ ಜನರ ಮೇಲೆ ಹೆಚ್ಚು ಜವಾಬ್ದಾರಿಗಳಿವೆ.ಪರಿಶಿಷ್ಟ ಪಂಗಡದ ನೌಕರರು ತಮ್ಮ ವೃತ್ತಿ ಸಂಬಂಧಿತ ಮುಂಬಡ್ತಿ,ವರ್ಗಾವಣೆ, ಸ್ಥಳ ನಿಯುಕ್ತಿ



ಸೇರಿದಂತೆ ಅನೇಕ ವಿಷಯಗಳಲ್ಲಿ ಎದುರಿಸುತ್ತಿರುವ ಸಮಸ್ಯೆ ,ಸವಾಲುಗಳನ್ನು ಸಂಘಟಿತರಾದಾಗ ಪರಿಹಾರ ಕಂಡುಕೊಳ್ಳಲು ಮಾರ್ಗಗಳು ದೊರೆಯುತ್ತವೆ.ಕಾನೂನು ತಜ್ಞ ಎಲ್.ಜಿ.ಹಾವನೂರ ಹಾಗೂ ಅವರಿಗಿಂತ ಹಿಂದಿನಿಂದಲೂ ಸಮಾಜದ ಸಂಘಟನೆಗೆ ಅನೇಕರು ಶ್ರಮಿಸಿದ್ದಾರೆ. ಇದೊಂದು ನಿರಂತರ ಪ್ರಕ್ರಿಯೆ, ಪ್ರತಿಯೊಬ್ಬ ಪ್ರಜ್ಞಾವಂತರು ಸಂಘಟನೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದರು.

ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದ ಡಾ.ಪ್ರಸನ್ನಾನಂದ ಮಹಾಸ್ವಾಮಿಗಳು ಮಾತನಾಡಿ, ಆದಿಕವಿ ಮಹರ್ಷಿ ವಾಲ್ಮೀಕಿ ಹಾಗೂ ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ವಿಚಾರಗಳನ್ನು ನಾವೆಲ್ಲ ಅಳವಡಿಸಿಕೊಂಡು ಅನುಷ್ಠಾನಗೊಳಿಸಬೇಕು ಎಂದರು.

ಶಾಸಕರಾದ ಅನ್ನಪೂರ್ಣ ತುಕಾರಾಮ, ಕರೆಮ್ಮನಾಯಕ,ಅನೀಲ್ ಚಿಕ್ಕಮಾದು,ಟಿ. ರಘುಮೂರ್ತಿ,ಜೆ.ಎನ್.ಗಣೇಶ್ ,ಡಾ. ಎನ್.ಟಿ.ಶ್ರೀನಿವಾಸ ,ಚನ್ನಗಿರಿಯ ಮುಖಂಡ ಹೊದಿಗೆರೆ ರಮೇಶ ಮತ್ತಿತರರು ಮಾತನಾಡಿದರು.

ಕರ್ನಾಟಕ ರಾಜ್ಯ ಎಸ್ ಟಿ ನೌಕರರ ಸಂಘದ ಅಧ್ಯಕ್ಷ ಜಗದೀಶ್ವರಮೂರ್ತಿ ವೈ.ಪಿ.,ಲೋಕೇಶ ನಾಯಕ ,ಪಂಪಾಪತಿ ಮತ್ತಿತರರು ನೌಕರರ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದರು. ಈ ಕುರಿತು ಸಚಿವರಿಗೆ ಮನವಿ ಅರ್ಪಿಸಿದರು.

ವಾಲ್ಮೀಕಿ ನಾಯಕ ಜನಾಂಗದ ನಿವೃತ್ತ ಹಿರಿಯ ಅಧಿಕಾರಿಗಳು, ನ್ಯಾಯಾಧೀಶರು ಸೇರಿದಂತೆ ಪ್ರಸ್ತುತ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೂರಾರು ನೌಕರರು ರಾಜ್ಯದ ಎಲ್ಲ ಜಿಲ್ಲೆಗಳಿಂದ ಆಗಮಿಸಿದ್ದರು.

ಅನ್ನಪೂರ್ಣ ಪ್ರಾರ್ಥಿಸಿದರು, ಮಂಜುನಾಥ ಡೊಳ್ಳಿನ ಸ್ವಾಗತಿಸಿದರು,ಎ.ಸಿ.ತಿಪ್ಪೇಸ್ವಾಮಿ ಪ್ರಾಸ್ತಾವಿಕ ಮಾತನಾಡಿದರು.ಡಾ.ಗವಿಸಿದ್ದಪ್ಪ ಮುತ್ತಾಳ ನಿರೂಪಿಸಿದರು.

## ಎನ್‌ಡಿಎ ಅಭ್ಯರ್ಥಿ ಸಿ.ಪಿ. ರಾಧಾಕೃಷ್ಣನ್ ಸಂಸದ ಕಡಾಡಿ ಭೇಟಿ



**ಮೂಡಲಗಿ** : ಭಾರತದ ಉಪರಾಷ್ಟ್ರಪತಿ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿಯಾಗಿ ಆಯ್ಕೆಯಾಗಿರುವ ಮಹಾರಾಷ್ಟ್ರದ ರಾಜ್ಯಪಾಲರಾದ ಸಿ.ಪಿ. ರಾಧಾಕೃಷ್ಣನ್ ಅವರನ್ನು ನವದೆಹಲಿಯಲ್ಲಿ ಕೇಂದ್ರ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರಾದ ಪ್ರಹ್ಲಾದ್ ಜೋಶಿ ಅವರ ನಿವಾಸದಲ್ಲಿ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಭೇಟಿಯಾಗಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಖ್ಯಾತ ಚಲನಚಿತ್ರ ನಟ ಹಾಗೂ ರಾಜ್ಯಸಭಾ ಸಂಸದ ಜಗ್ಗೇಶ್, ಸಂಸದರಾದ ನಾರಾಯಣಸಾ ಭಾಂಡಗೆ, ಕೆ. ನಾರಾಯಣ ಸೇರಿದಂತೆ ಕರ್ನಾಟಕ, ಆಂದ್ರಪ್ರದೇಶ ಹಾಗೂ ತಮಿಳನಾಡು ರಾಜ್ಯಗಳ ಸಂಸದರು ಉಪಸ್ಥಿತರಿದ್ದರು.

## ಆಕ್ಷೇಪಣೆಗೆ ಆಹ್ವಾನ

ಬೆಳಗಾವಿ, : ಮಹಾರಾಷ್ಟ್ರ ರಾಜ್ಯ ಗಡಿಯಿಂದ ರಾಕಸಕೊಪ್ಪ ಸುತಗಟ್ಟಿ ರಾ.ಹೆ.–04 (ಸಹ್ಯಾದ್ರಿ ನಗರ ಪರಿಮಿತಿ) ರಸ್ತೆಯ ಚೈನೇಜ್ ನಂ. 25.025 ರಿಂದ 27.000 ರ ವರೆಗೆ ರಸ್ತೆಯ ಅಗಲೀಕರಣ ಕಾಮಗಾರಿಗೆ ಮಧ್ಯ ಬರುವ ವಿವಿಧ ಜಾತಿಯ 106 ಮರಗಳನ್ನು ತೆರವುಗೊಳಿಸಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರು, ಲೋಕೋಪಯೋಗಿ ಇಲಾಖೆ, ಬೆಳಗಾವಿ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಸದರಿ ಪ್ರದೇಶದಲ್ಲಿ 50 ಮರಗಳಿಗಿಂತ ಹೆಚ್ಚಿಗೆ ಮರಗಳು ಇರುವುದರಿಂದ ಕರ್ನಾಟಕ ಮರಗಳ ಸಂರಕ್ಷಣಾ ಕಾಯ್ದೆ 1976 ನಿಯಮ 8(3) (ಗಿಖಖ) ರ ಪ್ರಕಾರ ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಪಡೆಯಬೇಕಾಗಿರುವುದರಿಂದ ಆಕ್ಷೇಪಣೆಗಳಿದಲ್ಲಿ ಸಾರ್ವಜನಿಕರು ದಿನಾಂಕ: 30–08–2025 ರೊಳಗಾಗಿ ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ವಿಭಾಗ ಕಚೇರಿಗೆ ಲಿಖಿತವಾಗಿ ಸಲ್ಲಿಸುವುದು ಅಥವಾ ಸದರಿ ದಿನದಂದು ಬೆಳಿಗ್ಗೆ 11 ಘಂಟೆಗೆ ಬೆಳಗಾವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿರುವ ಸಾರ್ವಜನಿಕ ಅಹವಾಲು ಸಭೆಯಲ್ಲಿ ಪ್ರಸ್ತಾಪಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

## ಗಂಗೂಬಾಯಿ ಹಾನಗಲ್ ಅವರ ಜನ್ಮ ಸ್ಥಳ ಗಂಗೋತ್ರಿಗೆ ಭೇಟಿ ನೀಡಿ -ಅಭಿವೃದ್ಧಿಯ ಬಗ್ಗೆ ಚರ್ಚಿಸಿದ ಜಿಲ್ಲಾಧಿಕಾರಿ ದಿವ್ಯ ಪ್ರಭು



**ಧಾರವಾಡ** : ಗಾನವಿದೂಷಿ ಗಂಗೂಬಾಯಿ ಹಾನಗಲ್ ಅವರ ಜನ್ಮಸ್ಥಳವಾದ ನಗರದ ಹೊಸಯಲ್ಲಾಪೂರ ಓಣಿಯ ಗಂಗೋತ್ರಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಇಂದು (ಆ.20) ಭೇಟಿ ನೀಡಿ, ಗಂಗೂಬಾಯಿ ಹಾನಗಲ್ ಅವರ ಹುಟ್ಟಿದ ಮನೆ ಅಭಿವೃದ್ಧಿಪಡಿಸುವ ಕುರಿತು ಸ್ಥಳೀಯರು, ಜನಪ್ರತಿನಿಧಿಗಳು ಹಾಗೂ ಸಂಗೀತ ಕಲಾವಿದರೊಂದಿಗೆ ಸ್ಥಳದಲ್ಲಿ ಚರ್ಚಿಸಿದರು.

ಅವರು ಮಾತನಾಡಿ, ಧಾರವಾಡ ಜಿಲ್ಲೆಯ ಕೀರ್ತಿಯನ್ನು ರಾಷ್ಟ್ರೀಯ ಮಟ್ಟದಲ್ಲಿ ಮೆರೆಸಿದ ನಮ್ಮ ಜಿಲ್ಲೆಯ ಹೆಮ್ಮೆಯ ಪುತ್ರಿ, ಸಂಗೀತ ಸುಧೆ ಪದ್ಮವಿಭೂಷಣ ಪುರಸ್ಕೃತ ದಿ. ಗಂಗೂಬಾಯಿ ಹಾನಗಲ್ ಅವರನ್ನು ಸ್ಮರಣೀಯಗೊಳಿಸಲು ಜಿಲ್ಲಾಡಳಿತದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಸಂಗೀತ, ಸಾಹಿತ್ಯ, ಚಿತ್ರಕಲೆ ಮತ್ತು ವೃತ್ತಿ ರಂಗಭೂಮಿಯಲ್ಲಿ ಧಾರವಾಡದ ಪ್ರಸಿದ್ಧಿಯನ್ನು ಅನೇಕ ಕಲಾವಿದರು ದಾಖಲಿಸಿದ್ದಾರೆ. ಅವರ ಕೊಡುಗೆ ಮತ್ತು ಸಾಧನೆಯನ್ನು ನಾವು ಸ್ಮರಿಸುವುದು ಮತ್ತು ಅದನ್ನು ಮುಂದಿನ ಪೀಳಿಗೆಗೆ ಮುಂದುವರೆಸಲು ಅಗತ್ಯ ಸೌಲಭ್ಯ, ಅವಕಾಶಗಳನ್ನು ಮಾಡಿಕೊಡುವುದು ನಮ್ಮ ಕರ್ತವ್ಯವಾಗಿದೆ. ಈ ಹಿನ್ನಲೆಯಲ್ಲಿ ಸರ್ಕಾರ ಮತ್ತು ಇತರ ಉದ್ಯಮಗಳ ಆರ್ಥಿಕ ನೆರವಿನಲ್ಲಿ ಗಂಗೋತ್ರಿಯನ್ನು ಅಭಿವೃದ್ಧಿಪಡಿಸಿ, ಸಂಗೀತ ಕಾರ್ಯ ಚಟುವಟಿಕೆಗಳು ನಿರಂತರವಾಗಿ ನಡೆಯುವಂತೆ ಮಾಡಲು ಜಿಲ್ಲಾಡಳಿತದಿಂದ ಒಂದು ಮುನ್ನೋಟದ ರೂಪರೇಷಗಳನ್ನು ಸಿದ್ಧಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಈಗೀರುವ ಗಂಗೋತ್ರಿಯ ಜಾಗ ಚಿಕ್ಕದಾಗಿರುವದರಿಂದ ಅಕ್ಕಪಕ್ಕದ ಖಾಲಿ ಜಾಗೆಗಳನ್ನು ಪಡೆಯುವ ಕುರಿತು ಅವುಗಳ ಮಾಲೀಕರೊಂದಿಗೆ ಸಂಪರ್ಕಿಸಲಾಗುವುದು. ಒಪ್ಪಿದಲ್ಲಿ ಆ ಜಾಗೆಗಳನ್ನು ಸಹ ಉಪಯೋಗಿಸಿಕೊಂಡು ಉತ್ತಮವಾದ ಸಂಗೀತ–ಸಾಂಸ್ಕೃತಿಕ ಭವನ ಹಾಗೂ ನಿರಂತರವಾಗಿ ಸಂಗೀತ ಪಾಠಶಾಲೆಗಳು ನಡೆಯುವಂತೆ ಮಾಡಲಾಗುವುದು. ಸ್ಥಳೀಯ ಕಲಾವಿದರ, ಸಂಗೀತಗಾರರ ಸಹಕಾರದಿಂದ ನಿರಂತರವಾಗಿ ಸಂಗೀತ ಸಭೆಗಳು ಜರಗುವಂತೆ ಯೋಜಿಸಲಾಗುವುದು. ಹಾಗೂ ಪದ್ಮವಿಭೂಷಣ ಗಂಗೂಬಾಯಿ ಹಾನಗಲ್ ಅವರ ಕಿರಾಣಾ ಘರನಾ ಸಂಗೀತವನ್ನು ಮುಂದುವರೆಸುವ ಆಸಕ್ತರಿಗೆ ಪ್ರೋತ್ಸಾಹಿಸಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಗಂಗೋತ್ರಿಯನ್ನು ಉಪಯುಕ್ತವಾಗಿ ಮಾಡಲು ಕಲಾವಿದರ, ಸಂಗೀತಗಾರರ ಹಾಗೂ ಸ್ಥಳೀಯರ, ಜನಪ್ರತಿನಿಧಿಗಳ ಸಲಹೆ ಹಾಗೂ ಮಾಹಿತಿಯನ್ನು ಪಡೆದುಕೊಳ್ಳಬೇಕು. ಗಂಗೋತ್ರಿಯನ್ನು ಸ್ಮಾರಕವಾಗಿಸಲು ಅಗತ್ಯ ನೀಲನಕ್ಷೆಯನ್ನು ಅಂದಾಜು ವೆಚ್ಚದ ಪಟ್ಟಿಯೊಂದಿಗೆ ಸರ್ಕಾರಕ್ಕೆ ಹಾಗೂ ಸಿಎಸ್‌ಆರ್ ನೆರವಿಗಾಗಿ ಸಲ್ಲಿಸಲು ಅಗತ್ಯ ಪ್ರಸ್ತಾವನೆಯನ್ನು ತಯಾರಿಸಿ, ಒಂದು ವಾರದಲ್ಲಿ ಜಿಲ್ಲಾಡಳತಕ್ಕೆ ಸಲ್ಲಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಿಗೆ ಈ ಸಂದರ್ಭದಲ್ಲಿ ಅವರು ಸೂಚಿಸಿದರು.

ಇದು ಮುಂದಿನ ಪೀಳಿಗೆಗೆ ಸ್ಪೂರ್ತಿ ನೀಡುವ ಪವಿತ್ರ ತಾಣವಾಗಬೇಕು. ಆದ್ದರಿಂದ ಸರ್ಕಾರದ ಸಹಕಾರದೊಂದಿಗೆ ಈ ಮನೆಯನ್ನು ಪುನರ್‌ನಿರ್ಮಿಸಬೇಕು ಎಂದು ಸಾರ್ವಜನಿಕರು ಮನವಿ ಸಲ್ಲಿಸಿದರು.

ಜಿಲ್ಲಾಧಿಕಾರಿಗಳ ಭೇಟಿ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಸದಸ್ಯ ಶಂಕರ ಶಳಕೆ, ಹಿರಿಯ ನ್ಯಾಯವಾದಿ ಅರುಣ ಚರಂತಿಮಠ, ಕಲಾವಿದ ಪ್ರಸನ್ನ ಗುಡಿ, ಡಾ. ಶಶೀಧರ ನರೇಂದ್ರ, ರಾಘವೇಂದ್ರ ಗುಡಿ, ಸಂಗೀತ ಕಲಾವಿದೆ ಭಾರ್ಗವಿ ಗುಡಿ, ವೀರಣ್ಣ ಪತ್ತಾರ, ಉದಯ ಯಂಡಿಗೇರಿ, ಅಣ್ಣಪ್ಪ ಪಾಲನಕರ, ಸಮೀರ ಜೋಶಿ, ಸಂಜೀವ ಲಕ್ಕಮನಹಳ್ಳಿ ಸೇರಿದಂತೆ ಗಂಗೂಬಾಯಿ ಹಾನಗಲ್ ಅವರ ಅನುಯಾಯಿಗಳು, ಅಭಿಮಾನಿಗಳು, ಸಂಗೀತ ಸೇವಕರು, ಸಂಗೀತಾಸಕ್ತರು, ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

## ಸ್ಮರಿಸಿ ಬದುಕಿರೋ.... ನಾಟಕ ಕರ್ನಾಟಕದಾದ್ಯಂತ ಪ್ರದರ್ಶನಗೊಳ್ಳಲಿ -ಅಕ್ಷೋಭ್ಯತೀರ್ಥರು


**ಬೆಳಗಾವಿ–** ಬೆಳಗಾವಿ ರಂಗಸಂಪದ ತಂಡದವರಿಂದ ದಿ. 17 ರವಿವಾರದಂದು ಸಾಯಂಕಾಲ 6 – 15 ಕ್ಕೆ ಕೋನವಾಳ ಬೀದಿಯಲ್ಲಿರುವ ಲೋಕಮಾನ್ಯ ರಂಗಮಂದಿರದಲ್ಲಿ ಶ್ರೀ ವಿಜಯದಾಸರ ಜೀವನ ಘಟನೆಯನ್ನಾದರಿಸಿದ ಭಕ್ತಿ ಪ್ರಧಾನ ಸುಂದರ ನಾಟಕ “ಸ್ಮರಿಸಿ ಬದುಕಿರೋ....” ಎಂಬ ನಾಟಕ ಪ್ರದರ್ಶನಗೊಂಡಿತು.

ಜಾಗಟೆಯನ್ನು ಬಾರಿಸುವುದರೊಂದಿಗೆ ರ್ಯಕ್ರಮವನ್ನು ಉದ್ಘಾಟಿಸಿದ ಕೂಡಲಿಯ ಶ್ರೀ ಕೂಡ್ಲಿ ಆರ್ಯ ಅಕ್ಷೋಭ್ಯತೀಥ–’9ರು ಮಾತನಾಡಿ, ಸುಮಾರು ಇಪ್ಪತ್ತೈದು ವರ್ಷಗಳಿಂದ ವೈವಿದ್ಯಮಯ ನಾಟಕಗಳನ್ನುನೀಡುತ್ತ ಬಂದಿರುವ ರಂಗಸಂಪದ ತಂಡವು ಈಗ ಧರ್ಮಿಕ, ಭಕ್ತಿಪ್ರಧಾನ ನಾಟಕಗಳತ್ತ ಆಸಕ್ತಿಯನ್ನು ತೋರುತ್ತಿರುವುದು ನಿಜಕ್ಕೂ ನನಗೆ ಸಂತೋಷವನ್ನುಂಡು ಮಾಡಿದೆ ಎಂದು ಹೇಳಿದ ಪೂಜ್ಯ ಅಕ್ಷೋಭ್ಯತೀರ್ಥರು “ಸ್ಮರಿಸಿ ಬದುಕಿರೋ....” ನಾಟಕ ಕರ್ನಾಟಕದಾದ್ಯಂತ ಪ್ರದರ್ಶನಗೊಳ್ಳಲಿ ಎಂದು ಹಾರೈಸಿದರು.

ಪಂ. ಪ್ರಮೋದಾಚಾರ್ಯ ಕಟ್ಟಿಯವರು ಮಾತನಾಡಿ, ರಂಗಸಂಪದ ನಮ್ಮ ಸಂಸ್ಕೃತಿಯನ್ನು ಇಂದಿನ ಯುವ ಪೀಳಿಗೆಗೆ ಪರಿಚಯುತ್ತಿರುವಂತಹ ಕಾರ್ಯ ನಿಜಕ್ಕೂ ಶ್ಲಾಘನೀಯ. ದಾಸರು, ಶರಣರನ್ನು ಪರಚಯಿಸುವಂತಹ ಇನ್ನಷ್ಟು ನಾಟಕಗಳು ಇವರಿಂದ ಪ್ರದರ್ಶನಗೊಳ್ಳಲಿ. ಈ ನಾಟಕದ ಯಶಸ್ಸಿನ ಹಿಂದೆ ನಿರ್ದೇಶಕ ಡಾ. ಅರವಿಂದ ಕುಲಕರ್ಣಿ ಮತ್ತು ತಂಡದವರ ಶ್ರಮ ಸಾಕಷ್ಟಿದೆ. ಅವರನ್ನು ಮನಃಪೂರ್ವಕವಾಗಿ ಅಭಿನಂದಿಸುತ್ತೇನೆ ಎಂದು ಹೇಳಿದರು.

ಇಪ್ಪತ್ತೆರಡು ಕಲಾವಿದರು ಈ ನಾಟಕದಲ್ಲಿ ಅಭಿನಯಿಸಿದ್ದಾರೆ. ಪ್ರಸಾದ ಕಾರಜೋಳ, ಪವಿತ್ರಾ ರೇವಣಕರ, ವಾಮನ ಮಳಗಿ ತಮ್ಮ ಭಾವಪೂರ್ಣ ಅಭಿನಯದಿಂದ ಪ್ರೇಕ್ಷಕರ ಗಮನ ಸೆಳೆದರು. ಪ್ರೇಕ್ಷಕರ ಚಪ್ಪಾಳೆಗಳು ಇದೊಂದು ಯಶಸ್ವಿ ನಾಟಕವೆಂದು ಹೇಳಿದವು.

ತಮ್ಮ ಮಾತುಗಳಲ್ಲಿ ಡಾ. ಅರವಿಂದ ಕುಲಕರ್ಣಿಯವರು



ಶ್ರೀ ರಾಘವೇಂದ್ರ ಸ್ವಾಮಿ ಮಠದ ಪ್ರಸನ್ನ ದೇಶಪಾಂಡೆ, ಚಿತ್ರಕಲಾವಿದೆ ಪೂರ್ವಿ ರಾಜಪುರೋಹಿತ, ಕಿರುತೆರೆ ಕಲಾವಿದ ಪ್ರಸಾದ ಪಂಡಿತ, ನಿರ್ದೇಶಕ ವಿನಯ ಕುಲಕರ್ಣಿ ಸಹಕರಿಸಿದ ಎಲ್ಲರನ್ನೂ ಸ್ಮರಿಸಿಕೊಂಡರು.

ಪ್ರೇಕ್ಷಕರಿಂದ ಕಿಕ್ಕಿರುದು ತುಂಬಿದ ರಂಗಮಂದಿರದಲ್ಲಿ ಪ್ರದರ್ಶನಗೊಂಡ “ಸ್ಮರಿಸಿ ಬದುಕಿರೋ..” ನಾಟಕ ರಚನೆ ದಂಡಿನ ಗಂಗಾವತಿಯವರಾಗಿತ್ತು. ಸಂಗೀತ ಸಂಯೊಜನೆ ಶ್ರೀಮತಿ ಸೀಮಾ ಕುಲಕರ್ಣಿಯವರದಾಗಿತ್ತು. ಡಾ. ಅರವಿಂದ ಕುಲಕರ್ಣಿ ನಿರ್ದೇಶನವಿತ್ತು. ಮೆಕಪ್ ಕಿರಣ ಮಹಾಲೆ ಮಾಡಿದ್ದರು.

### ಪ್ರವಾಹ ಪೀಡಿತ ಗ್ರಾಮಗಳಿಗೆ ಡಿಸಿ- ಸಿಇಓ ಭೇಟಿ ಪರಿಶೀಲನೆ

# ಪ್ರವಾಹ ಪರಿಸ್ಥಿತಿ, ಮಿರ್ಜಿಯಲ್ಲಿ ಕಾಳಜಿ ಕೇಂದ್ರ ಸ್ಥಾಪನೆ : ಡಿಸಿ

**ಬಾಗಲಕೋಟೆ:** : ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಕೃಷ್ಣಾ, ಘಟಪ್ರಭಾ ಹಾಗೂ ಮಲಪ್ರಭಾ ನದಿಗಳ ನೀರಿನ ಮಟ್ಟ ಹೆಚ್ಚಾಗಿ ಪ್ರವಾಹ ಪರಿಸ್ಥಿತಿ ಉಂಟಾಗುತ್ತಿದ್ದು, ಮುಧೋಳ ತಾಲೂಕಿನ ಮಿರ್ಜಿ ಗ್ರಾಮದಲ್ಲಿ ಕಾಳಜಿ ಕೇಂದ್ರ ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಮುಧೋಳ ತಾಲೂಕಿನ ಪ್ರವಾಹ ಪೀಡಿತ ಮಿರ್ಜಿ ಗ್ರಾಮಕ್ಕೆ ಭೇಟಿ ನೀಡಿ, ಮಾತನಾಡಿದ ಅವರು ಮಿರ್ಜಿ ಗ್ರಾಮದ 12 ಕುಟುಂಬಗಳು ಬಾಧಿತಗೊಂಡಿದ್ದು, ಆ ಕುಟುಂಬದ 62 ಜನ ಸಂತ್ರಸ್ತರನ್ನು ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಿ, ಅಲ್ಲಿ ಊಟ, ವಸತಿ ಹಾಗೂ ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಇನ್ನು ನೀರಿನ ಪ್ರಮಾಣ ಹೆಚ್ಚಾಗುತ್ತಿರುವದರಿಂದ ನದಿ



ದಡದ ಗ್ರಾಮಗಳು ಹೆಚ್ಚಿನ ಪ್ರಮಾಣದಲ್ಲಿ ಬಾಧಿತವಾಗುವ ಸಾಧ್ಯತೆಯಿದ್ದು, ಈ ಬಗ್ಗೆ ಮುಂಜಾಗ್ರತವಾಗಿ ಗ್ರಾಮಸ್ಥರು ಸುರಕ್ಷಿತ ಸ್ಥಳಗಳಿಗೆ ಇಲ್ಲವೇ ಜಿಲ್ಲಾಡಳಿತ ಸ್ಥಾಪಿಸಲಾದ ಕಾಳಜಿ ಕೇಂದ್ರಗಳಿಗೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ ಎಂದರು.

ಪ್ರಸ್ತುತ ಘಟಪ್ರಭಾ ನದಿಗೆ 65567 ಕ್ಯೂಸೆಕ್ಸ್ ನೀರು ಹರಿದು ಬರುತ್ತಿದ್ದು, ಇದರಿಂದ ಮುಧೋಳ ಹಾಗೂ ರಬಕವಿ-ಬನಹಟ್ಟಿ ತಾಲೂಕಿನ ಡವಳೇಶ್ವರ, ಮಿರ್ಜಿ, ಚನ್ನಾಳ, ಉತ್ತೂರು-ಜಾಲಿಬೇರ, ಮುಧೋಳ ಬ್ಯಾರೇಜ, ಇಂಗಳಗಿ, ಜಂಬಗಿ ಕೆಡಿ, ಕಸಬಾ ಜಂಬಗಿ, ತಿಪ್ಪಾಪೂರ ಹಾಗೂ ಮಾಚಕನೂರು ಸೇರಿ ಒಟ್ಟು 11 ಸೇತುವೆಗಳು ಮುಳುಗಡೆಯಾಗಿರುತ್ತವೆ. ಮುಧೋಳ ಯಾದವಾಡ ಸೇತುವೆಗೆ ಭೇಟಿ ನೀಡಿ ನೀರಿನ ಮಟ್ಟ ಪರಿಶೀಲಿಸಲಾಗಿ ಅದು ಕೂಡಾ ಇನ್ನು ಒಂದು ಅಥವಾ ಎರಡು ದಿನಗಳಲ್ಲಿ ಮುಳುಗಡೆಯಾಗುವ ಹಂತದಲ್ಲಿದೆ. ನದಿ ಪಾತ್ರದಲ್ಲಿ ಸಾರ್ವಜನಿಕರು ಬರದಂತೆ ಎಚ್ಚರಿಕೆಯ ಫಲಕಗಳನ್ನು ಹಾಕುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಭೇಟಿ ಸಮಯದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಮುಧೋಳ ತಹಶೀಲ್ದಾರ ಮಹಾದೇವ ಸನಮೂರೆ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

## ಕಡೆ ಶ್ರಾವಣ ಸೋಮವಾರದಂದು ಆರಾಧ್ಯ ದೇವರಾದ ಶ್ರೀ ಬಸವೇಶ್ವರ ಜಾತ್ರಾ ಮಹೋತ್ಸವ

**ಹಳ್ಳೂರ** : ಗ್ರಾಮದಲ್ಲಿ ಕಡೆ ಶ್ರಾವಣ ಸೋಮವಾರದಂದು ಆರಾಧ್ಯ ದೇವರಾದ ಶ್ರೀ ಬಸವೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಮುಂಜಾನೆ ಶ್ರೀ ಬಸವೇಶ್ವರ ಕರ್ತೃ ಗದ್ದುಗೆಗೆ ವಿಶೇಷ ಪೂಜೆ ಅಭಿಷೇಕ ನೆರವೇರಿಸಿ ಗ್ರಾಮದ ಎಲ್ಲ ದೇವರಿಗೆ ನೈವೇದ್ಯ ಅರ್ಪಿಸಿದರು. ಸಾಯಂಕಾಲ ಶ್ರೀ ಬಸವೇಶ್ವರ ದೇವಸ್ಥಾನದಿಂದ ರಥೋತ್ಸವವು ಭವ್ಯ ಮೆರವಣಿಗೆಯೊಂದಿಗೆ ವಿವಿಧ ವಾದ್ಯ ಮೇಳ ಎರಡೂ ದೈವದ ,

ಕರಡಿ ಮಜಲು, ಉಚಾಯಿ,ವಿವಿಧ ಲೈಟಿಂಗ ಕಾಂಡ್ಯಾಳ ಬಾಸಿಂಗ, ಹೂವಿನ ಮಾಲೆ ನೋಡುಗರ ಕಣ್ಮನ ಸೆಳೆಯುತಿತ್ತು. ಹುಡುಗರು ಕುಣಿದು ಕುಪ್ಪಳಿಸಿ ಹರ್ಷ ವ್ಯಕ್ತಪಡಿಸಿದರು. ರಥೋತ್ಸವವು ಶ್ರೀ ಮಹಾಲಕ್ಷ್ಮಿ ದೇವಸ್ಥಾನದ ಆವರಣದಲ್ಲಿ ಶಾಂತ ರೀತಿಯಲ್ಲಿ ಬಂದು ತಲುಪಿತು. ಭಕ್ತರು ರಥೋತ್ಸವದ ಮೇಲೆ ಕಾರಿಕ, ಬೆಂಡೂ, ಬೆತ್ತಾಸು ಹಾರಿಸಿ ಹರಕೆ ತೀರಿಸಿದರು. ಜೀಟಿ ಜೀಟಿ ಮಳೆಯಿದ್ದರು ಲೆಕ್ಕಿಸದೆ ಜಾತ್ರಾ ಮಹೋತ್ಸವದಲ್ಲಿ ಭಕ್ತರು ಭಾಗಿಯಾಗಿದ್ದು ಭಕ್ತಿಯ



ಪರಾಕಾಷ್ಠೆಗೆ ಸಾಕ್ಷೀಯಾಯಿತು.ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಗ್ರಾಮದ ಎಲ್ಲ ಗುರು ಹಿರಿಯರ ಸಮ್ಮುಖದಲ್ಲಿ ಶ್ರೀ ಬಸವೇಶ್ವರ ಜಾತ್ರಾ ಮಹೋತ್ಸವವೂ ಅತೀ ವಿಜೃಂಭಣೆಯಿಂದ ನಡೆಯಿತು.

## ಲಿಡಕರ್ ಮಾರಾಟ ಮಳಿಗೆಯಲ್ಲಿ 15ರಷ್ಟು ರಿಯಾಯಿತಿ ಮಾರಾಟ

**ಬೆಳಗಾವಿ,** ; ಬೆಳಗಾವಿಯ ಲಿಡಕರ್ ಮಾರಾಟ ಮಳಿಗೆಯಲ್ಲಿ ಗೌರಿ ಮತ್ತು ಗಣೇಶ ಹಬ್ಬದ ಪ್ರಯುಕ್ತ ಗ್ರಾಹಕರು ಖರೀದಿಸಿದ ಎಲ್ಲಾ ದಾಸ್ತಾನುಗಳ ಮೇಲೆ ಶೇಕಡಾ 15ರಷ್ಟು ರಿಯಾಯಿತಿ ಮಾರಾಟವನ್ನು ಆಗಸ್ಟ್ 19 ರಿಂದ ಆಗಸ್ಟ್ 26 ರವರೆಗೆ ಹಮ್ಮಿಕೊಳ್ಳಲಾಗಿದೆ.

ಬೆಳಗಾವಿ ಮಾರಾಟ ಮಳಿಗೆಯಲ್ಲಿ ಅಪ್ಪಟ ಚರ್ಮದ ಗುಣಮಟ್ಟ ಹೊಂದಿದ ಮಹಿಳೆಯರ ಪಾದರಕ್ಷೆ, ವೆನಿಟಿ ಬ್ಯಾಗ್, ಪರ್ಸ ಮತ್ತು ಪುರುಷರಿಗೆ ಪಾದರಕ್ಷೆ, ಬೂಟು, ಸ್ಯಾಂಡಲ್ ಪಾದರಕ್ಷೆ ,ಬೆಲ್ಟ, ಕಾರ್ಡ ಹೊಲ್ಡರ್, ಹಾಗೂ ಟ್ರಾವೆಲ್ ಬ್ಯಾಗ್, ಎಕ್ಸಿಕ್ಯೂಟಿವ್ ಬ್ಯಾಗ್, ಕೀ ಚೈನ್, ವೆಸ್ಟ ಪೋಚ್ ಇತ್ಯಾದಿ ಹಾಗೂ ಸರ್ಕಾರಿ/ಖಾಸಗಿ/ಅನುದಾನಿತ ಶಾಲಾ ಮಕ್ಕಳಿಗೆ ಮತ್ತು ಖಾಸಗಿ ವಸತಿ ಶಾಲೆಗಳಿಗೆ ಸಗಟು ಆದೇಶಗಳನ್ನು ನೀಡಿದ್ದಲ್ಲಿ ಕರಿ ಮತ್ತು ಬಿಳಿ ಬೂಟು ಹಾಗೂ ಸಾಕ್ಸಗಳನ್ನು ಮತ್ತು ಸರ್ಕಾರಿ/ಖಾಸಗಿ ಕಾರ್ಖಾನೆಗಳಿಗೆ ಸೇಪ್ಟಿ ಬೂಟುಗಳನ್ನು ಸರಬರಾಜು ಮಾಡಲಾಗುವುದು ಎಂದು ಲಿಡಕರ್ ಮಾರಾಟ ಮಳಿಗೆ ವ್ಯವಸ್ಥಾಪಕರು ಪ್ರಕಟಣೆಯಲ್ಲ ತಿಳಿಸಿರುತ್ತಾರೆ.

### ಘಟಪ್ರಭಾ ಹಾಗೂ ಹಿರಣ್ಯಕೇಶಿ ನದಿಯ ದಡದಲ್ಲಿರುವ ಗ್ರಾಮಗಳ ಗ್ರಾಮಸ್ಥರ ಗಮನಕ್ಕೆ

ಬೆಳಗಾವಿ, ಹಿಡಕಲ್ (ಘಟಪ್ರಭಾ) ಜಲಾನಯನ ಪ್ರದೇಶದಲ್ಲಿ ಧಾರಕಾರ ಮಳೆ ಆಗುತ್ತಿರುವುದರಿಂದ ಹಿಡಕಲ್ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ಒಳಹರಿವು ಹರಿದು ಬರತ್ತಿದೆ, ಇದರಿಂದ ಹಿಡಕಲ್ ಜಲಾಶಯವು ಶೇಕಡಾ 99 ರಷ್ಟು ಭರ್ತಿಯಾಗಿದ್ದು, ಜಲಾಶಯಕ್ಕೆ ಬರುವ ನೀರಿನ ಪ್ರಮಾಣ ಗಣನೀಯವಾಗಿ ಏರತೊಡಗಿದ್ದು, ಒಟ್ಟು 30800 ಕ್ಯೂಸೆಕ್ಸ್ ನೀರನ್ನು ಯಾವುದೇ ಕ್ಷಣದಲ್ಲಿ ನದಿ ಪಾತ್ರಕ್ಕೆ ಹರಿಬಿಡಲಾಗುವುದು. ಆದ್ದರಿಂದ ಘಟಪ್ರಭಾ ನದಿ ಹಾಗೂ ಹಿರಣ್ಯಕೇಶಿ ನದಿಯ ದಡದಲ್ಲಿ ಬರುವ ಎಲ್ಲ ಗ್ರಾಮಗಳ ಗ್ರಾಮಸ್ಥರು ಹಾಗೂ ತಮ್ಮ ಜಾನುವಾರಗಳ ಸಮೇತ ನದಿಯ ಪಾತ್ರದಿಂದ ಸುರಕ್ಷಿತ ಸ್ಥಳಗಳಿಗೆ ಗ್ರಾಮಸ್ಥರು ತೆರಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಗಣೇಶ ಚತುರ್ಥಿ ಹಬ್ಬ ಪರಿಸರ ಸ್ನೇಹಿಯಾಗಿರಲಿ : ಜಿಲ್ಲಾಧಿಕಾರಿ

**ಕಾರವಾರ,** ಗಣೇಶ ಚತುರ್ಥಿ ಹಬ್ಬವನ್ನು ಜಿಲ್ಲೆಯಲ್ಲಿ ಪ್ಲಾಸ್ಟಿಕ್ ಮುಕ್ತವಾಗಿ ಹಾಗೂ ಪರಿಸರ ಸ್ನೇಹಿಯಾಗಿ ಮತ್ತು ಶಾಂತಿಯುತವಾಗಿ ಆಚರಿಸುವ ನಿಟ್ಟಿನಲ್ಲಿ ಸರಕಾರದ ಮಾರ್ಗಸೂಚಿಯಂತೆ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಪರಿಸರ ಇಲಾಖೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ನಿರ್ದೇಶನ ನೀಡಿದರು.

ಅವರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವಾಗ ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಮಾತ್ರ ಪ್ರತಿಷ್ಠಾಪಿಸಬೇಕು, ಪಿಓಪಿ ಮತ್ತು ರಾಸಾಯನಿಕ ಬಣ್ಣಗಳನ್ನು ಬಳಸಿರುವ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಅವಕಾಶವಿಲ್ಲ, ಈ ಬಗ್ಗೆ ಗಣೇಶ ಪ್ರತಿಷ್ಠಾಪನೆಗೆ ಅನುಮತಿ ನೀಡುವಾಗ ಕಡ್ಡಾಯವಾಗಿ ಈ ನಿಯಮಗಳನ್ನು ಪಾಲಿಸುವ ಕುರಿತು ಸೂಚನೆ ನೀಡುವಂತೆ ಮತ್ತು ಪ್ರತಿಷ್ಠಾಪನೆ ನಂತರ ಈ ಬಗ್ಗೆ ಪರಿಶೀಲನೆ ನಡೆಸುವಂತೆ ನಗರಸ್ಥಳಿಯ ಸಂಸ್ಥೆ ಮತ್ತು ಪರಿಸರ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗಣೇಶ ಪ್ರತಿಷ್ಠಾಪನೆ ಸ್ಥಳದಲ್ಲಿ ಮತ್ತು ವಿಸರ್ಜನೆ ಸಮಯದಲ್ಲಿ ಯಾವುದೇ ರೀತಿಯ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆ ಆಗದಂತೆ ನೋಡಿಕೊಳ್ಳಬೇಕು, ಬಟ್ಟೆಯಿಂದ ತಯಾರಿಸಿದ ಬ್ಯಾನರ್ ಬಳಸಬೇಕು, ಫ್ಲೆಕ್ಸ್ ಗಳನ್ನು ಬಳಸಬಾರದು, ಪೆಂಡಾಲ್ ಗಳ ನಿರ್ಮಾಣ ಮತ್ತು ಅಲಂಕಾರದಲ್ಲಿಯೂ ಪ್ಲಾಸ್ಟಿಕ್ ಬಳಕೆ ಮಾಡಬಾರದು ಎಂದರು.

ಗಣೇಶ ವಿಸರ್ಜನೆ ಸಂದರ್ಭದಲ್ಲಿ ಮತ್ತು ಪ್ರತಿಷ್ಠಾಪನೆ ಪ್ರದೇಶದಲ್ಲಿ ವಿದ್ಯುತ್ ಲೈನ್‌ಗಳ ಸಂಪರ್ಕದಿಂದ ಯಾವುದೇ ಅನಾಹುತಗಳಾಗದಂತೆ ಹೆಸ್ಕಾಂ ವತಿಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು, ಸಾರ್ವಜನಿಕರಿಗೆ ಪ್ರಸಾದದ ರೂಪದಲ್ಲಿ ವಿತರಿಸುವ ಆಹಾರ ಪದಾರ್ಥಗಳ ಬಗ್ಗೆ ಆಯೋಜಕರು ಹೆಚ್ಚಿನ ಮುತುವರ್ಜಿ ವಹಿಸಬೇಕು ಎಂದರು. ಗಣೇಶ ಮೂರ್ತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳು ಗುರುತಿಸಿರುವ ಸ್ಥಳದಲ್ಲಿಯೇ ವಿಸರ್ಜನೆ




ಮಾಡಬೇಕು, ಆ ಪ್ರದೇಶದಲ್ಲಿ ತ್ಯಾಜ್ಯ ಉತ್ಪತ್ತಿಯಾಗದಂತೆ ಸ್ಥಳೀಯಾಡಳಿತಗಳು ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳಬೇಕು, ಗಣೇಶ ಪ್ರತಿಷ್ಠಾಪನೆಗೆ ಅನುಮತಿ ನೀಡುವಾಗ ಸಿಂಗಲ್ ವಿಂಡೋ ವ್ಯವಸ್ಥೆಯಡಿ ಎಲ್ಲಾ ಅಗತ್ಯ ಅನುಮತಿಗಳನ್ನು ನೀಡುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಇದುವರೆಗೆ 1467 ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಅನುಮತಿ ನೀಡಲಾಗಿದ್ದು, ಆಯೋಜಕರು ಜಿಲ್ಲಾಡಳಿತ ಸೂಚಿಸುವ ಎಲ್ಲಾ ಸೂಚನೆಗಳನ್ನು ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ತಪ್ಪದೇ ಪಾಲಿಸಬೇಕು, ಆಸ್ಪತ್ರೆ, ಶಾಲೆ, ನ್ಯಾಯಾಲಯ ಇರುವ ಪ್ರದೇಶದಲ್ಲಿ ಧ್ವನಿವರ್ಧಕ ಬಳಸಬಾರದು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಗಣೇಶ ಪ್ರತಿಷ್ಠಾಪನೆ ಸ್ಥಳದಲ್ಲಿ ಸಿಸಿಟಿವಿ ಅಳವಡಿಸಬೇಕು, ಬೆಂಕಿ ಅವಗಡಗಳು ಸಂಭವಿಸಿದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು, ಪೆಂಡಾಲ್‌ಗಳ ಬಳಿ ಸ್ವಯಂ ಸೇವಕರನ್ನು ನಿಯೋಜಿಸಬೇಕು, ವಿಸರ್ಜನೆ ಸಂದರ್ಭದಲ್ಲಿ ಈಜು ಬಾರದೇ ಇರುವವರನ್ನು ಬಳಸಿಕೊಳ್ಳಬಾರದು, ಪೋಲೀಸ್ ಇಲಾಖೆಯ ಮಾರ್ಗಸೂಚಿಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆ ಕೈಗೊಳ್ಳಬೇಕು. ಧ್ವನಿವರ್ಧಕಗಳ ಬಳಕೆಯಲ್ಲಿ ನಿಗಧಿತ ಪ್ರಮಾಣಕ್ಕಿಂತ ಹೆಚ್ಚಿನ ಪ್ರಮಾಣದಲ್ಲಿ ಶಬ್ದ ಮಾಡಬಾರದು, ಡಿ.ಜೆ. ಗಳ ಬಳಕೆ ಮಾಡುವಂತಿಲ್ಲ, ರಾತ್ರಿ 10 ರಿಂದ ಬೆಳಗ್ಗೆ 6 ರ ವರೆಗೆ ಧ್ವನಿವರ್ಧಕ ಬಳಸುವಂತಿಲ್ಲ, ರಾತ್ರಿ 8 ರಿಂದ 10 ರವರೆಗೆ ಹಸಿರು ಪಟಾಕಿಗಳನ್ನು ಮಾತ್ರ ಬಳಸಬಹುದು, ಯಾವುದೇ ಹಂತದಲ್ಲೂ ಕಾನೂನು ಉಲ್ಲಂಘನೆ ಮತ್ತು ಶಾಂತಿ ಸುವ್ಯವಸ್ಥೆಗೆ ತೊಂದರೆ ಆಗದಂತೆ ಶಾಂತಿಯುತವಾಗಿ ಗಣೇಶ ಹಬ್ಬವನ್ನು ಅಚರಣೆ ಮಾಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ತಿಳಿಸಿದರು. ಸಭೆಯಲ್ಲಿ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಜಿಲ್ಲಾ ಪರಿಸರ ಅಧಿಕಾರಿ ಸಂತೋಷ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಜಹೀರ್ ಅಬ್ಬಾಸ್ ಹಾಗೂ ವಿವಿಧ ಇಲಾಖಾಧಿಕಾರಿಗಳು ಇದ್ದರು.

## ಡಿ ದೇವರಾಜ ಅರಸು ಸಾಮಾಜಿಕ ನ್ಯಾಯದ ಹರಿಕಾರ- ಸಂತೋಷ ಬಂಡೆ



**ಇಂಡಿ:** ಸಾಮಾಜಿಕ ನ್ಯಾಯದ ಹರಿಕಾರರಾದ ಡಿ.ದೇವರಾಜ ಅರಸು ಅವರ ದೂರದೃಷ್ಟಿ ಮತ್ತು ಬದ್ಧತೆ ರಾಜ್ಯದ ಅಭಿವೃದ್ಧಿಗೆ ದಾರಿದೀಪವಾಗಿದೆ. ಅವರ ಕಾರ್ಯ ಮತ್ತು ಕೊಡುಗೆಗಳು ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗಿವೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಬುಧವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯಲ್ಲಿ ಹಮ್ಮಿಕೊಂಡ ಡಿ.ದೇವರಾಜ ಅರಸು ಅವರ 110ನೇ ಜಯಂತಿ ಆಚರಣೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ನಾಡಿನ ಸಾಮಾಜಿಕ, ಶಿಕ್ಷಣ, ಆರ್ಥಿಕ ಕ್ಷೇತ್ರದಲ್ಲಿ ಪರಿವರ್ತನೆ ತಂದ ಅರಸು ಅವರು ದುರ್ಬಲ ವರ್ಗದವರಲ್ಲಿ ಸ್ವಾಭಿಮಾನದ ಕಲ್ಪನೆ ಹುಟ್ಟಿಸಿ ಅವರಿಗೆ ಆರ್ಥಿಕ ಸ್ವಾವಲಂಬನೆ ಒದಗಿಸಿದ ಯುಗಪುರುಷರಾಗಿದ್ದಾರೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕ ಎಸ್ ಎಸ್ ಅರಬ ಮಾತನಾಡಿ, ಬಡವರ ಬದುಕಿನಲ್ಲಿ ಹೊಸ ಭರವಸೆ ತಂದುಕೊಟ್ಟ ಮೌನಕ್ರಾಂತಿಯ ಹರಿಕಾರ ಡಿ.ದೇವರಾಜ ಅರಸು ಕರ್ನಾಟಕದಲ್ಲಿ ಅನೇಕ ಜನಹಿತ ಯೋಜನೆಗಳನ್ನು ಅನುಷ್ಠಾನಗೊಳಿಸಿ, ಯಶಸ್ಸು ಸಾಧಿಸಿದ ಮಹಾಮಾನವತಾವಾದಿಯಾಗಿದ್ದಾರೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಇಂಗ್ಲೀಷ್ ಕೈಬರಹ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ನೋಟ್ ಬುಕ್-ಪೆನ್ನು ವಿತರಿಸಲಾಯಿತು. ಶಿಕ್ಷಕಿ ಎನ್ ಬಿ ಚೌಧರಿ, ಅತಿಥಿ ಶಿಕ್ಷಕಿ ಅಲ್ಫಿಯಾ ಅಂಗಡಿ ಸೇರಿದಂತೆ ಮಕ್ಕಳು ಉಪಸ್ಥಿತರಿದ್ದರು.

ಸರಳ, ನೇರ ಮತ್ತು ನಿರ್ಭೀತ ಆಡಳಿತಕ್ಕೆ ಹೆಸರಾದ ಅರಸು ಅವರು ಜನಸಾಮಾನ್ಯರ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಹಿಂದುಳಿದ ವರ್ಗಗಳ, ದಲಿತರ, ಬಡವರ ಮನಸ್ಸಿನಲ್ಲಿ ಅವರು ಎಂದೆಂದಿಗೂ ಚಿರಸ್ಥಾಯಿಯಾಗಿದ್ದಾರೆ.

## ಕುಂಟೋಜಿ ಬಸವೇಶ್ವರ, ಸಂಗಮೇಶ್ವರ ಜಾತ್ರೋತ್ಸವ: ಹರ್ಷೋದ್ಗಾರದೊಂದಿಗೆ ಹೊಸ ತೇರನೆಳೆದ ಭಕ್ತರು

**ಮುದ್ದೇಬಿಹಾಳ:** ತಾಲೂಕಿನ ಕುಂಟೋಜಿಯಲ್ಲಿ ಮಂಗಳವಾರ ಸಂಜೆ ಜಿಟಿಜಿಟಿ ಮಳೆಯ ನಡುವೆಯೂ ಸಹಸ್ರಾರು ಭಕ್ತರು ನಂದಿ ಬಸವೇಶ್ವರ ಮತ್ತು ಸಂಗಮೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಹೊಸ ತೇರನ್ನು ಹರ್ಷೋದ್ಗಾರದೊಂದಿಗೆ ಎಳೆಯುವ ಮೂಲಕ ಶತಮಾನಗಳ ನಂತರ ಪ್ರಥಮ ಬಾರಿಗೆ ತೇರನ್ನು ತೇರನ್ನು ಎಳೆದ ಕೀರ್ತಿಗೆ ಭಾಜನರಾಗಿ ಈ ಘಟನೆ ಇತಿಹಾಸದ ಪುಟಗಳಲ್ಲಿ ದಾಖಲಾಗುವಂತಾಯಿತು.

ಭಕ್ತರೊಬ್ಬರ ಕಾಣಿಕೆಯಾಗಿ ದೇವಸ್ಥಾನಕ್ಕೆ ಬಂದ ಕೊಪ್ಪಳದ ರಥಶಿಲ್ಪಿಗಳಿಂದ ಸಾಗುವಾನಿ ಕಟ್ಟಿಗೆಯಲ್ಲಿ ತಯಾರಾಗಿದ್ದ ಅಂದಾಜು 30 ಲಕ್ಷ ರೂ ಮೌಲ್ಯದ 29 ಅಡಿ ಎತ್ತರದ ತೇರನ್ನು ರವಿವಾರ ಸಂಜೆ ಕೊಪ್ಪಳ ಗವಿಮಠದ ಅಭಿನವ ಗವಿಸಿದ್ದೇಶ್ವರ ಸ್ವಾಮೀಜಿಯವರು ಲೋಕಾರ್ಪಣೆಗೊಳಿಸಿದ್ದರು.

ಸೋಮವಾರ ಗ್ರಾಮದಲ್ಲಿ ಕಳಸದ ಮೆರವಣಿಗೆ ಊರತುಂಬೆಲ್ಲ ಕುದುರೆ ಕುಣಿತ, ಗೊಂಬೆ ಗಾರುಡಿ ಸೇರಿ ಸಕಲ ಕಲಾವೈಭವದೊಂದಿಗೆ ಅದ್ದೂರಿಯಿಂದ ನೆರವೇರಿತ್ತು. ಸಂಪ್ರದಾಯದಂತೆ ಹುಚ್ಚಯ್ಯನ ತೇರನ್ನು ದೇವಸ್ಥಾನದ ಸುತ್ತಲೂ 5 ಸುತ್ತು ಎಳೆಯುವ ಮೂಲಕ ಜಾತ್ರೋತ್ಸವ ಮುಂದುವರೆಯಲು ಅವಕಾಶ ಕಲ್ಪಿಸಲಾಯಿತು. ಮಂಗಳವಾರ ತೇರಿನ ಮಿಣಿ (ಹಗ್ಗ), ಬೃಹತ್ ರುದ್ರಾಕ್ಷಿ ಮಾಲೆ, ಕಳಸ, ಛತ್ರಿ ಚಾಮರ ಮುಂತಾದವುಗಳನ್ನು ಗ್ರಾಮದಲ್ಲಿ ಮೆರವಣಿಗೆ ನಡೆಸಿ ರಥೋತ್ಸವದ ಪಾದಗಟ್ಟೆಗೆ ಕರೆತರಲಾಯಿತು. ನಂತರ ಮಳೆಯ ನಡುವೆಯೇ ತೇರನ್ನು ಅಲಂಕರಿಸುವ, ಸಾಂಪ್ರದಾಯಿಕ ಪೂಜೆ ಪುನಸ್ಕಾರ



ನೆರವೇರಿಸುವ ಕಾರ್ಯ ದೇವಸ್ಥಾನ ಕಮೀಟಿ ಮತ್ತು ದೇವಸ್ಥಾನದ ಪೂಜಾರಿಗಳಿಂದ ನೆರವೇರಿತು.

ಸಂಜೆ ದೇವಸ್ಥಾನ ಎದುರಿಗೆ ಇರುವ ಜಮೀನಿನಲ್ಲಿ ಹೊಸದಾಗಿ ನಿರ್ಮಿಸಿದ ಪಾದಗಟ್ಟೆಯವರೆರೂ ಮಳೆ ನೀರಿನಲ್ಲಿಯೇ ಭಕ್ತರು ತೇರನೆಳೆದು ಸಂಭ್ರಮಿಸಿದರು. ಈ ವೇಳೆ ಅನೇಕರು ತೇರಿನ ಮೇಲೆ ಉತ್ತತ್ತಿ ಸೇರಿ ಇನ್ನಿತರ ಹರಕೆಯ ಸಾಮಗ್ರಿಗಳನ್ನು ಅರ್ಪಿಸಿ ಕೃತಾರ್ಥರಾದರು. ಲಕ್ಷಕ್ಕೂ ಮೀರಿ ಭಕ್ತರು ಪಾಲ್ಗೊಂಡಿದ್ದು ಹೊಸ ಇತಿಹಾಸ ನಿರ್ಮಿಸಿದಂತಾಯಿತು. ಗ್ರಾಮ ಪಂಚಾಯಿತಿಯವರು ಸ್ವಚ್ಛತೆ, ನೀರು ಸೇರಿ ಅಗತ್ಯ ವ್ಯವಸ್ಥೆ ಕಲ್ಪಿಸಿದ್ದರು.

**ಶುಭಕೋರಿದ ನಡಹಳ್ಳಿ, ಸ್ವಾಮೀಜಿಗಳು:** ತೇರು ಎಳೆಯುವುದಕ್ಕೂ ಮುನ್ನ ದೇವಸ್ಥಾನ ಆವರಣದಲ್ಲಿ ಸಾರ್ವಜನಿಕ ಸಭೆ ನಡೆಸಲಾಯಿತು. ಮುಖ್ಯ ಅತಿಥಿಯಾಗಿದ್ದ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ, ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿಯವರು ಮಾತನಾಡಿ ಎಲ್ಲರಿಗೂ ಶುಭ ಕೋರಿದರು. ಇತಿಹಾಸ ಪ್ರಸಿದ್ಧ ಬಸವಣ್ಣನ ದೇವಸ್ಥಾನವು ಮೊದಲ ಬಾರಿಗೆ ಸ್ವಂತ ತೇರನ್ನು ಹೊಂದಲು ನೆರವಾದ ಭಕ್ತರ ಭಕ್ತಿ ಕಾಣಿಕೆ ದೇವಸ್ಥಾನದ ಇತಿಹಾಸದಲ್ಲಿ ಉಳಿದುಕೊಳ್ಳುವಂತಾಗಿದೆ. ಜೊತೆಗೆ ತೇರಿಗೆ ಅಗತ್ಯವಾದ ಸಾಮಗ್ರಿಗಳನ್ನು ದೇಣಿಗೆ ನೀಡಿದ ಭಕ್ತರ ಭಕ್ತಿ ಇತರರಿಗೆ ಮಾದರಿಯಾದದ್ದಾಗಿದೆ. ದೇವಸ್ಥಾನ ಕಮೀಟಿಯವರು ಊರಿನ ದೈವದೊಂದಿಗೆ ಸೇರಿಕೊಂಡು ಸಾರ್ಥಕ ಕಾರ್ಯ ಮಾಡಿದ್ದಾರೆ ಎಂದರು. ದಿವ್ಯಸಾನಿಧ್ಯ ವಹಿಸಿದ್ದ ಬಾಗಲಕೋಟೆಯ ಡಾ। ಪ್ರಭು ಮಹಾಸ್ವಾಮಿಗಳು, ಸಂಸ್ಥಾನ ಹಿರೇಮಠ ಡಾ। ಶ್ರೀಗುರು ಚನ್ನವೀರ ಶಿವಾಚಾರ್ಯರು ಆಶೀರ್ವಚನ ನೀಡಿ ಭಕ್ತರ ಭಕ್ತಿ ಬೆಲೆ ಕಟ್ಟಲಾಗದಂಥದ್ದು. ಭಕ್ತರೇ ಮಠ, ದೇವಸ್ಥಾನಗಳಿಗೆ ಶಾಸ್ವತ ಸುಭದ್ರ ಆಸ್ತಿ. ಭಕ್ತರಿಂದಲೇ ಮಠ ಮಂದಿರಗಳು ಬೆಳೆದಿವೆ, ಬೆಳೆಯುತ್ತಿವೆ. ದೇವಸ್ಥಾನವು ಇದೇ ಮೊದಲ ಬಾರಿಗೆ ಹೊಸ ತೇರನ್ನು ಹೊಂದುತ್ತಿರುವುದು ಹೆಚ್ಚು ಸಂಭ್ರಮಿಸುವಂಥದ್ದು ಎಂದರು. ವೇದಮೂರ್ತಿ ಸಂಗನಬಸಯ್ಯ ಹಿರೇಮಠ, ಸಿದ್ದಲಿಂಗಯ್ಯ ಕಲ್ಯಾಣಮಠ, ಶರಣು ಹಿರೇಮಠ, ದೇವಸ್ಥಾನ ಕಮೀಟಿ ಅಧ್ಯಕ್ಷ ಗುರುಲಿಂಗಪ್ಪ ಸುಲ್ಲಳ್ಳಿ, ನಾಗಲಿಂಗಯ್ಯ ಮಠ ಸೇರಿದಂತೆ ಕಮೀಟಿಯ ಎಲ್ಲ ಸದಸ್ಯರು, ಊರಿನ ದೈವದವರು ಸೇರಿ ಹಲವರು ಪಾಲ್ಗೊಂಡಿದ್ದರು.

## ಐತಿಹಾಸಿಕ ಧರ್ಮಸ್ಥಳದ ಮೇಲೆ ವ್ಯವಸ್ಥಿತ ಪಿತೂರಿ :ಪ್ರಭಾಕರ ಕೋರೆ

ಬೆಳಗಾವಿ. 800 ವರ್ಷಗಳ ಇತಿಹಾಸ ಇರುವ ಪುಣ್ಯ ಕ್ಷೇತ್ರ ಶ್ರೀ ಧರ್ಮಸ್ಥಳ ಹಾಗೂ ಶ್ರೀ ವೀರೇಂದ್ರ ಹೆಗ್ಡೆ ಬಗ್ಗೆ ಕೆಲವು ಹಿಂದೂ ವಿರೋಧಿಗಳು ಪಿತೂರಿ ಮಾಡಿ ಹೆಸರು ಕೆಡಿಸುವ ಹುನ್ನಾರ ಮಾಡುತ್ತಿದ್ದಾರೆ. ಈ ಕ್ಷೇತ್ರ ಒಂದು ಧರ್ಮ, ಒಂದು ಜಾತಿ, ಒಂದು ವರ್ಗದ ದೇವಸ್ಥಾನ ಅಲ್ಲ. ಈ ಕ್ಷೇತ್ರದಲ್ಲಿ ಅಪಪ್ರಚಾರ ಮಾಡುವ ವ್ಯಕ್ತಿಗಳ ವಿರುದ್ಧ ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕೆಂದು ಕೆ ಎಲ್ ಎ ಕಾರ್ಯಧ್ಯಕ್ಷರಾದ ಪ್ರಭಾಕರ ಕೋರೆ ಹೇಳಿದರು.

ಅವರು ಮಂಗಳವಾರದಂದು ನಗರದ ಸಾಂಬಾಜಿ ವೃತದಲ್ಲಿ ಪ್ರಾರಂಭವಾದ ಶ್ರೀ ಕ್ಷೇತ್ರ ಧರ್ಮಸ್ಥಳ ಹಾಗೂ ಧರ್ಮಾಧಿಕಾರಿಗಳಾದ ವೀರೇಂದ್ರ ಹೆಗಡೆ ಅವರ ಕುರುತು ಅವಹೇಳನ ಹೇಳಿಕೆ ವಿರೋಧಿಸಿ ಮೌನ ಮೆರವಣಿಗೆ ಕಾರ್ಯಕ್ರಮ ಉದ್ದೇಸಿಸಿ ಮಾತನಾಡಿದರು.

ಬೆಳಗಾವಿ ದಕ್ಷಿಣ ಶಾಸಕ ಅಭಯ ಪಾಟೀಲ ಮಾತನಾಡಿ ಬೆರೆ ಧರ್ಮದ ಬಗ್ಗೆ ಯಾರಾದರೂ ಪೋಸ್ಟ್ ಮಾಡಿದರೆ ಪ್ರಸಕ್ತ ಸರ್ಕಾರ ಶೀಘ್ರವಾಗಿ ಕ್ರಮ ತೆಗೆದುಕೊಳ್ಳುತ್ತೇ ಆದರೆ ನಿರಂತರ ಶ್ರೀ ಧರ್ಮಸ್ಥಳ ಹಿಂದೂ ಸನಾತನ ಕ್ಷೇತ್ರದಲ್ಲಿ ಅಪಪ್ರಚಾರ ನಡೆದರು ಸರ್ಕಾರ ಅವರ ಮಾತಿಗೆ ಬೆಲೆಕೊಟ್ಟು ಎಸ್ ಐ ಟಿ ತನಿಖೆ ಮಾಡುತ್ತಿದ್ದು ಆದರೂ ಅಲ್ಲಿ ಏನು ಕಾಳೇಬರಹ ಸಿಕ್ಕಿಲ್ಲ ಆದರೂ ಇನ್ನೂ ತನಿಖೆ ಕೈಬಿಟ್ಟಿಲ್ಲ. ದಿನ ನಿತ್ಯ ಎಲ್ಲರ ವಿರುದ್ಧ ಮಾತನಾಡುವ ವ್ಯಕ್ತಿಯ ಮೇಲೆ ಕ್ರಮ ತೆಗೆದುಕೊಳ್ಳೋ ಹಾಗೆ ಕಾಣ್ತಾ ಇಲ್ಲಾ. ಸೂಕ್ತ ಕ್ರಮ ತೆಗೆದುಕೊಳ್ಳದಿದ್ದರೆ 50 ಸಾವಿರ ಜನ ಧರ್ಮಸ್ಥಳ ಚಲೋ ನಡೆಸುತ್ತೇವೆ ಎಂದರು.

ಬೈಲಹೊಂಗಲದ ಮುರುಸಾವಿರ ಮಠದ ಪ್ರಭು ನೀಲಕಂಠ ಮಹಾಸ್ವಾಮಿಗಳು ಮಾತನಾಡಿ ಸತ್ಯಕ್ಕೆ ಯಾವಾಗಲು ಜಯ ಇದ್ದೆ ಇದೆ. ಇಲ್ಲಿ ಸೇರಿರುವ ಜನ ಇದಕ್ಕೆ ಸಾಕ್ಷಿ, ನಾವೆಲ್ಲರೂ ಧರ್ಮಸ್ಥಳದ ಪರ ನಿಲ್ಲುತ್ತೆವೆ ಎಂದರು.

ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯರು ಮಾತನಾಡಿ ಶ್ರೀ ಧರ್ಮಸ್ಥಳ ಕ್ಷೇತ್ರದಲ್ಲಿ ವ್ಯವಸ್ಥಿತ ಪಿತೂರಿ ನಡೀತಾ ಇದ್ದು ಸರ್ಕಾರ ಅಪಪ್ರಚಾರ ಮಾಡುವವರ ವಿರುದ್ಧ ಶೀಘ್ರವಾಗಿ ಕ್ರಮ ತೆಗೆದುಕೊಳ್ಳಬೇಕು ಎಂದರು.

ಮಾಜಿ ಶಾಸಕ ಮಹಾಂತೇಶ ದೊಡ್ಡಗೌಡರ ಮಾತನಾಡಿ ಸ್ವತ ಡಿಸಿಎಮ್ ಶಿವಕುಮಾರ್ ಅವರ ಧರ್ಮಸ್ಥಳ ಕ್ಷೇತ್ರದ ವಿರುದ್ಧ



ಷಡ್ಯಂತ್ರ ನಡೆದಿದೆ ಎಂದು ಹೇಳಿದ್ದಾರೆ ಇದರ ಅರ್ಥ ಏನು. ರಾಜ್ಯದ ಮಹಿಳೆಯರ, ರೈತರ, ಬಡವರ,ಅನ್ನದಾಸೋಹ, ಗ್ರಾಮಗಳ ಪರ ಕೆಲಸ ಮಾಡುತ್ತಿದ್ದು ಸದಾ ಐ ಕ್ಷೇತ್ರದ ಬೆಂಬಲಕ್ಕೆ ನಾವೆಲ್ಲರೂ ಸಿದ್ದ ಎಂದರು.

ಮಾಜಿ ವಿಧಾನ ಪರಿಷತ ಸದಸ್ಯ ಮಹಾಂತೇಶ್ ಕವಟಗಿಮಠ, ಮಾಜಿ ಶಾಸಕ ಸಂಜಯ ಪಾಟೀಲ,ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಶ್ರೀಗಳು ಮಾತನಾಡಿದರು.

ಸಾಂಬಾಜಿ ವೃತದಿಂದ ಪ್ರಾರಂಭವಾದ ಭವ್ಯ ಮೌನ ಮೆರವಣಿಗೆ ಸುಮಾರು 20 ಸಾವಿರ ಜನ ಮಳೆ ಗಾಳಿ ಲೆಕ್ಕಿಸದೆ ಧರ್ಮಸ್ಥಳ ಬೆಂಬಲಕ್ಕೆ ಭಾಗವಹಿಸಿದ್ದರು.ಪ್ರತಿಭಟನೆ ಗಣಪತಿ ಗಲ್ಲಿ, ಕಾಗತಿ ವೇಸ್, ಚನ್ನಮ್ಮನ ವೃತ್ತದ ಮುಖಾಂತರ ಬಂದು ಜಿಲ್ಲಾಧಿಕಾರಿ ಮೊಹಮ್ಮದ ರೋಷನ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಸುಭಾಷ ಪಾಟೀಲ,ನಗರ ಅಧ್ಯಕ್ಷ ಗೀತಾ ಸುತಾರ, ಜಿಲ್ಲಾ ಉಪಾಧ್ಯಕ್ಷ ಮಹಾಂತೇಶ ವಕ್ಕುಂದ, ಡಾ. ರವಿ ಪಾಟೀಲ, ಮುರುಘೇದ್ರಂಗೌಡ ಪಾಟೀಲ್, ಸುಭಾಷ ಪಾಟೀಲ, ಹಿಂದೂ ಸಂಘಟನೆ ಪಧಧಿಕಾರಿಗಳು, ಸಹಸ್ರಾರು ಜನತೆ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

# ಡಿ ದೇವರಾಜ ಅರಸು ಜಯಂತಿ ಆಚರಣೆ

**ಕಾರವಾರ,** : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಸಂಯುಕ್ತಾಶ್ರಯದಲ್ಲಿ ಕಾರವಾರದ ದೈವಜ್ಞ ಕಲ್ಯಾಣ ಮಂಟಪದಲ್ಲಿ ಬುಧವಾರ ಆಯೋಜಿಸಲಾದ, ಸಾಮಾಜಿಕ ನ್ಯಾಯದ ಹರಿಕಾರರಾದ ಡಿ. ದೇವರಾಜ ಅರಸು ರವರ 110 ನೇ ಜನ್ಮ ದಿನಾಚರಣೆಯನ್ನು ಜಿಲ್ಲಾಧಿಕಾರಿ ಕೆ. ಲಕ್ಷ್ಮಿ ಪ್ರಿಯಾ, ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಡಿ. ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿ ಡಾ.ದಿಲಿಷ್ ಸಶಿ ಅವರು ದೇವರಾಜು ಅರಸು ರವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ಮಾತನಾಡಿ, ಸಮಾಜಿಕ ನ್ಯಾಯದ ಹರಿಕಾರ ದೇವರಾಜು ಅರಸು ಅವರು ಮೈಸೂರು ಜಿಲ್ಲೆಯ ಹುಣಸೂರು ಎಂಬ ಹಳ್ಳಿಯ ಹಿಂದುಳಿದ ಬಡ ವರ್ಗದಿಂದ ಬಂದವರು. ಬಡವರ, ದೀನ ದಲಿತರ, ಹಿಂದುಳಿದ ವರ್ಗಗಳ ಧ್ವನಿಯಾಗಿದ್ದರು. ಅವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದರು. ಮೈಸೂರು ರಾಜ್ಯಕ್ಕೆ ಏಕೀಕರಣದ ನಂತರ 1973 ರಲ್ಲಿ ಕರ್ನಾಟಕ ಎಂದು ನಾಮಕರಣ ಮಾಡಿದರು, ರೈತರಿಗಾಗಿ ಭೂ ಸುಧಾರಣಾ ಕಾಯ್ದೆ ಜಾರಿಗೊಳಿಸಿ 8 ಲಕ್ಷ ರೈತರನ್ನು 11 ಲಕ್ಷ ಎಕರೆ ಜಮೀನುಗಳಿಗೆ ಭೂ ಒಡೆಯರನ್ನಾಗಿ ಮಾಡಿದ ಕೀರ್ತಿ ಇವರಿಗೆ ಸಲ್ಲುತ್ತದೆ ಎಂದರು.

ಹಿಂದುಳಿದ ವರ್ಗಗಳ ಇಲಾಖೆಯಡಿ ವಸತಿ ನಿಲಯಗಳ ನಿರ್ಮಾಣಕ್ಕೆ ಬುನಾದಿ ಹಾಕಿದವರು. ಪ್ರಸ್ತುತ ಉತ್ತರ ಕನ್ನಡ ಜಿಲ್ಲೆಯಲ್ಲಿ 103 ಹಿಂದುಳಿದ ವರ್ಗಗಳ ವಸತಿ ನಿಲಯಗಳಿವೆ. ವಿದ್ಯಾರ್ಥಿಗಳು ವಸತಿ ನಿಯಯಗಳಲ್ಲಿ ಸಮಯವನ್ನು ವ್ಯರ್ಥಮಾಡದೆ ಉತ್ತಮ ಅಭ್ಯಾಸ ಮಾಡಿ ದೇವರಾಜು ಅರಸು ರವರ ಜೀವನ ಚರಿತ್ರೆಯನ್ನು ಅರಿತುಕೊಂಡು ಅವರ ಕನಸನ್ನು ನನಸು ಮಾಡುವ ಮೂಲಕ ದೇಶಕ್ಕೆ ಉತ್ತಮ ಕೊಡಿಗೆ ನೀಡಬೇಕೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ನಗರ ಸಭೆ ಅಧ್ಯಕ್ಷ ರವಿರಾಜ ಚಂದ್ರಹಾಸ ಅಂಕೋಲೆಕರ ಮಾತನಾಡಿ, ದೇವರಾಜು ಅವರು ಮಾಡಿದ ಸಾಧನೆಯನ್ನು ಯುವ ಪೀಳಿಗೆ ಅರಿತುಕೊಂಡು ಅವರು ಕಂಡಂತ ಕನಸ್ಸು ನನಸ್ಸು ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿ. ಅವರು ಮಾಡಿದ ಯೋಜನೆಗಳು ವಿದ್ಯಾರ್ಥಿಗಳು ಸದುಪಯೋಗ ಪಡೆದುಕೊಂಡು ಉನ್ನತ ಹುದ್ದೆಯನ್ನು ಪಡೆದುಕೊಳ್ಳಿ ಎಂದರು.

ಅಂಕೋಲಾ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಕನ್ನಡ ಉಪನ್ಯಾಸಕ ಮಹೇಶ್ ಪಿ ನಾಯ್ಕ ಡಿ ದೇವರಾಜ ಅರಸು ಅವರ ಕುರಿತು ಉಪನ್ಯಾಸ ನೀಡಿ ಮಾತನಾಡಿ, ದೇವರಾಜು ಅರಸು ಅವರು ಸಾಧನೆಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಂಡಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ. ನಾಡಿನ



ಮುಖ್ಯ ಮಂತ್ರಿಗಳಾಗಿ ಹಿಂದುಳಿದ ವರ್ಗಗಳ ಏಳಿಗೆಗಾಗಿ ಶ್ರಮಿಸಿದವರು. ಇವರು ದೂರ ದರ್ಶನಿಕದ ಫಲವಾಗಿ ಹಿಂದುಳಿದ ವರ್ಗಗಳ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡಲು ಅವಕಾಶ ಕಲ್ಪಿಸಿದೆ. ಅವರು ಸಮಾಜಕ್ಕೆ ಅಪಾರ ಕೊಡುಗೆಯನ್ನು ನೀಡಿದ್ದಾರೆ ಎಂದರು.

ಹಿಂದುಳಿದ ವರ್ಗಗಳ ವಸತಿ ನಿಲಯಗಳಲ್ಲಿ ವಿದ್ಯಾಭ್ಯಾಸ ಮಾಡಿ ಉನ್ನತ ಸ್ಥಾನ ಪಡೆದ ಎಸ್. ಎಸ್. ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಹಾಗೂ ದೇವರಾಜ ಅರಸು ಜನ್ಮ ದಿನಾಚರಣೆ ಪ್ರಯುಕ್ತ ಹಿಂದುಳಿದ ವಸತಿ ನಿಲಯಗಳಲ್ಲಿ ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಉಮೇಶ್ ವೈ. ಕೆ, ನಗರಸಭೆ ಸದಸ್ಯ ಹನುಮಂತ ತಳವಾರ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರಾಮ ದಾಸ್ ನಾಯ್ಕ, ವಾರ್ಡನ್ ನಿಶ್ಚಲ್ ಕಾಂಬ್ಲೆ, ಮತ್ತಿತರರು ಉಪಸ್ಥಿತರಿದ್ದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಶಿವಕ್ಕ ಮಾದರ ಸ್ವಾಗತಿಸಿದರು. ಮುಖ್ಯೋಧ್ಯಾಪಯ ಡಾ. ಗಣೇಶ್ ಎನ್ ಬಿಷ್ಠಣ್ಣನವರು ನಿರೂಪಿಸಿದರು. ವಸತಿ ನಿಲಯ ವಾರ್ಡನ್ ಮಂಜುಳ ವಂದಿಸಿದರು. ಹಿಂದುಳಿದ ವರ್ಗಗಳ ಕಚೇರಿಯ ಪತ್ರಾಂಕಿತ ಅಧಿಕಾರಿ ವೀಣಾ ನಾಯಕ ಸಂದ್ಭಾವನಾ ದಿನಾಚರಣೆಯ ಪ್ರತಿಜ್ಞೆ ಬೋಧಿಸಿದರು.

### ಡಿ.ದೇವರಾಜ ಅರಸುರವರ 110ನೇ ಜನ್ಮ ದಿನಾಚರಣೆ

## ಡಿ.ದೇವರಾಜ ಅರಸು ನಾಡಿನ ಏಳಿಗೆಗೆ ಶ್ರಮಿಸಿದ ಮಹಾನ್ ನಾಯಕ: ನಾಗೇಶ ನಾಯಕ



**ಬೆಳಗಾವಿ, :** ಕರ್ನಾಟಕದಲ್ಲಿ ಮೌನ ಕ್ರಾಂತಿಗೆ ಮುನ್ನುಡಿ ಬರೆದಂತಹ ಮಹಾನ ಮೇದಾವಿ, ಬದುಕಿನುದ್ದಕ್ಕು ಇನ್ನೊಬ್ಬ-ರಿಗೆ ಮಾರ್ಗದರ್ಶನ ಮಾಡಿಕೊಂಡು ಬಂದಂತಹ ರಾಜಕಾರಣಿ, ಹಸಿದ ಹೊಟ್ಟೆಗೆ ಅನ್ನ, ಅಸಹಾಯಕ ಕೈಗಳಿಗೆ ದುಡಿಮೆಯ ಅವಕಾಶ ಒದಗಿಸಿ ಕೊಟ್ಟಂತಹ ಮಹಾನ ಮಾನವತಾವಾದಿ, ಪುಸ್ತಕ ಪ್ರೇಮಿ ಹಾಗೂ ನಮ್ಮ ನಾಡು ಕಂಡಂತಹ ದೀಮಂತ ನಾಯಕ ಡಿ. ದೇವರಾಜ ಅರಸುರವರು ಎಂದು ಬೈಲಹೊಂಗಲ ತಾಲೂಕಿನ ಉಡ-ಕೇರಿ ರಾಮಲಿಂಗೇಶ್ವರ ಪ್ರೌಢ ಶಾಲಾ ಶಿಕ್ಷಕ ನಾಗೇಶ ನಾಯಕ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ (ಆ.20) ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ನಡೆದ ದಿವಗಂತ ಡಿ.ದೇವರಾಜಅರಸು ರವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸರಳತೆಯ ಪ್ರತಿರೂಪ, ಸಮಾಜ ಸುಧಾರಕ, ದೀನ ದಲಿತರ ಬಂದು, ತಬ್ಬಲಿ ಜಾತಿಗಳ ತಂದೆ, ಬಡವರ ಸಶಕ್ತ ಧ್ವನಿ, ತುಳಿತಕ್ಕೊಳಗಾದವರನ್ನು ಎದೆಗಪ್ಪಿಕೊಂಡು ಸಂತೈಸಿದ ಅಂತಃಕರಣದ ಆಪ್ತ ಜೀವ, ಅನ್ನದಾತರ ಬದುಕಿನ ಆಶಾಕಿರಣ, ಐತಿಹಾಸಿಕ ಬದಲಾವಣೆಗಳಿಗೆ ನಾಂದಿಯನ್ನು ಹಾಡಿದ ಮಹಾನ ನಾಯಕರು ಎಂದರು.

ದೇವರಾಜ, ದೇವಿರಮ್ಮ ಅವರ ಮಗನಾಗಿ ಜನಿಸಿದರು. ಇವರು 1930 ದಶಕದಲ್ಲಿ ರಾಜಕೀಯ ಪ್ರವೇಶಿಸುತ್ತಾರೆ, 1941ರಲ್ಲಿ ಪ್ರಜಾ ಪ್ರತಿನಿಧಿ ಸಭೆಗೆ ಆಯ್ಕೆಯಾಗುತ್ತಾರೆ, 1952 ರಲ್ಲಿ ಮೈಸೂರು ರಾಜ್ಯ ವಿಧಾನಸಭೆಗೆ ಆಯ್ಕೆಯಾಗುತ್ತಾರೆ, ಇವರು ಗಾಂಧಿವಾದಿಯಾಗಿದ್ದರು.

ಸಂಘಟಣಾ ಶಕ್ತಿಯ ಸಹ ಹೊಂದಿದ ದೇವರಾಜ ಅರಸು ಅವರು 1942ರ ಕ್ವಿಟ ಇಂಡಿಯಾ ಚಳುವಳಿಯಲ್ಲಿ ಭಾಗಿಯಾಗಿ ಜೈಲುವಾಸವನ್ನು ಸಹ ಅನುಭವಿಸಿದ್ದರು ಎಂಬ ಇತಿಹಾಸ ನಮಗೆ ದೊರೆಯುತ್ತದೆ. ಸತತ 40 ವರ್ಷಗಳ ಕಾಲ ಹುಣಸೂ-ರಿನಿಂದ ಶಾಸಕರಾಗಿದ್ದು ಬಹುದೊಡ್ಡ ಹಿರಿಮೆಯಾಗಿದೆ. ಅರಸುರವರು ಬಹಳಷ್ಟು ಇಲಾಖೆಗಳ ಸಚಿವರಾಗಿ ನಿಭಾಯಿಸಿರುತ್ತಾರೆ. ಕರ್ನಾಟಕದಲ್ಲಿ ಅತಿ ಹೆಚ್ಚುಕಾಲ ಮುಖ್ಯಮಂತ್ರಿಯಾಗಿದ್ದರು ಎಂಬ ಹೆಗ್ಗಳಿಗೆ ಅವರಿಗೆ ಸಲ್ಲುತ್ತದೆ.

ರೈತರ, ಬಡವರ, ಹಿಂದುಳಿದವರ, ಶೋಷಣೆಗೆ ಒಳಪಟ್ಟವರ ಪರವಾಗಿ ತಮ್ಮ ಕೆಲಸವನ್ನು ಮಾಡಿದ್ದಾರೆ. ತಮ್ಮ ಆಡಳಿತ ಅವಧಿಯಲ್ಲೆ ಕನ್ನಡವನ್ನ ಆಡಳಿತ ಭಾಷೆಯನ್ನಾಗಿ ಜಾರಿಗೊಳಿಸಿದ್ದರು. ನಿರುದ್ಯೋಗ ಪದವಿಧರ ಯುವಕರಿಗೆ ಗೌರವಧನ ನೀಡಿದವರು.

ಶೇ.55 ರಷ್ಟು ಹಿಂದುಳಿದವರಿಗೆ ಮೀಸಲಾತಿ ಕಲ್ಪಿಸಿಕೊಡುತ್ತಾರೆ. ಭೂ ಸುಧಾರಣೆ ಯೋಜನೆಯನ್ನು ತರುತ್ತಾರೆ. ಉಳುವವನೆ ಭೂಮಿಯ ಒಡೆಯ ಎಂಬ ಕಾಯ್ದೆಯನ್ನ ತಮ್ಮ ಅವಧಿಯಲ್ಲಿ ಜಾರಿಗೆ ತರುತ್ತಾರೆ.

ಈ ಕಾಯ್ದೆಯಿಂದಾಗಿ ಬಹಳಷ್ಟು ರೈತರಿಗೆ ಉಳುಮೆಗೆ ಭೂಮಿ ದೊರೆಯುತ್ತದೆ. ನಾಡಿನ ಜನರ ಸಂಕಷ್ಟಗಳನ್ನು ತಿಳಿದುಕೊಳ್ಳಲು ಮಾರು ವೇಶದಲ್ಲಿ ನಗರದಲ್ಲಿ ತಿರುಗಾಡಿ ಜನರ ಸಮಸ್ಯೆಗಳನ್ನು ತಿಳಿದುಕೊಂಡು ಸಮಸ್ಯೆಗಳಿಗೆ ಪರಿಹಾರ ಒದಗಿಸುತ್ತಿದ್ದರು ಎಂದು ಶಿಕ್ಷಕರಾದ ನಾಗೇಶ ನಾಯಕ ಅವರು ವಿಶೇಷ ಉಪನ್ಯಾಸ ನೀಡಿದರು.

ಸಹಾಯಕ ಪೊಲೀಸ ಆಯುಕ್ತರಾದ ಸದಾಶಿವ ಕಟ್ಟಿಮನಿ ಅವರು ಮಾತನಾಡಿ ಹುಣ್ಣಿಮೆಯ ರಾತ್ರಿಯಲ್ಲಿ ನಕ್ಷತ್ರದ ಮಧ್ಯೆ ಚಂದ್ರ ಹೇಗೆ ಮಿಂಚುತ್ತಾನೆ ಅದೆ ತೆರನಾದ ಡಿ.ದೇವರಾಜ ಅರಸುರವರು. ಹಿಂದುಳಿದವ-ರಿಗೆ ಮೀಸಲಾತಿ ಕಲ್ಪಿಸಿಕೊಟ್ಟಂತಹ ಮಹಾನ ಮೇದಾವಿ ರಾಜಕಾರಣಿ ಎಂದರು.

ಅರಸು ಅವರು ಜಾರಿಗೆ ತಂದಂತಹ ಉಳುವವನೆ ಭೂ ಒಡೆಯ ಎಂಬ ಕಾನೂನಿನಿಂದಾಗಿ ಬಹಳಷ್ಟು ಜನ ಜಮಿನುಗಳನ್ನು ಪಡೆದು ತಮ್ಮ ಜೀವನ ರೂಪಿಸಿಕೊಳ್ಳಲು ಅನುಕೂಲವಾಯಿತು. ಇದರಿಂದ ಸಾಕಷ್ಟು ಜನರು ಜಮೀನ್ದಾರ ದಬ್ಬಾಳಿಕೆಯಿಂದ ಮುಕ್ತಿ ಪಡೆದರು.

ಡಿ.ದೇವರಾಜ ಅರಸುರವರ ಅಧಿಕಾರ ಅವಧಿಯಲ್ಲಿ ತುಳಿತಕ್ಕೊಳಗಾದ ಜನ-ರಿಗೆ ಬಹಳಷ್ಟು ಯೋಜನೆಗಳನ್ನು ರೂಪಿಸಿ ಅಂತಹ ಜನರು ಸಮಾಜದಲ್ಲಿ ಗೌರವಯುತವಾದ ಜೀವನ ಕಟ್ಟಿಕೊಳ್ಳಲು ದಾರಿ ಮಾಡಿಕೊಟ್ಟಿದ್ದಾರೆ. ಅರಸುರವರ ಸಾಧನೆಗಳು ಅಜರಾಮರಗಳಾಗಿವೆ ಎಂದು ಸದಾಶಿವ ಕಟ್ಟಿಮನಿ ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತೆ ಶುಭ.ಬಿ,ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ರಾಮನಗೌಡ ಕನ್ನೊಳ್ಳಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಜಿಲ್ಲಾ ಆಯುಷ ಅಧಿಕಾರಿ ಶ್ರೀಕಾಂತ ಸುಣಧೋಳಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ರವಿ ಬಂಗಾರೆಪ್ಪನವರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಹರ್ಷ.ಎಸ್ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.

## ವಿಜೃಂಬಣೆಯಿಂದ ಜರುಗಿದ ಶ್ರೀ ಭೋಗೇಶ್ವರ ರಥೋತ್ಸವ



**ತಾಳಿಕೋಟೆ,** ತಾಲೂಕಿನ ಹಿರೂರ ಗ್ರಾಮದಲ್ಲಿ ಶ್ರೀ ಭೋಗೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಸೋಮವಾರರಂದು ಮಹಾ ರಥ-ೋತ್ಸವವು ಸಾವಿರಾರು ಭಕ್ತ ಸಮೂಹದ ಮಧ್ಯ ವಿಜೃಂಬಣೆಯಿಂದ ಜರುಗಿತು. ರಥೋತ್ಸವ ಅಂಗವಾಗಿ ನಸುಕಿನ ಜಾವ ಶ್ರೀ ಭೋಗೇಶ್ವರ ಮಹಾ ಮೂರ್ತಿಗೆ ವೇ.ಜಗನ್ನಾಥ ಜೋಶಿ ಅವರಿಂದ ರುದ್ರಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಕಾರ್ಯಕ್ರಮಗಳು ಜರುಗಿದವಲ್ಲದೇ ಮುಂಜಾನೆ 8 ಗಂಟೆಗೆ ಗಂಗಸ್ಥಳದೊಂದಿಗೆ ಕುಂಭ ಕಳಸ ವಾದ್ಯವೈಭವಗಳೊಂದಿಗೆ ಜರುಗಿ 11 ಗಂಟೆಗೆ ಫಲ್ಲಕ್ಕಿ ಉತ್ಸವವು ಮೇರವಣಿಗೆಯು ಪ್ರಾರಂಭಗೊಂಡು ಶ್ರೀ ಭೋಗೇಶ್ವರ ದೇವಸ್ಥಾನದಿಂದ ಡೋಣಿ ಭೋಗೇಶ್ವರದವರೆಗೆ ಜರುಗಿತು.

ಮಧ್ಯಾಹ್ನ 12 ಗಂಟೆಯಿಂದ ಮಹಾ ಪ್ರಸಾದ ಜರುಗಿತು. ಸಾಯಂಕಾಲ 5 ಗಂಟೆಗೆ ಸಾವಿರಾರು ಭಕ್ತಾಧಿಗಳ ಸಮ್ಮುಖದಲ್ಲಿ ಮಹಾ ರಥ-ೋತ್ಸವವು ಜರುಗಿತು. ಈ ರಥೋತ್ಸವದ ಸಮಯದಲ್ಲಿ ಭಕ್ತಾಧಿಗಳು, ಉತ್ತತ್ತಿ, ಬಾಳೆಹಣ್ಣು ರಥಕ್ಕೆ ಅರ್ಪಿಸಿ ಭಕ್ತಿಭಾವ ಮೆರೆದರು.

## ಆ.28 ರಂದು ಕಿನ್ನಾಳನಲ್ಲಿ ತಾಲೂಕು ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

**ಕೊಪ್ಪಳ :** ಕೊಪ್ಪಳ ತಾಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಆಗಸ್ಟ್ 28 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ತಾಲೂಕಿನ ಕಿನ್ನಾಳ ಗ್ರಾಮ ಪಂಚಾಯತಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಕೊಪ್ಪಳ ತಾಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಸ್ಯಾಮುವೆಲ್ ಅವರು ವಹಿಸುವರು. ಸಭೆಯಲ್ಲಿ ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಹಾಗೂ ಇತರ ವಿಷಯಗಳ ಕುರಿತು ಚರ್ಚೆ ನಡೆಯಲಿದ್ದು, ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾ-ರಿಗಳು ಅಗತ್ಯ ಮಾಹಿತಿಯೊಂದಿಗೆ ಪ್ರತಿನಿಧಿಗಳನ್ನು ನಿಯೋಜಿಸದೇ ಖುದ್ದಾಗಿ ಸಭೆಗೆ ಹಾಜರಾಗುವಂತೆ ಕೊಪ್ಪಳ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಮುಧೋಳ: ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯ ಅಧ್ಯಕ್ಷ ನಾಡೋಜ ಮಹೇಶ ಜೋಶಿ ಅವರು ಮುಧೋಳದ ನಿರಾಣಿ ಉದ್ಯಮ ಸಮೂಹ ಸಂಸ್ಥೆಗೆ ಭೇಟಿ ನೀಡಿದ್ದ ಸಂದರ್ಭದಲ್ಲಿ, ಮಾಜಿ ಸಚಿವ, ಉದ್ಯಮಿ ಮುರಗೇಶ ನಿರಾಣಿ ಅವರ 60.ನೆ ಹುಟ್ಟು ಹಬ್ಬದ ಪ್ರಯುಕ್ತ ಅವರನ್ನು ಆತ್ಮೀಯ ಗೌರವ ಸನ್ಮಾನ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಶಿವಾನಂದ ಶೆಲ್ಲಿಕೇರಿ, ತಾಲೂಕಾಧ್ಯಕ್ಷ ಆನಂದ ಪೂಜಾರಿ, ಹಿರಿಯ ಸಾಹಿತಿ ಡಾ.ಶಿವಾನಂದ ಕುಬಸದ, ಡಾ.ಸಿದ್ದು ದಿವಾಣ, ಎಂ.ಎಸ್. ಹೆಗ್ಗಳಗಿ, ಎ.ಜಿ. ಕುಲಕರ್ಣಿ, ಕೃಷ್ಣಾ ಪೂಜಾರಿ, ಮಲ್ಲಿಕಾರ್ಜುನ್ ಬಟಕುರ್ಕಿ ಇತರರಿದ್ದರು.**

## ಶರಣನಾದವ ಹೃದಯವಂತವ ನಾಗಿರುತ್ತಾನೆ-ದೇವಾನಂದ ಶರಣರು



**ತಾಳಿಕೋಟೆ,** ಹೃದಯವೆಂದರೇ ಕಾಲತನದಲ್ಲಿ ಕರುಣೆ,ಪ್ರೀತಿ,ಪ್ರೇಮ,ವ ಾತ್ಸಲ್ಯವೆಂಬುದು ಇದರಲ್ಲಿದೆ. ಒಂದು ಶಬ್ದದಿಂದ ಇನ್ನೊಂದು ಶಬ್ದಕ್ಕೆ ಹೋಗುವ ಅಂತರದಲ್ಲಿರುವುದೇ ಹೃದಯವಾಗಿದೆ. ಹೃದಯವೆಂದರೇ ಕಾಲಿತನ ಇರುವುದೇ ಹೃದಯವಂತಿಕೆಯಾಗಿದ್ದು ಮನಸ್ಸಿನ ಪಲಾಯನ ತತ್ವದೆಡೆ ತೆರಳಬೇಕಾಗುತ್ತದೆ ಕಾರಣ ಕೆಲಸ ಕಾರ್ಯಗಳು ಇರಬೇಕು ಮನಸ್ಸಿನ ಪಲಾಯನ ತತ್ವಗಳನ್ನು ಓದುವುದು ಸಂಗ್ರಹಿತ ಜ್ಞಾನವಾಗಿ ಪರಿಣಮಿಸಲಿದೆ ಎಂದು ಬೆನಕನ ಹಳ್ಳಿಯ ಶರಣರಾದ ಶ್ರೀ ದೇವಾನಂದ ಶರಣರು ನುಡಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ತಾಲೂಕಾ ಘಟಕ, ಯುವಕ ಘಟಕ, ಕದಳಿ ವೇದಿಕೆ ತಾಳಿಕೋಟೆ ಇವರ ವತಿಯಿಂದ ಶ್ರಾವಣ ಮಾಸದ ಅಂಗವಾಗಿ ಸ್ಥಳೀಯ ಶ್ರೀ ಕಾಳಿಕಾದೇವಿ ಮಂದಿರದ ಸಭಾ ಭವನದಲ್ಲಿ ನಾಲ್ಕನೇ ಸೋಮವಾರರಂದು ಏರ್ಪಡಿಸಲಾದ "ವಚನ ಶ್ರಾವಣ" ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ "ಶರಣರೆಂದರೇ ಯಾರು?" ಎಂಬ ವಿಷಯ ಕುರಿತು ಉಪನ್ಯಾಸ ನೀಡಿದ ಅವರು ಸ್ಪೋಟಕವಾಗಿ ಮಾತನಾಡುವವನೇ ಶರಣನಾಗಿರುತ್ತಾನೆ ಕಾಮನೆಗಳ ಬಾಣಗಳನ್ನು ತಾಕಿಸಿಕೊಳ್ಳದೇ ಪೃಥ್ವಿಯಲ್ಲಿ ವಾಸಿಸುವವನೇ ಶರಣನೆಂದರು. ಒಳ್ಳೆಯ ಶಬ್ದದಂತೆ ನಡೆ ನುಡಿ ಇರದಿದ್ದರೆ ಆ ಶಬ್ದಕ್ಕೆ ಚುತಿ ಬರಲಿದೆ ಶರಣ ಎನ್ನುವವನು ಹೃದಯವಂತ ಬುದ್ದಿಗೆ ವಿದಾಯ ಹೇಳಿದ ಶರಣನಾಗುತ್ತಾನೆಂದರು. ಜಟಿಲತೆಯನ್ನು ಸರಳಿಗೊಳಿಸಿಕೊಳ್ಳಬೇಕು ಬುದ್ದಿ ನಿಂತವನಲ್ಲಿ ಹೃದಯವಂತಿಕೆ ಎಂಬುದು ಬರುತ್ತದೆ ಶರಣ ಎಂದರೆ ಪ್ರಾಬಲ್ಯದಲ್ಲಿ ಬರೆದಿದ್ದನ್ನು ಅನುಬ ವಿಸುವಂತವನಾಗಿರುತ್ತಾನೆಂದರು. ಸುಃಖ, ದುಃಖ ಮಾನ ಅಪಮಾನವೆಂಬುದು ಬುದ್ದಿವಂತರಿಗೆ ಅನುಭವ ವಾಗುತ್ತದೆ ಆದ-ರೆ ಶರಣರಿಗೆ ಆಗುವದಿಲ್ಲಾವೆಂದರು. ತನ್ನಲ್ಲಿ ತಾನು ತನ್ಮಯನಾಗಿ ಇರುವವನೇ ಶರಣ ಉರಿ ಉಂಡ ಕರ್ಪೂರದಂತೆ ಬಿಸಿಲು ಉಂಡ ಅರಿಸಿಣದಂತೆ ಕಾಯ್ದ ಕಬ್ಬಿಣ ನೀರು ಉಂಡಂತೆ ಹಾಗೆ ಶರಣನಾದವ ಪ್ರಾಲಬ್ದ ಕರ್ಮಗಳನ್ನು ತೋರದಂತೆ ಶರಣ ನಿಶ್ಚಿಂತವಾಗಿರುತ್ತಾನೆಂದರು. ಭಾವದಲ್ಲಿ ತುಂಬಿಕೊಂಡಾಗ ನಾನು ಹಂಗ ಅಲ್ಲಾ ಹೇಳಲಾಗುತ್ತದೆ ಭೌತಿಕ ಶರಣ ಲಿಂಗವಾಗಿ ಭೋದಿಸುವವನು ಶರಣ ಪ್ರಾಲಬ್ದ ಕರ್ಮ ಬಂದಾಗ ಕರ್ಪೂರದಂತೆ ಬಧುಕುತ್ತಾನೆಂದರು ಸಂಸಾರದ ಮಧ್ಯದಲ್ಲಿರುವವರೇ ಹೆಚ್ಚು ಸಂತಾನ ಉತ್ಪತ್ತಿಯನ್ನು ಮಾಡಿ ಜೀವಿಸುವವನೇ ಸಂಸಾರಿಕವೆಂದು ಹೇಳಲಾಗುತ್ತದೆ ಪ್ರಕೃತಿಯಲ್ಲಿ ಮೋಹ ಉಂಟಾದರೂ ಆತ ಸಂಸಾರಿಕನಾಗುತ್ತಾನೆಂದರು ಈಶ ಜಗದೀಶ ಮತ್ತೆಲ್ಲಿ ಇಲ್ಲಾ ನಿನ್ನಲ್ಲಿ ಇದ್ದಾನೆ ಆತನನ್ನು ನೋಡಿಕೊಳ್ಳಲು ಶಾಂತಿಯಿಂದ ಇರಬೇಕು ಸುಮ್ಮನಿರುವದರಲ್ಲಿ ಸತ್ಯವೆಂಬುದು ಹೊರಬರುವದು ಇಲ್ಲಿ ನಾವು ಸುಮ್ಮನಿರಬೇಕೆಂದೇ ಜನ್ಮ ತಾಳಿ ಬಂದವರಾಗಿದ್ದೇವೆ ಆದರೂ ನಮ್ಮಲ್ಲಿ ಗಲಾಟೆ ಎಂಬುದು ನಡದೇ ಇದೆ ಎಂದು ವಿಷಾದಿಸಿದರು. ಸ್ವಯಂ ಪ್ರಜ್ಞೆ ಎಂಬುದು ಪ್ರಕಟವಾದಾಗ ಮನಸ್ಸೆಂಬುದು ಸುಮ್ಮನಿರುತ್ತದೆ ಅಂಗ ಲಿಂಗಾದಾಗ ಲಿಂಗ ನೀನಾದಾಗ ಪ್ರಕೃತಿ ವಿಚಲಿತವಾಗಲಿದೆ ವೇಗ ಸ್ಮರಣ ಶಕ್ತಿ ಕುರಿತು ತಿಳುವಳಿಕೆ ನೀಡಿದ ಶರಣ ದೇವಾನಂದರು ಲಿಂಗಾಂಗ ಸಾಮರಸ್ಯ ತಿಳಿಯಬೇಕಾದರೆ ನಾನು ಯಾರು ಎಂಬುದು ತಿಳಿಯುವದೇ ಅಗತ್ಯವಾಗಿದೆ ನಾನ್ಯಾರು ಇರುವಿನ ಮೌನವಾದಾಗ ಅಥ-ರ್ವವಾಗುತ್ತದೆ ಎಂದರು. ಹುಟ್ಟು ಸಾವಿನ ನಡುವೆ ತೋರಿ ತೋರಿ ಕೆಡುವದು ಗಲಾಟೆ ಎಂಬುದು ಇದನ್ನು ತಿಳಿದುಕೊಂಡ ಮೇಲೆ ದೇಹ ನಾನಲ್ಲಾ, ಪ್ರಾಣ ನಾನಲ್ಲಾ, ದೇಹ ನನಗಿಲ್ಲಾ, ಇದು ನನ್ನದಲ್ಲಾ, ನನಗಿಲ್ಲಾ, ಎಂದು ನಿಶ್ಚಯಿಸಿಕೊಂಡವನೇ ಶರಣನಾಗುತ್ತಾನೆಂದರು. ಇದು ಶರಣರ ಅನುಭವ ಎಂಬುದನ್ನು ಅರಿತುಕೊಳ್ಳಬೇಕಾದರೆ ಅನುಭವದ ಮಾತುಗಳನ್ನಾಡಬೇಕು ಎಲ್ಲದರಂತೆ ಇಂತಹ ಶರಣ ನೀನಾದರೆ ಅನುಕರಣೆ ಅನುಸ್ಮರಣೆಯಿಂದ ದೂರವಿದ್ದು ಆತ್ಮಾವಲೋಕನ ಮಾಡಿಕೊಳ್ಳಬೇಕೆಂದರು. ದೇಹ ಪ್ರಕೃತಿ ಕಾಣದೇ ಇರುವದು ಪರಮಾತ್ಮ ಆನಂದ ಪರಾಕಾಷ್ಠೆ ಸ್ಥಿತಿ ಪರಮಾತ್ಮನಾಗಿದ್ದಾನೆ ಮಾಯೇ ಇಲ್ಲದವನಿಗೆ ಮದ ಎಂಬುದು ಇಲ್ಲಾವೆಂದು ಹೇಳಿದ ಶರಣ ದೇವಾನಂದರು ಶರಣ-ರೆಂದರೆ ಯಾರು ಎಂಬುದನ್ನು ಬಹು ಮಾರ್ಮಿಕವಾಗಿ ವಿವರಿಸಿ ಉಪಸ್ಥಿತ ಭಕ್ತ ಸಮೂಹಕ್ಕೆ ಮನವರಿಕೆ ಮಾಡಿದರು.

ಇನ್ನೋರ್ವ ಅಧ್ಯಕ್ಷತೆ ವಹಿಸಿದ ಶರಣ ಸಾಹಿತ್ಯ ಪರಿಷತ್ತಿನ ತಾಲೂಕಾ ಅಧ್ಯಕ್ಷರಾದ ಅಶೋಕ ಹಂಚಲಿ ಅವರು ಮಾತನಾಡಿ ಪಂಚೇಂದ್ರಿಯ ಹಿಡಿತಕ್ಕೆ ನಾವು ಸಿಲುಕದಂತಿದ್ದೇವೆ ಇವೆಲ್ಲವುಗಳ ಆಸೆಯಿಂದ ಒಳಗಾಗಿದ್ದೇವೆ ಈ ವ್ಯಾಮೋಹಕ್ಕೆ ಒಳಗಾದ ಮನಸ್ಸು ಹೊರಗೆ ಬರುವದು ಅಷ್ಟೇನು ಸುಲಭವಲ್ಲಾ ಸರಳವಲ್ಲಾವೆಂದು ಹಿಂದಿನ ದಿನಮಾನದ ಹಾಗೂ ಇಂದಿನ ದಿನಮಾನದ ವ್ಯತ್ಯಾಸಗಳ ಕುರಿತು ಮನವ-ರಿಕೆ ಮಾಡಿದ ಹಂಚಲಿ ಅವರು ಶರಣ ಸಾಹಿತ್ಯ ಪರಿಷತ್ ಸದಸ್ಯರಾಗಲು ಕೆಲವ-ರಿಗೆ ವಿನಂತಿಸಿದರಲ್ಲದೇ ಹಿರಿಯರ ಹೆಸ-ರಿನಲ್ಲಿ ದತ್ತಿ ನಿಧಿ ನೀಡಿದರೆ ಶರಣ ಸಾಹಿತ್ಯ ಪರಿಷತ್ತಿನ ವತಿಯಿಂದ ಕಾರ್ಯಕ್ರಮಗಳನ್ನು ಏರ್ಪಡಿಸಿ ಅವರ ಸ್ಮರಣೆ ನಡೆಸಲಾಗುತ್ತದೆ ಎಂದರು.

ಕಾರ್ಯಕ್ರಮದ ಮೊದಲಿಗೆ ಬಸವಣ್ಣನವರ ಹಾಗೂ ಅಕ್ಕಮಹಾದೇವಿ ಅವರ ಭಾವಚಿತ್ರಕ್ಕೆ ಶ್ರೀಗಳಿಂದ ಹಾಗೂ ಅತಿಥಿಗಳಿಂದ ಪುಷ್ಪಾರ್ಚನೆ ಗೈಯಲಾಯಿತು.


ಇದೇ ಸಮಯದಲ್ಲಿ ನಿವೃತ್ತ ಶಿಕ್ಷಕಿ ಉಮಾ ಸಾಲಂಕಿ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯ ಮೇಲೆ ಗೌರವ ಉಪಸ್ಥಿತಿಗಳಾಗಿ ಶರಣೆ ಇಂಧುಮತಿ ಬಬಲೇಶ್ವರ, ನಿವೃತ್ತ ಪ್ರಾಚಾರ್ಯ ಡಾ.ಸಿ.ಲಿಂಗಪ್ಪ, ಉಪಸ್ಥಿತ-ರಿದ್ದರು.

ಈ ಸಮಯದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಯುವ ಘಟಕದ ಅಧ್ಯಕ್ಷ ಜಗದೀಶ ಬಿಳೇಭಾವಿ, ಕಾರ್ಯದರ್ಶಿ ಸಾಹೇಬಗೌಡ ಬಿರಾದಾರ, ಅಶೋಕ ಚಿನಗುಡಿ, ರಮೇಶ ಸಾಲಂಕಿ, ಸಂಗಮೇಶ ಪಾಲ್ಕಿ, ಶಿವಾನಂದ ಪಾಲ್ಕಿ, ಈರಣ್ಣ ಕಲ್ಬುರ್ಗಿ, ಮಲ್ಲಣ್ಣ ಹಿಪ್ಪರಗಿ, ಜಿ.ಜಿ.ಮದರಕಲ್ಲ, ಮಹಾದೇವಪ್ಪ ಕುಂಭಾರ, ಖಾಜಾಹುಸೇನ ಮುಲ್ಲಾ, ಎಂ.ಎಸ್.ನಾಗರಾಳ, ಸುಭಾಸ ಗಾಣೂರ, ಆರ್.ಬಿ.ದಮ್ಮೂರಮಠ, ಗುಂಡುರಾವ್ ಧನಪಾಲ, ಪ್ರಕಾಶ ಸುರಪೂರ, ಶೇಷಾಚಲ ಹವಾಲ್ದಾರ, ಕಾಶಿನಾಥ ಸಜ್ಜನ, ಪ್ರಭುಲಿಂಗ ಕಲ್ಲೂರ, ಮುತ್ತುಗೌಡ ಪಾಟೀಲ, ನಾಗರಾಜ ಬಳಿಗಾರ, ಭೀಮಣ್ಣ ಸೂಳಿಭಾವಿ, ಕದಳಿ ವೇದಿಕೆಯ ಅಧ್ಯಕ್ಷೆ ಉಮಾ ಘೀವಾರಿ, ಮೊದಲಾದವರು ಉಪಸ್ಥಿತರಿದ್ದರು.

ಶ್ರೀಮತಿ ವಿಶಾಲಾಕ್ಷ್ಮೀ ಬಡಿಗೇರ ಪ್ರಾರ್ಥಿಸಿದರು. ಅಪ್ಪಾಸಾಹೇಬ ಮೂಲಿಮನಿ ಸ್ವಾಗತಿಸಿದರು. ಶಿಕ್ಷಕ ಸಂತೋಷ ಜಾಮಗೊಂಡಿ ನಿರೂಪಿಸಿದರು. ಸಿದ್ದು ಕರಡಿ ವಂದಿಸಿದರು.

## ಛಾಯಾಗ್ರಾಹಕರಿಗೆ ಗೌರವ ಕಡಿಮೆಯಾಗುತ್ತಿದೆ : ಶಿವಪ್ರಕಾಶ




ರಬಕವಿ-ಬನಹಟ್ಟಿ, : ವಿಶ್ವ ಛಾಯಾಗ್ರಾಹಕರ ದಿನಾಚರಣೆ ಜರುಗಿತು.ಅವಳಿ ನಗರದ ಛಾಯಾಗ್ರಾಹಕ ಸಂಘದ ಅಧ್ಯಕ್ಷ ರುದ್ರಪ್ಪ ಯಡಹಳ್ಳಿ ಮಾತನಾಡಿ, ನಮ್ಮನ್ನು ಕರೆಯಿಸಿ ಚಂದುಕಾಕಾ ಸರಾಫ್ ಜ್ಯುವಲರಿಯವರು ಸನ್ಮಾನಸಿ ಗೌರವಿಸಿದ್ದು ಸಂತಸ ತಂದಿದೆ. ನಮ್ಮ ವೃತ್ತಿಯಲ್ಲಿ ಮತ್ತಷ್ಟು ಜವಾಬ್ದಾರಿಯಿಂದ ಕಾಯಕ ಮಾಡಬೇಕೆಂದು ಸಂತಸ ಮೂಡಿದೆ ಎಂದರು.

1837 ರಲ್ಲಿ ಲೂಯಿಸ್ ಡಾಗೆರೆ ಅಭಿವೃದ್ಧಿಪಡಿಸಿದ ಛಾಯಾಗ್ರಹಣ ಪ್ರಕ್ರಿಯೆಯಾದ ಡಾಗೆರೋಟೈಪ್ ಆವಿಷ್ಕಾರದ ನೆನಪಿಗಾಗಿ ಆಗಸ್ಟ್ 19 ರಂದು ವಿಶ್ವ ಛಾಯಾಗ್ರಹಣ ದಿನವನ್ನು ಆಚರಿಸಲಾಗುತ್ತದೆ. ಈ ಪ್ರಕ್ರಿಯೆಯನ್ನು ಆಗಸ್ಟ್ 19, 1839 ರಂದು ಫ್ರೆಂಚ್ ಸರ್ಕಾರವು ಜಗತ್ತಿಗೆ ಉಡುಗೊರೆಯಾಗಿ ಅಧಿಕೃತವಾಗಿ ಘೋಷಿಸಿತು. ಅಂದಿನಿಂದ, ಛಾಯಾಗ್ರಹಣವು ಅಗಾಧವಾಗಿ ವಿಕಸನಗೊಂಡಿದೆ,

ಅಭಿವ್ಯಕ್ತಿ, ಸಂವಹನ ಮತ್ತು ದಾಖಲೀಕರಣದ ಪ್ರಬಲ ಮಾಧ್ಯಮವಾಗಿದೆ. ಆದ್ದರಿಂದ ಛಾಯಾಗ್ರಹಣ ಇತಿಹಾಸದಲ್ಲಿ ಈ ಮಹತ್ವದ ಮೈಲಿಗಲ್ಲನ್ನು ಗೌರವಿಸಲು ಆಗಸ್ಟ್ 19 ಅನ್ನು ವಿಶ್ವ ಛಾಯಾಗ್ರಹಣ ದಿನವನ್ನಾಗಿ ಆಯ್ಕೆ ಮಾಡಲಾಗಿದೆಯೆಂದರು.

ಈ ಸಂದರ್ಭದಲ್ಲಿ ಛಾಯಾಗ್ರಾಹಕರಾದ ರಾಜು ಪಿಟಗಿ, ಮಾರುತಿ ಘನತಡೆ, ಶಶಿ ಭಜಂತ್ರಿ, ಸಚಿನ ಬಾಗಲಕೋಟ, ಸುರೇಶ ನಾಯಿಕ ಸೇರಿದಂತೆ ಚಂದುಕಾಕಾರ ಜ್ಯೂವೆಲರಿ ಎಲ್ಲ ಸಿಬ್ಬಂದಿಗಳು ಇದ್ದರು.

## ನಕಲಿ ವೈದ್ಯರ ದವಾಖಾನೆ ಜಪ್ತ



**ರಬಕವಿ-ಬನಹಟ್ಟಿ, :** ಸಮೀಪದ ಹಿಪ್ಪರಗಿ ಗ್ರಾಮದಲ್ಲಿ ನಕಲಿ ವೈದ್ಯ ನಡೆಸುತ್ತಿದ್ದ ದವಾಖಾನೆಯ ಮೇಲೆ ಜಮಖಂಡಿಯ ತಾಲ್ಲೂಕು ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಜಿ. ಎಸ್.ಗಲಗಲಿ ನೇತೃತ್ವದ ತಂಡ ದಾಳಿ ನಡೆಸಿ ದವಾಖಾನೆಯನ್ನು ಜಪ್ತ ಮಾಡಿದ ಘಟನೆ ಮಂಗಳವಾರ ನಡೆದಿದೆ.

ಈ ಸಂದರ್ಭದಲ್ಲಿ ಡಾ.ಜಿ.ಎಸ್.ಗಲಗಲಿ ಪತ್ರಿಕೆಯೊಂದಿಗೆ ಮಾತನಾಡಿ, ಅರುಣ ಕುಲಗೋಡ ನಕಲಿ ವೈದ್ಯಾರಾಗಿದ್ದುಕೊಂಡ ಹಿಪ್ಪರಗಿ ಗ್ರಾಮದಲ್ಲಿ ದವಾಖಾನೆಯನ್ನು ನಡೆಸುತ್ತಿದ್ದನು.

ದಾಳಿಯಲ್ಲಿ ದವಾಖಾನೆಯಲ್ಲಿರುವ ವಸ್ತುಗಳನ್ನು ಜಪ್ತ ಮಾಡಿಕೊಳ್ಳಲಾಗಿದೆ. ಅದೇ ರೀತಿಯಾಗಿ ದವಾಖಾನೆಯನ್ನು ಕೂಡಾ ಹಾಕಿ ಜಪ್ತ ಮಾಡಲಾಗಿದೆ ಎಂದು ಡಾ.ಗಲಗಲಿ ತಿಳಿಸಿದರು.

ಈ ಸಂದರ್ಭದಲ್ಲಿ ಆರೋಗ್ಯಾಧಿಕಾ-ರಿಗಳಾದ ಉಮೇಶ ಜೋಶಿ, ರವಿ ಕಾಂಬಳೆ, ಸಂತೋಷ ನಾಯಕ, ಮಹೇಶ ಬಾಗಲಕೋಟ ಮತ್ತು ಗ್ರಾಮ ಆಡಳಿತಾಧಿಕಾರಿ ಸೋರಗಾವಿ ಇದ್ದರು.

## ಪವಿತ್ರ ಶ್ರಾವಣ ಮಾಸದ ಕೊನೆಯ ಸೋಮವಾರ ಭಕ್ತರ ದಂಡು

**ಬಸವನಬಾಗೇವಾಡಿ,:**ಪಟ್ಟಣದ ಐತಿಹಾಸಿಕ ಮೂಲನಂದೀಶ್ವರ(ಬಸವೇಶ್ವರ) ದೇವಸ್ಥಾನಕ್ಕೆ ಪವಿತ್ರ ಶ್ರಾವಣ ಮಾಸದ ಕೊನೆಯ ಸೋಮವಾರವಾದ ಇಂದು ಮಳೆ ಬರುತ್ತಿದ್ದರೂ ರಾಜ್ಯದ ವಿವಿಧೆಡೆಗಳಿಂದ ಅಪಾರ ಪ್ರಮಾಣದ ಭಕ್ತರು ಆಗಮಿಸಿ ದೇವರ ದರ್ಶನ ಪಡೆದುಕೊಂಡು ಧನ್ಯತೆ ಅನುಭವಿಸಿದರು.

ಬೆಳಗ್ಗೆ ಮೂಲನಂದೀಶ್ವರನಿಗೆ ರುದ್ರಾಭಿಷೇಕ, ವಿಶೇಷ ಪೂಜೆಯನ್ನು ಗೌರಿಶಂಕರ ಚರಂತಿಮಠ ನೆರವೇರಿಸಿದರು. ಅಪಾರ ಪ್ರಮಾಣದ ಜನರು ದೇವಸ್ಥಾನದ ಸುತ್ತ ದೀಡ್ ನಮಸ್ಕಾರ, ಉರುಳುಸೇವೆ ಹಾಕಿ ತಮ್ಮ ಹರಕೆ ಸಲ್ಲಿಸಿದರು. ಅಪಾರ ಜನರು ಮೂಲನಂದೀಶ್ವರ ದೇವರಿಗೆ ರುದ್ರಾಭಿಷೇಕ ಮಾಡಿಸಿ ಕಾಯಿ-ಹಣ್ಣು, ಕರ್ಪೂರ ಸಲ್ಲಿಸಿ ಭಕ್ತಿಯನ್ನು ಸಮರ್ಪಿಸಿದರು. ಇಡೀ ದಿನ ಮೋಡ ಕವಿದ ವಾತಾವರಣವಿತ್ತು. ಆಗಾಗ ಮಳೆ ಬಿಟ್ಟು ಬಿಡದೇ ಬರುತ್ತಿದ್ದರೂ ದೇವಸ್ಥಾನದ ದರ್ಶನಕ್ಕೆ ಕೆಲ ಜನರು ಮಳೆಯಲ್ಲಿಯೇ ನೆನೆದುಕೊಂಡು ಬಂದರೆ ಕೆಲವರು ಛತ್ರಿ ಹಿಡಿದುಕೊಂಡು ಬಂದರು. ಮಧ್ಯಾನ್ಹ ಒಂದು ಗಂಟೆಯಿಂದ ಮೂರು ಗಂಟೆಯಿಂದ ಮಳೆ ವಿರಾಮ ನೀಡಿದ್ದರಿಂದ ದೇವಸ್ಥಾನದಲ್ಲಿ ಹೆಚ್ಚು ಜನರು ಕಂಡುಬಂದರು. ಜಾತ್ರೆಯಂಗವಾಗಿ ಹಾಕಲಾಗಿದ್ದ ವಿವಿಧ ಅಂಗಡಿಗಳಲ್ಲಿ ಮಳೆಯಲ್ಲಿ ಹೋಗಿ ಜನರು ತಮಗೆ ಬೇಕಾದ ವಸ್ತುಗಳನ್ನು ಖರೀದಿ ಮಾಡುವದು ಕಂಡುಬಂದಿತ್ತು. ಅಕ್ಕನಾಗಮ್ಮ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಬಸವನಬಾಗೇವಾಡಿ ಅಭಿವೃದ್ದಿ ಪ್ರಾಧಿಕಾರದಿಂದ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.



## ಕೆಎಲ್‌ಇ ಬಿಸಿಎ ಕಾಲೇಜಿನಲ್ಲಿ ಗಮನ ಸೆಳೆದ ಟೆಕ್ ಮಹೋತ್ಸವ : ಇಂದು ಆಗಮನ-2ಕೆ25

**ಮಹಾಲಿಂಗಪುರ :** ಸ್ಥಳೀಯ ಕೆಎಲ್‌ಇ ಸಂಸ್ಥೆಯ ಬಿಸಿಎ ಕಾಲೇಜಿನಲ್ಲಿ ಇತ್ತೀಚೆಗೆ ಟೆಕ್ ಮಹೋತ್ಸವ ಕಾರ್ಯಕ್ರಮ ಹಮ್ಮಿಕೊಂಡು ವಿದ್ಯಾಥಿರ್ಥಗಳಿಗೆ ನಾನಾ ಸ್ಪರ್ಧೆ ಏರ್ಪಡಿಸಲಾಯಿತು.

ಕ್ವಿಜ್, ಫೋಟೋಗ್ರಾಫಿ, ಬೆಸ್ಟ್ ಔಟ್ ಆಫ್ ವೇಸ್ಟ್, ಮೆಹಂದಿ, ಪೆನ್ಸಿಲ್ ಸ್ಕೆಚ್, ಫ್ಯಾಶನ್ ಶೋ, ಕೋಡಿಂಗ್, ನ್ಯೂಜ್ ಪೇಪರ್ ಕ್ರಾಫ್ಟ್, ಹೇರ್ ಸ್ಟಾಯಿಲ್, ವೆಬ್ ಡಿಸೈನಿಂಗ್, ವಿಡಿಯೋಗ್ರಫಿ, ಫಾಯರ್‌ಲೆಸ್ ಕುಕ್ಕಿಂಗ್ ಸ್ಪರ್ಧೆಗಳಲ್ಲಿ ವಿದ್ಯಾಱರ್ಥಿಗಳು ತಮ್ಮ ಕೌಶಲ್ಯ ಮತ್ತು ಕೈಚಳಕ ಪ್ರದರ್ಶಿಸಿದರು. ಕೆಎಲ್‌ಇ ಪದವಿ ಕಾಲೇಜಿನ ಪ್ರಾಚಾರ್ಯ ಡಾ.ಕೆ. ಎಂ. ಅವರಾದಿ, ಬಿಸಿಎ ಸಂಯೋಜ-ಕ ಶಿವಾನಂದ ಪಾಟೀಲ, ಆನಂದ ಉರಬಿ, ವಿನಾಯಕ ಬಡಿಗೇರ, ಸುಮಾ ಕೆ, ಅಕ್ಷತಾ ಎಚ್, ಶ್ರುತಿ ಕೆ, ಮತ್ತಿತರರು ಇದ್ದರು.



ಇಂದು ಆಗಮನ-2ಕೆ25

ಬಿಸಿಎ ನೂತನ ವಿದ್ಯಾರ್ಥಿಗಳಿಗಾಗಿ ಆ.20ರಂದು ಬುಧವಾರ ಆಗಮನ-2ಕೆ25 ಎಂಬ ಫ್ರೆಶ್ಮರ್ಸ್ ಡೇ ಕಾರ್ಯಕ್ರಮ ಜರುಗಲಿದೆ. ಟೆಕ್ ಮಹೋತ್ಸವ ಸ್ಪರ್ಧೆಗಳಲ್ಲಿ ವಿಜೇತರಿಗೆ ಪ್ರಶಸ್ತಿ ಮತ್ತು ಬಹುಮಾನ ವಿತರಿಸಲಾಗುವುದು. ಬಾಗಲಕೋಟ ವಿಶ್ವವಿದ್ಯಾಲಯ ಉಪಕುಲಪತಿ ಪ್ರೋ.ಆನಂದ ದೇಶಪಾಂಡೆ ಮುಖ್ಯ ಅತಿಥಿಗಳಾಗಿ, ಕೆಎಲ್‌ಇ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಚೇರಮನ್ ಶ್ರೀ ದಯಾನಂದ ಮುನವಳ್ಳಿ ಅಧ್ಯಕ್ಷತೆ ವಹಿಸಲಿದ್ದಾರೆ. ವಿಶೇಷ ಅತಿಥಿಗಳಾಗಿ ಪಾಲಿಟೆಕ್ನಿಕ್ ಪ್ರಾಚಾರ್ಯ ಎಸ್.ಐ.ಕುಂದರಗೋಳ, ಸ್ಥಾನಿಕ ಆಡಳಿತ ಮಂಡಳಿ ಸದಸ್ಯ ಅಶೋಕ ಅಂಗಡಿ, ಸಂತೋಷ ಹುದ್ದಾರ, ಪಿಯು ಪ್ರಾಚಾರ್ಯ ಎಲ್.ಬಿ.ತುಪ್ಪದ, ಉಪಪ್ರಾಂಶುಪಾಲ ಬಿ.ಎನ್. ಅರಕೇರಿ, ಪದವಿ ಪ್ರಾಚಾರ್ಯ ಡಾ.ಕೆ.ಎಂ.ಅವರಾದಿ ಭಾಗವಹಿಸಲಿದ್ದಾರೆ ಎಂದು ಬಿಸಿಎ ಸಂಯೋಜಕ ಶಿವಾನಂದ ಪಾಟೀಲ ಭಾಗವಹಿಸಲಿದ್ದಾರೆ.

# ದೇವರಾಜು ಅರಸು ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಿ



**ರಬಕವಿ-ಬನಹಟ್ಟಿ,** : ಕರ್ನಾಟಕದ ಮಾಜಿ ಮುಖ್ಯಮಂತ್ರಿ ಸಾಮಾಜಿಕ ಕ್ರಾಂತಿಯ ಹ-ರಿಕಾರ ಡಿ.ದೇವರಾಜು ಅರಸರು ಜಾರಿಗೆ ತಂದ ಯೋಜನೆಗಳನ್ನು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸದುಪಯೋಗಪಡಿಸಿಕೊಂಡು ಉತ್ತಮ ಬದುಕು ಸಾಗಿಸಬೇಕು ಎಂದು ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ಅವರು ಬುಧವಾರ ರಬಕವಿ ಬನಹಟ್ಟಿಯ ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದಲ್ಲಿ ಡಿ. ದೇವರಾಜು ಅರಸು ಅವರ 110 ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿನಿಯರು ವಸತಿ ನಿಲಯದಲ್ಲಿರುವ ಸೌಲಭ್ಯಗಳನ್ನು ಬಳಸಿಕೊಂಡು, ಚನ್ನಾಗಿ ಅಧ್ಯಯನ ಮಾಡಿ ಸಮಾಜದ ಮುಖ್ಯ ವಾಹಿನಿಗೆ ಬರಬೇಕು. ಜೀವನದಲ್ಲಿ ಉನ್ನತವಾದ ಗುರಿಯನ್ನು ಹೊಂದಿರಬೇಕು ಎಂದು ತಹಶೀಲ್ದಾರ್ ಗಿರೀಶ ಸ್ವಾದಿ ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಿದ್ದಪ್ಪ ಪಟ್ಟಿಹಾಳ ಮಾತನಾಡಿ, ಇಂದಿನ ಸಮಾಜ ಪ್ರಗತಿಯತ್ತ ಸಾಗಲು ಅರಸರು ಜಾ-ರಿಗೆ ತಂದ ಜನಪರ ಯೋಜನೆಗಳೆ ಕಾರಣವಾಗಿವೆ ಎಂದರು.

ರಬಕವಿ ಬನಹಟ್ಟಿ ನಗರಸಭೆಯ ಅಧ್ಯಕ್ಷೆ ವಿದ್ಯಾ ಧಬಾಡಿ ಡಿ.ದೇವರಾಜು ಅರಸರ ಭಾವಚಿತ್ರಕ್ಕೆ ಪೂಜೆ ನೆರವೇರಿಸಿ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಮಕ್ಕಳು ತಮ್ಮಅನಿಸಿಕೆಗಳನ್ನು ಹಂಚಿಕೊಂಡರು.

ಉಪಾಧ್ಯಕ್ಷೆ ದೀಪಾ ಗಾಡಿವಡ್ಡರ, ನಗರಸಭೆಯ ಅಧಿಕಾರಿ ಎಸ್.ಎಂ.ಬಬಲಾದಿ, ಗ್ರಾಮ ಲೆಕ್ಕಾಧಿಕಾರಿ ಸದಾಶಿವ ಕುಂಬಾರ, ವಸತಿ ನಿಲಯದ ಮೇಲ್ವಿಚಾರಕರಾದ ಮಾರುತಿ ದೊಡ್ಡಮನಿ, ಶಿವಾನಂದ ಮಹಾಬಲ, ಎಂ.ಪಿ.ಜುಂಝುರವಾಡ, ಶಿವಲೀಲಾ ಸಾಬೋಜಿ ಸೇರಿದಂತೆ ಅನೇಕರು ಇದ್ದರು.

****

# ಶ್ರೀ ಜಡಿ ಸಿದ್ದೇಶ್ವರ ಮಠದ ಜಾತ್ರಾ ಮಹೋತ್ಸವ



ನೇಸರಗಿ: ಸಮೀಪದ ಮೇಕಲಮರಡಿ ಗ್ರಾಮದಲ್ಲಿ ಪ್ರತಿವರ್ಷ ಪದ್ಧತಿಯಂತೆ ಶ್ರೀ ಜಡಿ ಸಿದ್ದೇಶ್ವರ ಮಠದ ಕೊನೆಯ ಶ್ರಾವಣ ಮಾಸದ ಸೋಮವಾರದಂದು ಜಾತ್ರಾ ಮಹೋತ್ಸವ ಜರುಗಿತು.

ಸೋಮವಾರದಂದು ಬೆಳಿಗ್ಗೆ ಶ್ರೀ ಜಡೆ ಸಿದ್ದೇಶ್ವರನ ಕರ್ತೃ ಗದ್ದಿಗೆ ಮಹಾ ರುದ್ರಾಭಿಷೇಕ ನಡೆಯಿತು, ಹಾಗೂ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳ ಮುಖಾಂತರ ಉತ್ಸವವು ಜರುಗಿತು. ಮಧ್ಯಾಹ್ನ ಮಹಾಪ್ರಸಾದ ಸೇವೆಯನ್ನು ನಡೆಸಲಾಯಿತು.

ಈ ಸಂದರ್ಭದಲ್ಲಿ ಬಸಯ್ಯ ಹಿರೇಮಠ, ತಮ್ಮಯ್ಯ ಹಿರೇಮಠ, ಕಾರ್ತಿಕ ಹಿರೇಮಠ,ರುದ್ರಪ್ಪ ಕಲ್ಲನ್ನವರ, ಮಹಾಂತೇಶ ಬಡಿಗೇರ,ಈರಪ್ಪ ಕಲ್ಲನ್ನವರ,ಯಲ್ಲನಗೌಡ ಮಾಳನಾಯ್ಕರ, ರಮೇಶ್ ಬಡಿಗೇರ,ಮುದುಕಪ್ಪ ನೇಸರಗಿ, ಬಸವರಾಜ ಬಡಿಗೇರ,ಬಸವರಾಜ್ ಕುರಗುಂದ, ನಿಂಗಪ್ಪ ನಾವಿ, ನಾರಾಯಣ ಮಿರೇಜ್ಕರ,

ಫಕೀರಗೌಡ ಪಾಟೀಲ ಹಾಗೂ ಊರಿನ ಗ್ರಾಮಸ್ಥರು ಹಾಗೂ ಗುರು ಹಿರಿಯರು ಹಾಗೂ ಜಡಿಸಿದ್ದೇಶ್ವರ ಸಕಲ ಸದ್ಭಕ್ತ ಮಂಡಳಿ ಭಾಗವಹಿಸಿದ್ದರು.

# ಪಾಲಕರು ಮಕ್ಕಳ ಭವಿಷ್ಯಕ್ಕೆ ಉತ್ತಮ ಶಿಕ್ಷಣ ಕೊಡಿ : ಬಾಬಾಸಾಹೇಬ ಪಾಟೀಲ



**ನೇಸರಗಿ.** ಮಕ್ಕಳ ಭವಿಷ್ಯಕ್ಕೆ ಪಾಲಕರು ಗುಣಮಟ್ಟದ ಶಿಕ್ಷಣವನ್ನು ಸರ್ಕಾರಿ ಶಾಲೆಗಳಲ್ಲಿ ಪಡೆದು, ಮಕ್ಕಳ ಮುಂದಿನ ಜೀವನದ ಬಗ್ಗೆ ಮೊದಲು ಸರ್ಕಾರಿ ಅಂಗನವಾಡಿ, ಸರ್ಕಾರಿ ಪ್ರಾಥಮಿಕ, ಮುರಾರ್ಜಿ ದೇಸಾಯಿ, ನವೋದಯ ಇನ್ನೂ ಅನೇಕ ಸರ್ಕಾರಿ ಶಾಲೆಗಳಲ್ಲಿ ಉಚಿತ ಶಿಕ್ಷಣ, ಊಟ, ವಸತಿ ಸಿಗುತ್ತಿದ್ದು, ಅದರ ಸದುಪಯೋಗ ಪಡೆದುಕೊಳ್ಳಿ ಎಂದು ಚನ್ನಮ್ಮನ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹೇಳಿದರು.

ಅವರು ಸಮೀಪದ ದೇಶನೂರ ಗ್ರಾಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಯೋಜನೆಯಡಿಯಲ್ಲಿ ನಿರ್ಮಾಣವಾಗಿರುವ ಅಂಗನವಾಡಿ ಶಾಲಾ ನೂತನ ಕಟ್ಟಡ ಮತ್ತು ಸ್ಮಾರ್ಟ್ ಕ್ಲಾಸ ಉದ್ಘಾಟನೆ ನೆರವೇರಿಸಿ ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಮಾಜಿ ಗ್ರಾಮ ಪಂಚಾಯತ ಅಧ್ಯಕ್ಷ ದೀಪಕಗೌಡ ಪಾಟೀಲ, ಗ್ರಾ. ಪಂ ಉಪಾಧ್ಯಕ್ಷರಾದ ಅಬ್ಬಾಸ ಅಲಿ ಫೀರಜಾದೆ, ಅಡಿವಪ್ಪ ಮಾಳಣ್ಣವರ, ಯುವ ಮುಖಂಡ ಸಚಿನ ಪಾಟೀಲ,ಬಸವರಾಜ ಬಾವಿಕಟ್ಟಿ, ಶಿಶು ಅಭಿವೃದ್ಧಿ ತಾಲೂಕಾ ಯೋಜನಾಧಿಕಾರಿ ಎಸ್ ಬಿ ಅರುಣ-ಕುಮಾರ, ಎಇಇ ಮಹೇಶ ಹೊಲಿ,ಬಸವರಾಜ ಕಳಸಣ್ಣವರ, ಚನಗೌಡ ಪಾಟೀಲ,ಮಲ್ಲಿಕಾರ್ಜುನ ಕಲ್ಲೋಳಿ ,ಪ್ರಕಾಶ ಮುಂಗರವಾಡಿ,ಶ್ಯಾನ ರಾಮಣ್ಣವರ, ಸದೆಪ್ಪ ಕಮತಗಿ, ಅಲ್ತಾಪ್ ಅಲನ, ಕಾಶೀನಾಥ ಹಿರೇಮಠ, ಚೇತನ ಪಟ್ಟಣಶೆಟ್ಟಿ, ಈರಣ್ಣ ಶೆಟ್ಟರ, ಡಾ. ಶಶಿಧರ ಬಾಗಲಕೋಟಿ, ಅಯೂಬ್ ಗಣಾಚಾರಿ, ಕಾರ್ಯದರ್ಶಿ ಮಹಾಂತೇಶ ಗಾಣಗಿ, ಸೇರಿದಂತೆ, ಅಂಗನವಾಡಿ ಅಧಿಕಾರಿಗಳು, ಶಿಕ್ಷಕರು, ಕಾರ್ಯಕರ್ತರು, ಮಕ್ಕಳು, ಎಲ್ಲ ಸಮಾಜದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

**ಕಾರವಾರ,** : ಪ್ರಸ್ತ ಸಾಲಿನ ದಸರಾ ಕ್ರೀಡಾಕೂಟದ ಸ್ಪರ್ಧೆಗಳನ್ನು ಪುರುಷ ಮತ್ತು ಮಹಿಳೆಯರಿಗಾಗಿ ತಾಲ್ಲೂಕು, ಜಿಲ್ಲಾ, ವಿಭಾಗ ಹಾಗೂ ರಾಜ್ಯ ಮಟ್ಟದಲ್ಲಿ ಏರ್ಪಡಿಸಲಾಗುತ್ತಿದೆ. ಅದರಂತೆ ಕಾರವಾರ ಹಾಗೂ ಭಟ್ಕಳ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ.

ಭಟ್ಕಳ ತಾಲೂಕು ಮಟ್ಟದ ದಸರಾ ಕ್ರೀಡಾಕೂಟವು ಆ.31 ರಂದು ಭಟ್ಕಳದ ಗೊರಟೆ ಸರಕಾರಿ ಪ್ರೌಢ ಶಾಲೆಯಲ್ಲಿ ನಡೆಯಲಿದ್ದು, ಆ.29 ನೋಂದಣಿಗೆ ಕೊನೆಯ ದಿನವಾಗಿದೆ, ಹಾಗೂ ಕಾರವಾರ ತಾಲೂಕು ಮಟ್ಟದ ಕ್ರೀಡಾಕೂಟವು ಸೆ.1 ರಂದು ಕಾರವಾರ ಮಾಲಾದೇವಿ ತಾಲೂಕು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ನೋಂದಣಿಗೆ ಆ.31 ಕೊನೆಯ ದಿನವಾಗಿದೆ. ತಾಲೂಕು ಮಟ್ಟದಲ್ಲಿ ಅಥ್ಲೇಟಿಕ್ಸ್, ವಾಲಿಬಾಲ್, ಪುಟ್ಬಾಲ್, ಖೋ-ಖೋ, ಕಬ್ಬಡ್ಡಿ ಥ್ರೋಬಾಲ್, ಯೋಗಾಸನವನ್ನು ಆಯೋಜಿಸಲಾಗಿದೆ. ಕ್ರೀಡಾಪಟುಗಳು ಕ್ಯೂಆರ್ ಕೋಡ್ ಅಥವಾ https://dasaracmcup2025.etrpindia.com/KA-sports ಮೂಲಕ ಕಡ್ಡಾಯವಾಗಿ ನೋಂದಣಿ ಮಾಡಿಕೊಂಡು, ನೋಂದಣಿ ಮಾಡಿಕೊಂಡ ಪ್ರತಿಯನ್ನು ಕಡ್ಡಾಯವಾಗಿ ತರತಕ್ಕದ್ದು.

ಹೆಚ್ಚಿನ ಮಾಹಿತಿಗಾಗಿ ಶಿವಾನಂದ ನಾಯ್ಕ, ಅಥ್ಲೆಟಿಕ್ ತರಬೇತುದಾರರು ಮೊ.8722516856 ಹಾಗೂ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಹರಿದೇವ ನಗರ ಹಬ್ಬುವಾಡ, ಕಾರವಾರ, ಮೊಬೈಲ್ ಸಂಖ್ಯೆ: 9480886551 ಇವರನ್ನು ದೂರವಾಣಿ ಮೂಲಕ ಕಛೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏಡ್ಸ್ ಸೋಂಕಿತರಿಗೆ ಸಾಮಾಜಿಕ ಸೌಲಭ್ಯ ಕಲ್ಪಿಸಿ: ಜಿಲ್ಲಾಧಿಕಾರಿ



**ಕೊಪ್ಪಳ** : ಜಿಲ್ಲೆಯಲ್ಲಿರುವ ಹೆಚ್ಐವಿ, ಏಡ್ಸ್ ಸೋಂಕಿತರಿಗೆ ಸಾಮಾಜಿಕ ಸೌಲಭ್ಯಗಳನ್ನು ಮತ್ತು ಸರ್ಕಾರದ ವಿವಿಧ ಇಲಾಖೆಗಳಿಂದ ಕಲ್ಪಿಸಬೇಕಿರುವ ಸೌಲಭ್ಯವನ್ನು ದೊರಕಿಸಲು ಅಧಿಕಾರಿಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳು ಶ್ರಮಿಸಬೇಕು ಎಂದು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದಲ್ಲಿ ಏಕಗವಾಕ್ಷಿ ಮಾದರಿ ಯೋಜನೆ (ಖಟಿರಟಜ ತಿಟಿಜಠಿ ಒಂಜಣಟಜ) ಅಡಿಯಲ್ಲಿ ಹೆಚ್.ಐ.ವಿ. ಸೋಂಕಿತರಿಗೆ ಸಾಮಾಜಿಕ ಸೌಲಭ್ಯಗಳನ್ನು ಒದಗಿಸುವ ಕುರಿತಾದ ಸಮನ್ವಯ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಹೆಚ್ಐವಿ, ಏಡ್ಸ್ ಸೋಂಕಿತರಿಗೆ ಸ್ವಯಂ ಸೇವಾ ಸಂಸ್ಥೆಗಳು ಬೆಂಬಲವಾಗಿ ನಿಂತು, ಅವರಿಗೆ ನೆರವಿನ ಹಸ್ತ ಚಾಚಬೇಕಿದೆ. ಹೆಚ್ಐವಿ, ಏಡ್ಸ್ ಪೀಡಿತರಿಗಾಗಿಯೇ ಸರ್ಕಾರ ಹಲವು ಸೌಲಭ್ಯಗಳನ್ನು ಕಲ್ಪಿಸಿದ್ದು, ಅಂತ್ಯೋದಯ ಅನ್ನ ಪಡಿತರ ಚೀಟಿ, ಮಾಸಾಶನ, ವಸತಿ ಕಲ್ಪಿಸುವುದು, ಉಚಿತ ಚಿಕಿತ್ಸೆ ಹೀಗೆ ವಿವಿಧ ಕಾರ್ಯಕ್ರಮಗಳಿವೆ. ಅವರಿಗೆ ಈ ಎಲ್ಲಾ ಸೌಲ್ಯಭಗಳು ದೊರೆಯುವಂತಾಗಲಿ. ಅಲ್ಲದೇ ಇಂತಹ ಯೋಜನೆಗಳನ್ನು ಅನುಷ್ಠಾನಗೊಳಿಸುವಾಗ ಸಾಮಾಜಿಕ ಹಿತದೃಷ್ಟಿಯಿಂದ ಹೆಚ್ಐವಿ, ಏಡ್ಸ್ ಸೋಂಕಿತರ ವಿವರಗಳ ಗೌಪ್ಯತೆ ಕಾಪಾಡುವುದರ ಬಗ್ಗೆಯೂ ವಿಶೇಷ ಗಮನ ಹರಿಸಬೇಕು ಎಂದರು.

ಜಿಲ್ಲೆಯಲ್ಲಿ ಏಡ್ಸ್ ನಿಯಂತ್ರಣ-ಕ್ಕೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹೆಚ್ಚಿನ ಆದ್ಯತೆ ನೀಡಬೇಕು. ಈ ರೋಗ ಹರಡುವಿಕೆಯ ಬಗ್ಗೆ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ, ಅಂತಹ ಕಡೆಗಳಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ನಿರಂತರವಾಗಿ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಏಡ್ಸ್ ನಿಯಂತ್ರಣಕ್ಕೆ ಕ್ರಮ ವಹಿಸಬೇಕು. ಜಿಲ್ಲೆಯ ಬ್ಲಡ್ ಬ್ಯಾಂಕುಗಳು ಕೆಪಿಎಂಇ ಕಾಯ್ದೆಯಡಿ ಕಡ್ಡಾಯವಾಗಿ ನೋಂದಣಿಯಾಗಿರಬೇಕು. ತಪ್ಪಿದ್ದಲ್ಲಿ ಅಂತಹ ಬ್ಲಡ್ ಬ್ಯಾಂಕುಗಳ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾ-ರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಏಡ್ಸ್ ಮತ್ತು ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಶಶೀಧರ ಅವರು ಮಾತನಾಡಿ, ಅಕ್ಟೋಬರ್ 12ರ ವರೆಗೆ ಎರಡು ತಿಂಗಳುಗಳ ಕಾಲ ಕೊಪ್ಪಳ ಜಿಲ್ಲೆಯಲ್ಲಿ ಹೆಚ್ಐವಿ & ಏಡ್ಸ್ ಅರಿವಿನ ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಬೈಕ್ ರ್ಯಾಲಿ, ಫ್ಲಾಶ್ ಮಾಬ್, ಜಾನಪದ ಕಲಾ ತಂಡಗಳಿಂದ ಜಾಗೃತಿ ಕಾರ್ಯಕ್ರಮ, ವಿಶೇಷ ಆರೋಗ್ಯ ಶಿಬಿರಗಳು, ವಿದ್ಯಾರ್ಥಿಗಳಿಗೆ ರಸಪ್ರಶ್ನೆ, ಮ್ಯಾರಥಾನ್ ಮತ್ತು ರೆಡ್ ರಿಬ್ಬನ್ ಕ್ಲಬ್ ಪದವಿ ಕಾಲೇಜುಗಳಿಂದ ದತ್ತು ಗ್ರಾಮಗಳ ಸ್ವೀಕಾರ ಹಾಗೂ ಸಮಗ್ರ ಆರೋಗ್ಯ ತಪಾಸಣೆ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಕೊಪ್ಪಳ ಜಿಲ್ಲೆಯಲ್ಲಿ 13,943 ಹೆಚ್ಐವಿ ಏಡ್ಸ್ ಸೋಂಕಿತರು ನೋಂದಣಿಯಾಗಿರುತ್ತಾರೆ. ಇದರಲ್ಲಿ 12,113 ಜನರು ಚಿಕಿತ್ಸೆಗೆ ಅರ್ಹರಿದ್ದು, ಸದ್ಯ 6311 ಜನರು ಜಿಲ್ಲೆಯ ಎ.ಆರ್.ಟಿ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು, ಜಿಲ್ಲಾ ಆರ್.ಸಿ.ಎಚ್. ಅಧಿಕಾರಿ ಡಾ.ಪ್ರಾಕಾಶ ವಿ., ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ರವಿಂದ್ರನಾಥ ಎಂ.ಹೆಚ್., ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ನಂದಕುಮಾರ್, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕುಮಾರಸ್ವಾಮಿ ಗೋನಾಳ, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಪ್ರಕಾಶ ಹೆಚ್., ಕಿಮ್ಸ್ ಪ್ರಾಶುಂಪಾಲರಾದ ಡಾ. ನಾರಾಯಣ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ.ಶೆಟ್ಟೆಪ್ಪನವರ್ ಸೇರಿದಂತೆ ಎಲ್ಲಾ ತಾಲೂಕುಗಳ ಆರೋಗ್ಯಾಧಿಕಾರಿಗಳು, ತಜ್ಞವೈದ್ಯರು, ವೈದ್ಯಾಧಿಕಾರಿಗಳು, ವಿವಿಧ ಇತರೆ ಇಲಾಖೆಗಳ ಅಧಿಕಾರಿಗಳು ಉಪಸ್ಥಿತ-ರಿದ್ದರು.

## 23 ರಂದು ಜಿಲ್ಲಾ ಲೇಖಕಿಯರ ಸಂಘದಿಂದ ದತ್ತಿನಿಧಿ ಕಾರ್ಯಕ್ರಮ

**ಬೆಳಗಾವಿ:** ಕನ್ನಡ ಸಾಹಿತ್ಯ ಭವನದಲ್ಲಿ ಜಿಲ್ಲಾ ಲೇಖಕಿಯರ ಸಂಘದ ವತಿಯಿಂದ ದತ್ತಿನಿಧಿ ಕಾರ್ಯಕ್ರಮವನ್ನು 23 ರಂದು ಶನಿವಾರ ಮಧ್ಯಾಹ್ನ 3:30ಕ್ಕೆ ಹಮ್ಮಿಕೊಳ್ಳಲಾಗಿದೆ.

ಲಿಂ. ಕಾಶವ್ವ ಮುರುಗಪ್ಪ ಬುರಲಿಯವರ ಸ್ಮರಣಾರ್ಥ ದತ್ತಿ, ಲಿಂ ವಿಶ್ವನಾಥ ಬೆಲ್ಲದ ಅವರ ಸ್ಮರಣಾರ್ಥ ದತ್ತಿ , ದಿ .ಪಾರ್ವತಿ ರುದ್ರಗೌಡ ಪಾಟೀಲ್ ಮತ್ತು ದಿ. ಮಲ್ಲವ್ವ ಬಸವಣ್ಣೆಪ್ಪ ಅವರುಗಳ ಸ್ಮರಣಾರ್ಥ ದತ್ತಿ ಪ್ರೇಮಾ ಪಾನಶೆಟ್ಟಿ ದತ್ತಿ ಕಾರ್ಯಕ್ರಮದಲ್ಲಿ ಬಾಗಿಯಾಗಲಿದ್ದಾರೆ.

ಸುಮಾ ಕಿತ್ತೂರ ಅಧ್ಯಕ್ಷತೆ ವಹಿಸಲಿದ್ದಾರೆ. ಹಿರಿಯ ಸಾಹಿತಿಗಳಾದ ಸುನಂದ ಎಮ್ಮಿ ( ಜನಪದ ತ್ರಿಪದಿಗಳಲ್ಲಿ ಸೋದರ ಸಂಬಂಧ) ಉಪನ್ಯಾಸ ನೀಡಲಿದ್ದಾರೆ.

ದಾನಿಗಳಾದ ರತ್ನಪ್ರಭಾ ಬೆಲ್ಲದ, ಸುನಂದಾ ಎಮ್ಮಿ, ಆಶಾ ಪಾಟೀಲ್, ಪ್ರೇಮಾ ಪಾನಶೆಟ್ಟಿ ಹಾಗೂ ಗಣ್ಯರು ಆಗಮಿಸಲಿದ್ದಾರೆ.

ದತ್ತಿ ದಾನಿಗಳ ಆಶಯದಂತೆ ಜಾನಪದ ಸಾಹಿತ್ಯದ ವಿವಿಧ ಪ್ರಕಾರಗಳ ಕುರಿತು ಸಂಘದ ಸದಸ್ಯರು ವಿಚಾರ ಮಂಡನೆ ಮಾಡಲಿದ್ದಾರೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಆಶಾ ಎಸ್ ಯಮಕನಮರಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

### ಕನ್ನಡ ಸಾಹಿತ್ಯ ಪರಿಷತ್ತಿನಿಂದ ರಸಪ್ರಶ್ನೆ ಸ್ಪರ್ಧೆ

ಮುದ್ದೇಬಿಹಾಳ: ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಕನ್ನಡದ ಕುರಿತು ರಸಪ್ರಶ್ನೆ ಸ್ಪರ್ಧೆ ಆ.23ರಂದು ಮಧ್ಯಾಹ್ನ 2 ಗಂಟೆಗೆ ಟಾಪ್ ಇನ್ ಟೌನ್ ಸಭಾಂಗಣದಲ್ಲಿ ಸ್ಪರ್ಧೆ ನಡೆಯಲಿದ್ದು, ತಾಲೂಕಿನ ಸರ್ಕಾರಿ, ಅನುದಾನಿತ, ಅನುದಾನರಹಿತ ಪ್ರೌಢಶಾಲಾ ಮುಖ್ಯ ಗುರುಗಳು ತಮ್ಮ ಶಾಲೆಯಿಂದ 3 ವಿದ್ಯಾರ್ಥಿಗಳಿಂದ ಕೂಡಿದ ತಂಡವನ್ನು ಆ.20ರಂದು 5 ಗಂಟೆ ಒಳಗಾಗಿ ಹುಸೇನ್ ಮುಲ್ಲಾ 919731772677 ಸಂಘಟನಾ ಕಾರ್ಯದರ್ಶಿ ಕಸಾಪ ಮುದ್ದೇಬಿಹಾಳ ಇವರ ಹತ್ತಿರ ನೊಂದಣಿ ಮಾಡಿಸಲು ತಿಳಿಸಲಾಗಿದೆ. ಎಂದು ಕಸಾಪ ತಾಲ್ಲೂಕು ಅಧ್ಯಕ್ಷ ಕಾಮರಾಜ ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದಾರೆ.

## ದರಪಟ್ಟಿ ಆಹ್ವಾನ

ಕಾರವಾರ, - ಉತ್ತರ ಕನ್ನಡ ಜಿಲ್ಲೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳಲ್ಲಿ ಸ್ವಚ್ಛತೆಗಾರರನ್ನು ಗುತ್ತಿಗೆ ಆಧಾರದ ಮೇಲೆ ಪೂರೈಸಲು ಅರ್ಹ ಸೇವಾ ಪೂರೈಕೆದಾರರು ಅಥವಾ ಸಂಸ್ಥೆಯಿಂದ ಷರತ್ತಿಗೊಳಪಟ್ಟು ಕೊಟೇಶನ್ ಆಹ್ವಾನಿಸಲಾಗಿದೆ.

ಮುಚ್ಚಿದ ಲಕೋಟೆಯಲ್ಲಿ ದರಪಟ್ಟಿ ಸಲ್ಲಿಸಲು ಆಗಸ್ಟ್ 29 ಕೊನೆಯ ದಿನವಾಗಿದೆ. ಷರತ್ತು ಮತ್ತು ಹೆಚ್ಚಿನ ಮಾಹಿತಿಗಾಗಿ ನ್ಯಾಯಾಲಯದ ಮಾಹಿತಿ ಫಲಕ ಮತ್ತು ಇಲಾಖೆಯ ಅಧಿಕೃತ ಜಾಲತಾಣ **https://uttara-kannada.dcourts.gov.in/** ಅಥ-ವಾ ದೂರವಾಣಿಸಂಖ್ಯೆ: 08382-226325 ಪಡೆಯಬಹುದಾಗಿದೆ ಎಂದು ಉತ್ತರ ಕನ್ನಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ ನೋಂದಣಿಗೆ ಅವಧಿ ವಿಸ್ತರಣೆ

ಕಾರವಾರ, : ಪ್ರಸುತ್ತ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆ (ಖಫಃಅಖಖ) ಯನ್ನು ಉತ್ತರ ಕನ್ನಡ ಜಿಲ್ಲೆಯ ವಿವಿಧ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲಾಗಿರುತ್ತದೆ. ಈ ಸಂಬಂಧ ಬೆಳೆ ಸಾಲ ಪಡೆಯುವ ರೈತರು ವಿಮಾ ಕಂತನ್ನು ಪಾವತಿಸಲು ಆ.30 ರವರೆಗೆ ಅವಧಿಯನ್ನು ವಿಸ್ತರಿಸಲಾಗಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಘಟಪ್ರಭಾ ಹಾಗೂ ಹಿರಣ್ಯಕೇಶಿ ನದಿಯ ದಡದಲ್ಲಿರುವ ಗ್ರಾಮಗಳ ಗ್ರಾಮಸ್ಥರ ಗಮನಕ್ಕೆ**

ಬೆಳಗಾವಿ, : ಹಿಡಕಲ್ (ಘಟಪ್ರಭಾ) ಜಲಾನಯನ ಪ್ರದೇಶದಲ್ಲಿ ಧಾರಕಾರ ಮಳೆ ಆಗುತ್ತಿರುವುದ-ರಿಂದ ಹಿಡಕಲ್ ಜಲಾಶಯಕ್ಕೆ ಭಾರಿ ಪ್ರಮಾಣದಲ್ಲಿ ಒಳಹರಿವು ಹರಿದು ಬರತ್ತಿದೆ, ಇದರಿಂದ ಹಿಡಕಲ್ ಜಲಾಶಯವು ಶೇಕಡಾ 100 ರಷ್ಟು ಭರ್ತಿಯಾಗಿದ್ದು, ಜಲಾಶಯಕ್ಕೆ ಬರುವ ನೀರಿನ ಪ್ರಮಾಣ ಗಣನೀಯವಾಗಿ ಏರತೊಡಗಿದ್ದು, ಒಟ್ಟು 47,800 ಕ್ಯೂಸೆಕ್ಸ್ ನೀರನ್ನು ಯಾವುದೇ ಕ್ಷಣದಲ್ಲಿ ನದಿ ಪಾತ್ರಕ್ಕೆ ಹರಿಬಿಡಲಾಗುವುದು. ಆದ್ದರಿಂದ ಘಟಪ್ರಭಾ ನದಿ ಹಾಗೂ ಹಿರಣ್ಯಕೇಶಿ ನದಿಯ ದಡದಲ್ಲಿ ಬರುವ ಎಲ್ಲ ಗ್ರಾಮಗಳ ಗ್ರಾಮಸ್ಥರು ಹಾಗೂ ತಮ್ಮ ಜಾನುವಾರಗಳ ಸಮೇತ ನದಿಯ ಪಾತ್ರದಿಂದ ಸುರಕ್ಷಿತ ಸ್ಥಳಗಳಿಗೆ ಗ್ರಾಮಸ್ಥರು ತೆರಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಕಡಪಟ್ಟಿ: ಬಸವನ ರಥೋತ್ಸವ ಇಂದು

**ಜಮಖಂಡಿ** : ನಗರಕ್ಕೆ ಹೊಂದಿಕೊಂಡಿರುವ ಕಡಪಟ್ಟಿ ಗ್ರಾಮದ ಪುರಾತನ ಕಾಲದ ಪವಾಡ ಬಸವಣ್ಣ ದೇವಸ್ಥಾನ ಹಲವಾರು ವೈಶಿಷ್ಟ್ಯ ಹೊಂದಿದೆ.

ಈ ಭಾಗದಲ್ಲಿ ಕಡಪಟ್ಟಿ ಬಸವಣ್ಣ ಎಂದು ಹೆಸರುವಾಸಿಯಾಗಿರುವ ಈ ದೇವಸ್ಥಾನ ಐತಿಹಾಸಿಕ ಹಿನ್ನೆಲೆಯನ್ನು ಹೊಂದಿದೆ. ಮಹಾರಾಷ್ಟ್ರ, ಆಂದ್ರಪ್ರದೇಶ ಹಾಗೂ ಕರ್ನಾಟಕದ ವಿವಿಧ ಭಾಗಗಳಿಂದ ಭಕ್ತರು ದರ್ಶನಕ್ಕೆ ಬರುತ್ತಾರೆ.

ಪವಾಡ ಬಸವಣ್ಣನ ಪೌರಾಣಿಕ ಇತಿಹಾಸ : ಕೊಣ್ಣೂರ ದೇಸಾಯಿಯವರ ಮನೆತನದ ತೋಟದಲ್ಲಿ ಒಂದು ಹುತ್ತ ಇತ್ತು ಪ್ರತಿನಿತ್ಯ ಗೋಮಾತೆಯು ಆ ಹುತ್ತಕ್ಕೆ ಹಾಲನ್ನು ಕೊಡುತ್ತಿದ್ದು, ತೋಟದಲ್ಲಿನ ಕೆಲಸ ಮಾಡುತ್ತಿದ್ದ ರೈತ ಇದನ್ನು ನೋಡಿ ಈ ವಿಷಯವನ್ನು ದೇಸಾಯಿ ಅವ-ರಿಗೆ ತಿಳಿಸಿದನು. ಹುತ್ತಿನಲ್ಲಿ ಏನಿದೆ ಎಂದು ಅಗೆಯಲು ಹೇಳಿದಾಗ ಅಲ್ಲಿ ನಂದಿಯ ಉದ್ಭವ ಮೂರ್ತಿ ನೋಡಿ ದೇಸಾಯಿಯವರು ಹಾಗೂ ಗ್ರಾಮದ ಜನ ಚಕಿತರಾದರು, ಈ ಪವಾಡ ದೃಶ್ಯವನ್ನು ಕಂಡ ಜನರು ಶ್ರೀ ಪವಾಡ ಬಸವಣ್ಣ ಎಂಬ ನಾಮ ಸ್ಮರಣೆಯಿಂದ ಪುರಾತನ ಪುಣ್ಯಕ್ಷೇತ್ರವಾಯಿತು.

ಆದಿಲ್ ಶಾಹಿ ಕನಸಿನಲ್ಲಿ ಬಂದ ಪವಾಡ ಬಸವಣ್ಣ : ವಿಜಯಪುರದ ಆದಿಲ್ ಶಾಹಿ ಅಂಟುರೋಗದಿಂದ ಬಳಲುತ್ತಿದ್ದನು, ಅವನ ಕನಸಿನಲ್ಲಿ ಪವಾಡ ಬಸವಣ್ಣ ಬಂದು ನನ್ನ ಗುಡಿ ಕಟ್ಟಿ ಪೂಜೆ ನೀರನ್ನು ಮೈಗೆ ಹಚ್ಚಿಕೊಂಡರೆ ನಿನ್ನ ರೋಗ ವಾಸಿಯಾಗುತ್ತದೆ ಎಂದು ಬಸವಣ್ಣ ಕನಸಿನಲ್ಲಿ ಹೇಳುತ್ತಾನೆ. ಇದರಿಂದ ಆದಿಲ್ ಶಾಹಿ ಯು ತನ್ನ ಕನಸಿನಲ್ಲಿ ಕಂಡಂತೆ ಕಡಪಟ್ಟಿಯಲ್ಲಿ ಬಸವಣ್ಣನ ಗುಡಿ ಕಟ್ಟಲು ಪ್ರಾರಂಭಿಸಿದನು, ಅದಕ್ಕೆ ಜಾಗವನ್ನು ದೇಸಾಯಿ ಮನೆತನದವರು ನೀಡಿದರು, ಇದರಿಂದ ಆದಿಲ್ ಶಾಹಿಯು ರೋಗದಿಂದ ಮುಕ್ತನಾದನು,ಇದರಿಂದ ಪವಾಡ ಬಸವಣ್ಣನ ಎಂದು ಪ್ರಸಿದ್ಧಿ ಪಡೆಯಿತು ಎಂದು ಜನಪದ ಗೀತೆಗಳು ಹೇಳುತ್ತವೆ.



ಬೆಳಗಾವಿಯ ರಾಮಣ್ಣವರ್ ಮನೆತನದ ಅಜ್ಜಿಗೆ ಕಣ್ಣು ಕಾಣುತ್ತಿರಲಿಲ್ಲ ,ಕಡಪಟ್ಟಿಯ ಪವಾಡ ಬಸವೇಶ್ವರ ದೇವಸ್ಥಾನಕ್ಕೆ ಬಂದು ಹರಕೆ ಕಟ್ಟಿಕೊಳ್ಳುತ್ತಾರೆ, ಮನೆಗೆ ಹೋಗುವುದರೊಳಗೆ ಅಜ್ಜಿಗೆ ಕಣ್ಣುಗಳು ಬಂದವೆ ಎಂದು ಜನಪದ ಗೀತೆಗಳು ಹೇಳುತ್ತವೆ.

ಶ್ರೀ ಪವಾಡ ಬಸವಣ್ಣ ದೇವಸ್ಥಾನ ಸುಮಾರು 11 ನೇ ಶತಮಾನದಲ್ಲಿ ಕೂಡಲ ಸಂಗಮದಿಂದ ಜಂಗಮ ವಂಶಸ್ಥರು ಪೂಜಾ ಕಾರ್ಯಗಳನ್ನು ನೆರವೇರಿಸುತ್ತಾ ಬಂದಿದ್ದಾರೆ. ಬಹುಶಃ ಇಲ್ಲಿಯವರೆಗೂ ಸುಮಾರು 40 ಮನೆತನಗಳಾಗಿವೆ, ಹೀಗೆ ಜಮಖಂಡಿ ಪಟವರ್ಧನ ಸಂಸ್ಥಾನದಿಂದ, ಕೋಣ್ಣೂರು ದೇಸಾಯಿ ಮನೆತನದಿಂದ ಪೂಜಾ ಕಾರ್ಯ ನೆರವೇರಿಸಲ್ಪಟ್ಟಿದೆ.


ಕಡಪಟ್ಟಿಯ ಶ್ರೀ ಪವಾಡ ಬಸವಣ್ಣ ರೈತರ ಆಶಾಕಿರಣ ಸುತ್ತಮುತ್ತಲಿನ ಹಳ್ಳಿಗಳ ಮಳೆ, ಬೆಳೆಯ ಸಮೃದ್ಧಿಯ ಪ್ರತೀಕ,ರೈತರ ದನಗಳ ಆರೋಗ್ಯ ಕಾಪಾಡುವ ಭಾಗ್ಯವಂತ, ಪ್ರತಿ ರೈತರ ಮನೆಯಲ್ಲಿಯೂ ಹೈನವನ್ನು ಉಣಬಡಿಸುವ ಅನ್ನದಾತ ಕಡಪಟ್ಟಿಯ ಶ್ರೀ ಪವಾಡ ಬಸವಣ್ಣ.

ಶ್ರಾವಣಮಾಸದ ಕೊನೆಯ ಸೋಮವಾರ ರಾತ್ರಿ ಜಮಖಂಡಿಯ ಕಾಡಸಿದ್ದೇಶ್ವರ ಪಲ್ಲಕ್ಕಿ ಆಗಮಿಸಿದ ನಂತರ ಜಾತ್ರೆ ಪ್ರಾರಂಭವಾಗುತ್ತದೆ. ಮಂಗಳವಾರ ಮತ್ತು ಬುಧವಾರ ಪಲ್ಲಕ್ಕಿ ಉತ್ಸವ, ಗುರುವಾರ ಬೆಳಿಗ್ಗೆ 11ಕ್ಕೆ ಬೆಳ್ಳಿಯ ಆಭರಣದ ರಥ-ೋತ್ಸವ, ಸಂಜೆ 6ಕ್ಕೆ ಬಂಗಾರದ ಆಭರಣದ ರಥೋತ್ಸವ ಜರುಗುತ್ತದೆ. ವಿಶೇಷವಾಗಿ ರಥೋತ್ಸವವನ್ನು ಭಕ್ತರು ಹೊತ್ತುಕೊಂಡು ಹೋಗುತ್ತಾರೆ.

ಶ್ರಾವಣ ಮಾಸದಲ್ಲಿ ಪ್ರತಿ ಸೋಮವಾರ ಕಡಕೋಳ, ಮೈಗೂರ, ಮುತ್ತೂರ, ಆಲಬಾಳ, ಕಂಕನವಾಡಿ ಗ್ರಾಮದ ಭಕ್ತರು ಕೃಷ್ಣಾ ನದಿಯಿಂದ ನೀರು ತಂದ ನಂತರ ಪೂಜೆಯನ್ನು ಮಾಡಲಾಗುವದು. ಸಂಕ್ರಮಣದ ದಿನ ಕೃಷ್ಣಾ ನದಿಸ್ನಾನ, ಶಿವರಾತ್ರಿ ದಿನ ರಾತ್ರಿ ಭಜನೆ ನಡೆಯುತ್ತದೆ. ಕಾರ್ತಿಕೋತ್ಸವದ ದಿನ ವಿಶೇಷವಾಗಿ ದೀಪಾಲಂಕಾರ ಮಾಡಲಾಗುವುದು. ಭಕ್ತರು ಹರಕೆ ಹೊತ್ತಾಗ ಬುತ್ತಿಪೂಜೆಯನ್ನು ಮಾಡಲಾಗುವುದು ಎಂದು ಅರ್ಚಕ ಗುರುಲಿಂಗ ಆಲಬಾಳಮಠ ಹೇಳಿದರು.

**ಲಿಂಗಾಯತ ಮಹಿಳಾ ಸಮಾಜದಿಂದ ಅರಿಶಿಣ ಕುಂಕುಮ ಕಾರ್ಯಕ್ರಮ**

# ಅರಿಶಿಣ ಕುಂಕುಮ ನಮ್ಮ ಸಂಸ್ಕೃತಿ ಯ ಪ್ರತೀಕ: ಬಸವಾನಂದ ಶ್ರೀ



**ಬೆಳಗಾವಿ:** ಅರಿಶಿಣ ಕುಂಕುಮ ನಮ್ಮ ಸಂಸ್ಕೃತಿ ಯ ಪ್ರತೀಕ ಇಂತಹ ಕಾರ್ಯಕ್ರಮ ಮೂಲಕ ನಮ್ಮ ಸಂಸ್ಕೃತಿಯ ಸಕಾರಾತ್ಮಕ ಮೌಲ್ಯವನ್ನು ಪಸರಿಸುವ ಕಾರ್ಯವಾಗುತ್ತಿದೆ ಎಂದು ಧಾರವಾಡದ ಮನಗುಂಡಿಂ-ಯ ಚನ್ನಯ್ಯಗಿರಿಯ ಶ್ರೀ ಗುರುಬಸವ ಮಹಾಮನೆಯ ಶ್ರೀ ಬಸವಾನಂದ ಮಹಾಸ್ವಾಮಿಗಳು ಹೇಳಿದರು.

ಇಲ್ಲಿನ ಲಿಂಗಾಯತ ಭವನದಲ್ಲಿ ಬುಧವಾರ 20 ರಂದು ಲಿಂಗಾಯತ ಮಹಿಳಾ ಸಮಾಜದ ವತಿಯಿಂದ ಆಯೋಜಿಸಲಾದ ಸಂತ ವಾಣಿ ಮತ್ತು "ಶ್ರಾವಣ ಮಾಸದ ಅರಿಶಿಣ ಕುಂಕುಮ" ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಅರಿಶಿಣ ಕುಂಕುಮದ ಮಹತ್ವ ವಿವರಿಸಿದರು.

ಭಾರತೀಯ ಸಂಸ್ಕೃತಿಯಲ್ಲಿ ಸ್ತ್ರೀಯರಿಗೆ, ಹೆಣ್ಣಿಗೆ ಬಹಳ ಮಹತ್ವ ಪೂರ್ಣವಾದ ಸ್ಥಾನವನ್ನು ನೀಡಿ ಗೌರವಿಸಲಾಗುತ್ತಿದೆ. ಅದರಂತೆ ಶ್ರಾವಣ ಮಾಸದ ನಿಮಿತ್ತ ಲಿಂಗಾಯತ ಮಹಿಳಾ ಸಮಾಜದ ವತಿಯಿಂದ ಅರ್ಥಪೂರ್ಣವಾದ ಕಾರ್ಯಕ್ರಮ ಆಯೋಜಿಸಿರುವುದು ಒಳ್ಳೆಯ ಕಾರ್ಯವಾಗಿದೆ ಎಂದು ಹಾರೈಸಿದರು. ಶ್ರಾವಣ ಮಾಸದಲ್ಲಿ ಮಹಿಳೆಯರನ್ನು ಸಂಘಟಿಸುವ ಉದ್ದೇಶದಿಂದ ಸಾಮೂಹಿಕ ಅರಿಶಿಣ ಕುಂಕುಮ ಆಯೋಜನೆ, ಅರಿಶಿಣ ರೋಗ ನಿರೋಧಕ ಮಾತ್ರವಲ್ಲದೇ ಚರ್ಮದ ಕಾಂತಿ ಹೆಚ್ಚಿಸುತ್ತದೆ. ಅರಿಶಿಣ ಬಾಹ್ಯವಾಗಿ ಹಾಗೂ ಆಂತರಿಕವಾಗಿಯೂ ಸೇವಿಸುವುದರಿಂದ ದೇಹದಲ್ಲಿನ ಕಲ್ಮಶಗಳನ್ನು ಹೊರ ಹಾಕುವ ಕೆಲಸ ಮಾಡುತ್ತದೆ ಈ ಕಾರ್ಯಕ್ರಮ ನಿರಂತರವಾಗಿ ನಡೆಯಲಿ. ಅಲ್ಲದೇ ಮಹಿಳೆಯರು ಸಂಘಟಿತರಾಗುವಂತೆ ಅವರು ಶ್ರೀಗಳು ಕರೆ ನೀಡಿದರು.

ಯಾರನ್ನು ದ್ವೇಷಿಸದೇ ಸರ್ವರಿಗೂ ಒಳಿತನ್ನು ಬಯಿಸಿ, ಅಪ್ಪಿಕೊಳ್ಳುವುದು ಧರ್ಮವೇ ಲಿಂಗಾಯತ ಧರ್ಮವು. ದಯೆಯಿಲ್ಲದ ಧರ್ಮವನ್ನು ಕಲ್ಪಿಸಿಕೊಳ್ಳುವುದೂ ಸಾಧ್ಯವಿಲ್ಲ.

ಒಂದು ವೇಳೆ ಅಂಥ ಧರ್ಮವಿದ್ದರೂ ಅದು ಪ್ರಯೋಜನಕಾರಿಯಾದ ಧರ್ಮವಲ್ಲ. ಈ ಕಾರಣಕ್ಕಾಗಿಯೇ ಬಸವಣ್ಣನವರು 'ದಯವಿಲ್ಲದ ಧರ್ಮ ಅದೇವುದಯ್ಯ?' ಎಂದು ಕೇಳುತ್ತಾರೆ. ದಯೆ ಇಲ್ಲದ ಧರ್ಮವು ಏನು ತಾನೆ ಮಾಡಬಲ್ಲುದು? ದಯೆ ಇಲ್ಲದೆ ತಾವು ಧರ್ಮಿಗಳೆಂದು ಬಡಾಯಿ ಕೊಚ್ಚಿಕೊಳ್ಳುವವರನ್ನು ಭಗವಂತನೂ ಮೆಚ್ಚಲಾರನು. ಆದ್ದರಿಂದ ದಯವೇ ಧರ್ಮದ ಮೂಲವೆಂದು ಅವರು ಸ್ಪಷ್ಟಪಡಿಸುತ್ತಾರೆ ಎಂದು ಶ್ರೀಗಳು ಹೇಳಿದರು. ಇತರರ ದುಃಖಗಳನ್ನು ಕಂಡು ಸಂತಸಪಡುವುದು ಮನಸ್ಸಿನ ಮನುಷ್ಯನಲ್ಲ, ಸಹಾಯ-ಸಹಕಾರ ನೀಡುವವರೇ ನಿಜ ಮನುಷ್ಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಲಿಂಗಾಯತ ಮಹಿಳಾ ಸಮಾಜದ ಗೌರವ ಅಧ್ಯಕ್ಷರಾದ ಶೈಲಜಾ ಬಿಂಗೆ ರತ್ನಪ್ರಭಾ ಬೆಲ್ಲದ ಜ್ಯೋತಿ ಬದಾಮಿ ಶೈಲಾ ಪಾಟೀಲ್ ಆಶಾ ಪಾಟೀಲ್ ಸುರೇಖಾ ಮಾನ್ವಿ ಅನುರಾಧ ಭಾಗಿ ಅಧ್ಯಕ್ಷೇ ಮಧುಮತಿ ಹಿರೇಮಠ, ಕಾರ್ಯದರ್ಶಿ ರಕ್ಷಾ ದೇಗಿನಾಳ, ಸಹ ಕಾರ್ಯದರ್ಶಿ ಸರೋಜಾ ನಿಶಾನ್ದಾರ ಹಾಗೂ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :167, Postal Reg No. PMG/KA/NK/BM/135/25-27 / POST AT Vantamury Colony Post Office